ಬೆಂಗಳೂರು ಸಂಪುಟ: 16 ಸಂಚಿಕೆ: 17 ಪುಟ: 06 ಶುಕ್ರವಾರ 06-12-2024 Mail: mussanje2010@gmail.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)
Executive Editor: L P Babu
Honourary Editor: Venkatesh



ಲಂಗ ದಾವಣಿಯಲ್ಲಿ ಕಾಣಿಸಿಕೊಂಡ ಮೇಘಾಶೆಟ್ಟಿ

ಯಾವ ಕವಿಯೂ ಬರೆಯದ ಕವಿತೆ ನೀನಾಗು

ಸುದೀಪ್‌ಗೆ ಪ್ರಿನ್ಸಿಪಾಲರ ಪತ್ರ! ಪುಟ 6

## "ಮೋದಿ-ಅದಾನಿ ಭಾಯಿ ಭಾಯಿ"; "ಮೋದಿ ಅದಾನಿ ಏಕ್ ಹೈ"

# ಕಪ್ಪು ಮಾಸ್ಕ್ ಧರಿಸಿ ಪ್ರತಿಭಟನೆ

## ಅದಾನಿ ವಿರುದ್ಧ ಮೋದಿ ಅವರೇ ತನಿಖೆ ನಡೆಸಬೇಕು: ರಾಹುಲ್ ಗಾಂಧಿ

**ದೆಹಲಿ:** ಗೌತಮ್ ಅದಾನಿ ದೋಷಾರೋಪ ಪಟ್ಟಿಗೆ ಸಂಬಂಧಿಸಿದಂತೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ವಯನಾಡ್ ಸಂಸದ ಮತ್ತು ಸಹೋದರಿ ಪ್ರಿಯಾಂಕಾ ಮತ್ತು ಇತರ ವಿರೋಧ ಪಕ್ಷದ ನಾಯಕರು ಶುಕ್ರವಾರ ಸಂಸತ್ತಿನ ಹೊರಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಸಂವಿಧಾನವನ್ನು ಕೈಯಲ್ಲಿ ಹಿಡಿದುಕೊಂಡು, ಕೆಲವು ವಿರೋಧ ಪಕ್ಷದ ನಾಯಕರು "ಮೋದಿ-ಅದಾನಿ ಭಾಯಿ ಭಾಯಿ" ಎಂದು ಹೇಳುವ ಮುಖವಾಡಗಳನ್ನು ಧರಿಸಿದ್ದರು. ಇಂದು ಸಂಸತ್ತು ಪುನರಾರಂಭವಾಗುತ್ತಿದ್ದಂತೆ, ಆವರಣದಲ್ಲಿ ಅದಾನಿ ವಿಷಯಕ್ಕೆ ಸಂಬಂಧಿಸಿದಂತೆ ಪ್ರತಿಭಟನೆ ನಡೆಸಲಾಯಿತು.

ಅದಾನಿ ವಿವಾದಕ್ಕೆ ಸಂಬಂಧಿಸಿದಂತೆ ನಾಟಕೀಯ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಸಂಸದರು ಇಂದು ಸಂಸತ್ತಿನಲ್ಲಿ "ಮೋದಿ ಅದಾನಿ ಏಕ್ ಹೈ" (ಮೋದಿ ಮತ್ತು ಅದಾನಿ ಒಂದೇ) ಎಂಬ ಘೋಷಣೆಯನ್ನು ಹೊಂದಿರುವ ಜಾಕೆಟ್‌ಗಳನ್ನು ಧರಿಸಿ ಪ್ರತಿಭಟನೆ ನಡೆಸಿದರು.

ಬಿಲಿಯನೇರ್ ಗೌತವ್ ಅದಾನಿ ಮತ್ತು ಅವರ ಸೋದರಳಿಯ ಯುಎಸ್ ಪ್ರಾಸಿಕ್ಯೂಟರ್‌ಗಳು ಮಾಡಿದ ಲಂಚ ಮತ್ತು ವಂಚನೆಯ ಆರೋಪಗಳ ಕುರಿತು ಜಂಟಿ ಸಂಸದೀಯ ಸಮಿತಿ ತನಿಖೆಯ ಬೇಡಿಕೆಯನ್ನು ಸಾರ್ವಜನಿಕರ ಗಮನಕ್ಕೆ ತರಲು ಸಾಂಕೇತಿಕ ಪ್ರತಿಭಟನೆಯನ್ನು ನಡೆಸಲಾಯಿತು



ಪ್ರತಿಭಟನೆ ವೇಳೆ ಮಾಧ್ಯಮಗಳ ಮುಂದೆ ಮಾತನಾಡಿದ ರಾಹುಲ್ ಗಾಂಧಿ, ಅದಾನಿ ವಿರುದ್ಧ ಅಧಿಕೃತ ತನಿಖೆ ನಡೆಸಲು ಪ್ರಧಾನಿ ಮೋದಿಗೆ ಅವಕಾಶ ನೀಡಲಾಗುವುದಿಲ್ಲ. ಅಂದರೆ ಮೋದಿ ಅವರೇ ತನಿಖೆ ನಡೆಸಬೇಕು. ಪುಟ 2

## ರೆಪೋ; ಬದಲಾವಣೆ ಇಲ್ಲ

**ಮುಂಬೈ:** ಭಾರತೀಯ ರಿಸರ್ವ್ ಬ್ಯಾಂಕ್ 'ತಟಸ್ಥ' ಹಣಕಾಸು ನೀತಿಯ ನಿಲುವನ್ನು ಮುಂದುವರಿಸಲು ನಿರ್ಧರಿಸಿದೆ ಎಂದು ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್ ತಿಳಿಸಿದ್ದಾರೆ.

ಹಣಕಾಸು ನೀತಿಗಳ ಸಭೆಯ ನಂತರ ಸುದ್ದಿಗೋಷ್ಠಿ ನಡೆಸಿರುವ ಗವರ್ನರ್ ಶಕ್ತಿಕಾಂತ ದಾಸ್ ಈ ನಿರ್ಧಾರವನ್ನು 4:2ರ ಬಹುಮತದಿಂದ ಕೈಗೊಳ್ಳಲಾಗಿದೆ. ಸತತ 11 ನೇ ಅವಧಿಗೂ ರೆಪೊ ದರವನ್ನು ಶೇಕಡಾ 6.5ಕ್ಕೆ ಬದಲಾಯಿಸದೇ ಮುಂದುವರೆಸಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.



ಸ್ಥಾಯಿ ಠೇವಣಿ ಸೌಲಭ್ಯ (ಎಸ್‌ಡಿಎಫ್) ದರವು ಶೇಕಡಾ 6.25 ರಷ್ಟೇ ಇರಲಿದೆ. ಬ್ಯಾಂಕ್ ದರದೊಂದಿಗೆ ಮಾರ್ಜಿನಲ್ ಸ್ಟ್ಯಾಂಡಿಂಗ್ ಫೆಸಿಲಿಟಿ (ಎಂಎಸ್‌ಎಫ್) ದರವು ಶೇಕಡಾ 6.75 ರಷ್ಟಿದೆ ಎಂದು ಶಕ್ತಿಕಾಂತ್ ದಾಸ್ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು. ಭಾರತದ ಆರ್ಥಿಕ ಪಥವನ್ನು ಪ್ರತಿಬಿಂಬಿಸಿದ ಗವರ್ನರ್ 2025ನೇ ಆರ್ಥಿಕ ವರ್ಷಕ್ಕಾಗಿ ಪರಿಷ್ಕೃತ ಉಆಕ ಬೆಳವಣಿಗೆಯ ಪ್ರಕ್ಷೇಪಣವನ್ನು ಕೂಡಾ ಬಹಿರಂಗಪಡಿಸಿದರು.

ದೇಶದ ಜಿಡಿಪಿ ದರದ ಬೆಳವಣಿಗೆ ಹೀಗಿದೆ; 2024-25 ರ ನೈಜ ಜಿಡಿಪಿ ಬೆಳವಣಿಗೆ ಅಂದರೆ ಪ್ರಸಕ್ತ ವರ್ಷ ಶೇ 6.6ರಷ್ಟು ಜಿಡಿಪಿ ಇದ್ದು, ಅದು ಮೂರನೇ ತ್ರೈಮಾಸಿಕದಲ್ಲಿ ಶೇ 6.8 ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಶೇ 7.2ರಷ್ಟು ಬೆಳವಣಿಗೆ ಸಾಧಿಸಿದೆ. ಅದೇ 2025-26 ರ ಮೊದಲ ತ್ರೈಮಾಸಿಕದಲ್ಲಿ ನೈಜ ಉಆಕ ಬೆಳವಣಿಗೆ ಶೇ 6.9ರಷ್ಟು ಇದೆ. ಮತ್ತು 2025-26 ರ ಎರಡನೇ ತ್ರೈಮಾಸಿಕದಲ್ಲಿ ಇದು ಶೇ 7.3 ಪ್ರತಿಶತ ಇದೆ ಎಂದು ಅಂದಾಜಿಸಲಾಗಿದೆ ಎಂದರು. ಪುಟ 2

## ಚಳಿಗಾಲದ ಅಧಿವೇಶನ: ಬೆಳಗಾವಿ-ಬೆಂಗಳೂರು ನಡುವೆ ವಿಶೇಷ ವಿಮಾನ

ಬೆಂಗಳೂರು: ಡಿಸೆಂಬರ್ 9 ರಿಂದ ಬೆಳಗಾವಿಯ ಸುವರ್ಣಸೌಧದಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗುತ್ತಿದ್ದು, ಅಧಿವೇಶನದಲ್ಲಿ ಪಾಲ್ಗೊಳ್ಳುವ ಶಾಸಕರು ಮತ್ತು ಅಧಿಕಾರಿಗಳಿಗೆ ಅನುಕೂಲಕ್ಕಾಗಿ ಬೆಳಗಾವಿ - ಬೆಂಗಳೂರು ನಡುವೆ ವಿಶೇಷ ವಿಮಾನ ಸಂಚರಿಸಲಿದೆ.

ಇಂಡಿಗೋ ಏರ್‌ಲೈನ್ಸ್ ಡಿಸೆಂಬರ್ 9 ರಿಂದ 19 ರವರೆಗೆ ಬೆಂಗಳೂರು ಮತ್ತು ಬೆಳಗಾವಿ ನಡುವೆ ವಿಶೇಷ ಏರ್‌ಬಸ್ o320 ವಿಮಾನ ಸಂಚರಿಸಲಿದೆ ಎಂದು ಘೋಷಿಸಿದೆ. ವೇಳಾಪಟ್ಟಿಯ ಪ್ರಕಾರ, ಇಂಡಿಗೋ ವಿಮಾನ ಬೆಂಗಳೂರು ವಿಮಾನ ನಿಲ್ದಾಣದಿಂದ ಬೆಳಗ್ಗೆ 6 ಗಂಟೆಗೆ ಹೊರಟು ಬೆಳಗ್ಗೆ 7 ಗಂಟೆಗೆ ಬೆಳಗಾವಿ ಪುಟ 2

## ವರದಿ ಬಂದ ಬಳಿಕ ಕ್ರಮ ಕೈಗೊಳ್ಳಲಾಗುತ್ತೆ : ಸಿಎಂ ಸಿದ್ದರಾಮಯ್ಯ

**ಬೆಂಗಳೂರು :** ಬಳ್ಳಾರಿಯಲ್ಲಿ ಬಾಣಂತಿಯರ ಸಾವು ಪ್ರಕರಣಕ್ಕೆ ಸಂಬಂಧಪಟ್ಟಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದು, ಈಗಾಗಲೇ ಪ್ರಕರಣದ ಕುರಿತು ತನಿಖೆ ನಡೆಯುತ್ತಿದ್ದು, ಈ ಕುರಿತು ಸಭೆ ಮಾಡಿದ್ದೇನೆ. ಡ್ರಗ್ಸ್ ಕಂಟ್ರೋಲರ್ ಅಧಿಕಾರಿಯನ್ನು ಸಸ್ಪೆಂಡ್ ಮಾಡಿದ್ದೇನೆ ಎಂದು ತಿಳಿಸಿದರು. ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಪ್ರಕರಣದ ಸಂಬಂಧಪಟ್ಟಂತೆ ತನಿಖೆ ನಡೆಯುತ್ತಿದೆ. ಯಾವ ಕಾರಣಕ್ಕೆ ಸಾವು ಆಗಿದೆ ಎಂಬುದರ ಬಗ್ಗೆ ತನಿಖೆ ನಡೆಯುತ್ತಿದೆ. ಈಗಾಗಲೇ ಕೆಲ ಅಧಿಕಾರಿಗಳನ್ನು ಪುಟ 2

## ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಮತ್ತೋರ್ವ ಬಾಣಂತಿ ಸಾವು

**ಬಳ್ಳಾರಿ:** ಇಲ್ಲಿನ ಜಿಲ್ಲಾಸ್ಪತ್ರೆಯಲ್ಲಿ ಸಿಸೇರಿಯನ್ ಗೆ ಒಳಗಾಗಿದ್ದ ಮತ್ತೋರ್ವ ಬಾಣಂತಿ ಚಿಕಿತ್ಸೆಗೆ ಸ್ಪಂದಿಸದೇ ಗುರುವಾರ ರಾತ್ರಿ ಸಾವನ್ನಪ್ಪಿದ್ದಾರೆ. ಕೂಡ್ಲಗಿಯ ಸುಮಯಾ (25) ಮೃತ ಬಾಣಂತಿ ಎಂದು ತಿಳಿದು ಬಂದಿದೆ.ಸುಮಯಾ ಕಳೆದ 22 ದಿನಗಳಿಂದ ಬಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಇದರೊಂದಿಗೆ ಜಿಲ್ಲಾಸ್ಪತ್ರೆಯಲ್ಲಿ ಮೃತಪಟ್ಟ ಬಾಣಂತಿಯರ ಸಂಖ್ಯೆ 5ಕ್ಕೆ ಏರಿದೆ. ಜಿಲ್ಲಾಸ್ಪತ್ರೆಯಲ್ಲಿ ಸಿಸೇರಿಯನ್ ಮಾಡಿಸಿಕೊಂಡ ಬಳಿಕ ಸುಮಯಾ ಆರೋಗ್ಯದಲ್ಲಿ ಏರುಪೇರು ಕಂಡುಬಂದಿತ್ತು. ಹೀಗಾಗಿ, ಅವರನ್ನು ನ.12ರಂದು ಜಿಲ್ಲಾಸ್ಪತ್ರೆಯಿಂದ ಬಿಮ್ಸ್‌ಗೆ ಪುಟ 2



ಸಂಸತ್ ಭವನದ ಆವರಣದಲ್ಲಿ ನಡೆದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ಮಹಾ ಪರಿನಿರ್ವಾಣ ದಿನ ಕಾರ್ಯಕ್ರಮದಲ್ಲಿ ಉಪ ರಾಷ್ಟ್ರಪತಿ ಜಗದೀಪ ಧನಕರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಪಾಲ್ಗೊಂಡು ಆ ಮಹಾನ್ ಚೇತನಕ್ಕೆ ನಮನ ಸಲ್ಲಿಸಿದರು. ಮಾಜಿ ರಾಷ್ಟ್ರಪತಿ ರಾಮನಾಥ ಕೋವಿಂದ್, ಲೋಕಸಭೆ ಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆ ಉಪ ಸಭಾಪತಿ ಹರಿವಂಶ ನಾರಾಯಣ

## ಬಸವಣ್ಣ, ಬುದ್ಧನ ನಂತರ ಸಮಾನತೆಗೆ ಹೋರಾಡಿದವರು ಅಂಬೇಡ್ಕರ್

**ಬೆಂಗಳೂರು :** ಡಿಸೆಂಬರ್ - 06: ದೇಶದಲ್ಲಿ ಬಸವಣ್ಣ, ಬುದ್ಧನ ನಂತರ ಸಮಾನತೆಗಾಗಿ ಹೋರಾಡಿದವರು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವಿಧಾನಸೌಧ ದ ಮುಂಭಾಗ ಇರುವ ಸಂವಿಧಾನಶಿಲ್ಪಿ ಭಾರತ ರತ್ನ ಮಹಾ ಮಾನವತಾವಾದಿ ಬಾಬಾ ಸಾಹೇಬ್ ಡಾ ಟಟ ಬಿ ಆರ್ ಅಂಬೇಡ್ಕರ್ ರವರ 68ನೇ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮಾಧ್ಯಮ ದವರೊಂದಿಗೆ ಮಾತನಾಡಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪರಿನಿರ್ವಾಣ ದಿನದಂದು ಪುಷ್ಪಾರ್ಚನೆ ಮೂಲಕ ಅವರನ್ನು



ಗೌರವಿಸುವ ಕೆಲಸವನ್ನು ಸರ್ಕಾರ ಮಾಡಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು 1956 ಡಿಸೆಂಬರ್ 6 ರಂದು ನಮ್ಮನ್ನೆಲ್ಲಾ ಅಗಲಿದರು. ಆ ದಿನವನ್ನೇ ಪರಿನಿರ್ವಾಣ ದಿನಾಚರಣೆ ಎಂದು ಆಚರಿಸಲಾಗುತ್ತದೆ ಎಂದರು ಪುಟ 2

## ಬಾಣಂತಿಯರ ಸಾವು; ತಪ್ಪಿದ್ರೆ ರಾಜೀನಾಮೆ ಕೊಡಲು ಸಿದ್ಧ

**ಬೆಂಗಳೂರು:** ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸರಣಿ ಸಾವು ಪ್ರಕರಣದಲ್ಲಿ ನನ್ನ ತಪ್ಪಿದ್ದರೇ ರಾಜೀನಾಮೆ ಕೊಡಲು ಸಿದ್ಧ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು. ಬಳ್ಳಾರಿ ಬಿಮ್ಸ್ ನಲ್ಲಿ ಬಾಣಂತಿ ಸುಮಯಾ ಬಾನು ನಿನ್ನೆ ಸಾವನ್ನಪ್ಪಿದ್ದು ಬಾಣಂತಿಯರ ಸರಣಿ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಪ್ರಕರಣದಲ್ಲಿ ನನ್ನ ತಪ್ಪಿದ್ರೆ ರಾಜೀನಾಮೆ ಕೊಡಲು ಸಿದ್ಧ. ಬಿಜೆಪಿಯವರು ಖಂಡಿತ ದೂರು ಕೊಡಲಿ ಪುಟ 2

## ಐದು ಗ್ಯಾರಂಟಿ ರದ್ದುಗೊಳಿಸುವ ಪ್ರಯತ್ನ ನಡೆಯುತ್ತಿದೆ

.ಬೆಂಗಳೂರು, ಡಿಸೆಂಬರ್ 06: ಕೇಂದ್ರ ಬಿಜೆಪಿ ಸರ್ಕಾರ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಮೇಲೆ ಟೀಕೆ ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಿ ರಾಜ್ಯದ ಮಹಿಳೆಯರಿಗೆ ಸಿಗುವ ಎರಡು ಸಾವಿರ, ಅನ್ನಭಾಗ್ಯ ಯೋಜನೆ ಅಕ್ಕಿ ಹಣ, 200 ಯೂನಿಟ್ ಉಚಿತ ವಿದ್ಯುತ್, ನಿರುದ್ಯೋಗಿ ಯುವಕರ ನಿರುದ್ಯೋಗ ಭತ್ಯೆಯನ್ನು ಕಸಿಯಲು ಪ್ರಯತ್ನಿಸುತ್ತಿದೆ ಎಂದು ರಣದೀಪ್ ಸಿಂಗ್ ಸುರ್ಜೆವಾಲ ಅವರು ಹೇಳಿದರು.



ಈ ಕುರಿತು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಮಾತನಾಡಿ, ಬಿಜೆಪಿ ಅವರು ಕೇವಲ ಸಿದ್ದರಾಮಯ್ಯ ಹಾಗೂ ಶಿವಕುಮಾರ್ ಅವರ ಮೇಲೆ ಮಾತ್ರ ದಾಳಿ ಮಾಡುತ್ತಿಲ್ಲ. ಕರ್ನಾಟಕದ ಬಡವರು, ಕಾರ್ಮಿಕರು, ರೈತರು, ಪರಿಶಿಷ್ಟರ ಮೇಲೆ ದಾಳಿ ಮಾಡುತ್ತಿದೆ. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಬಡವರ ಜೇಬಿಗೆ ನೇರವಾಗಿ ಹಣ ಹೋಗುತ್ತಿದೆ ಎಂದು ಹೇಳಿದರು. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಪುಟ 2

## ರಾಜ್ಯಸಭೆಯಲ್ಲಿ ಸೀಟಿನಡಿ ನೋಟುಗಳ ಬಂಡಲ್ ಪತ್ತೆ; ತನಿಖೆಗೆ ಆದೇಶ.!

**ನವದೆಹಲಿ:** ರಾಜ್ಯಸಭೆಯಲ್ಲಿ ಕಾಂಗ್ರೆಸ್ ಸಂಸದ 'ಅಭಿಷೇಕ್ ಸಿಂಘ್ವಿ' ಸೀಟಿನಡಿ 500 ರೂ ನೋಟುಗಳ ಬಂಡಲ್ ಪತ್ತೆಯಾಗಿದ್ದು, ತನಿಖೆಗೆ ಆದೇಶಿಸಲಾಗಿದೆ. ಕಾಂಗ್ರೆಸ್ ಸಂಸದ ಅಭಿಷೇಕ್ ಮನು ಸಿಂಘ್ವಿ ಅವರಿಗೆ ನಿಯೋಜಿಸಲಾದ ಆಸನ ಸಂಖ್ಯೆ 222 ರಲ್ಲಿ ನೋಟುಗಳ ಬಂಡೆಲ್ ಪತ್ತೆಯಾಗಿದ್ದು, ಕರೆನ್ಸಿ ನೋಟುಗಳನ್ನು ವಶಪಡಿಸಿಕೊಂಡಿರುವ ಬಗ್ಗೆ ಸದನಕ್ಕೆ ರಾಜ್ಯಸಭಾ ಅಧ್ಯಕ್ಷ ಜಗದೀಪ್ ಧನ್ಕರ್ ಮಾಹಿತಿ ನೀಡಿದರು. ತಪಾಸಣೆಯ ಸಮಯದಲ್ಲಿ, ಭದ್ರತಾ ಅಧಿಕಾರಿಗಳು ಪ್ರಸ್ತುತ ತೆಲಂಗಾಣವನ್ನು ಪ್ರತಿನಿಧಿಸುವ ಅಭಿಷೇಕ್ ಮನು ಸಿಂಘ್ವಿ ಅವರಿಗೆ ನಿಗದಿಪಡಿಸಿದ ಪುಟ 2

## ಯುರೋಪಿಯನ್ ಒಕ್ಕೂಟಕ್ಕಿಂತ ದುಪ್ಪಟ್ಟು ಜನಸಂಖ್ಯೆಗೆ ಪಡಿತರ ಪೂರೈಕೆ

**ನವದೆಹಲಿ:** ಭಾರತ, ಯುರೋಪಿಯನ್ ಒಕ್ಕೂಟಕ್ಕಿಂತ ದುಪ್ಪಟ್ಟು ಜನಸಂಖ್ಯೆಗೆ ಉಚಿತ ಪಡಿತರ ಪೂರೈಸುತ್ತಿದೆ ಎಂದು ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

"ಅನ್ನ ಚಕ್ರ" ಹೊಸ ಪೋರ್ಟಲ್ ಗೆ ಚಾಲನೆ ನೀಡಿ ಮಾತನಾಡಿ, ಭಾರತ ಪ್ರತಿ ತಿಂಗಳು 2.20 ಲಕ್ಷ ಕೋಟಿ ಮೌಲ್ಯದ ಉಚಿತ ಆಹಾರ ಧಾನ್ಯ ನೀಡುತ್ತಿದೆ ಎಂದು ಹೇಳಿದರು. ಕೇಂದ್ರ ಸರ್ಕಾರ ದೇಶದ 80 ಕೋಟಿ ಬಡವರಿಗೆ 2028ರವರೆಗೆ ಉಚಿತ ಪಡಿತರ ಯೋಜನೆ ವಿಸ್ತರಿಸಿದೆ. ಅಲ್ಲದೇ, ಪ್ರಸ್ತುತದಲ್ಲಿ ಕೆಲ ಫಲಾನುಭವಿಗಳು 1- 3 ಕೆಜಿ ಅತ್ಯಲ್ಪ ಬೆಲೆಯಲ್ಲಿ ಪ್ರತಿ ತಿಂಗಳು ಪಡಿತರ




ಧಾನ್ಯ ಪಡೆಯುತ್ತಿದ್ದಾರೆ ಎಂದು ಹೇಳಿದರು.

3 ಲಕ್ಷ ಕೋಟಿ ಮೌಲ್ಯದ ಸೋರಿಕೆ ತಡೆ: ಕಆಖ ನಲ್ಲಿ ಡಿಜಿಟಲೀಕರಣದಿಂದ ಭ್ರಷ್ಟಾಚಾರ ನಿರ್ಮೂಲನೆ ಜತೆಗೆ 3 ಲಕ್ಷ ಕೋಟಿ ಮೌಲ್ಯದ ಸೋರಿಕೆಯನ್ನು ತಡೆಯಲಾಗುತ್ತಿದೆ ಎಂದು ಹೇಳಿದರು ಸಚಿವ ಜೋಶಿ.

ಪ್ರಧಾನಿ ನರೇಂದ್ರ ಮೋದಿ ಅವರ ನಿರ್ದೇಶನದಂತೆ ನಾವಿಂದು ಪ್ರತಿ ಕ್ಷೇತ್ರ, ಹಂತದಲ್ಲೂ ಭ್ರಷ್ಟಾಚಾರ ನಿಗ್ರಹಕ್ಕಾಗಿ ಡಿಜಿಟಲ್ ಗೆ ಪರಿವರ್ತನೆ ಹೊಂದುತ್ತಿದ್ದೇವೆ. ಇದರಿಂದ ಕಾರ್ಯದಕ್ಷತೆ ಹೆಚ್ಚುವುದಲ್ಲದೆ, ಸೋರಿಕೆ ಮತ್ತು ಸಮಯದ ಉಳಿತಾಯವಾಗುತ್ತದೆ. ತ್ವರಿತ ಕಾರ್ಯಾಚರಣೆ ಸಾಧ್ಯವಾಗುತ್ತದೆ ಎಂದು ಪ್ರತಿಪಾದಿಸಿದರು. ಪುಟ 2

# ದೇಶ ಕಂಡ ಮಹಾನ್ ವ್ಯಕ್ತಿ ಅಂಬೇಡ್ಕರ್



**ಬೆಂಗಳೂರು:** ಯುವ ಸಮುದಾಯಕ್ಕೆ ತಮ್ಮ ಚಿಂತನೆಗಳಿಂದಲೇ ಸ್ಪೂರ್ತಿ ಹಾಗೂ ಆದರ್ಶ ವ್ಯಕ್ತಿ ಯನಿಸಿಕೊಂಡ ದೇಶ ಕಂಡ ಮಹಾನ್ ವ್ಯಕ್ತಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ರವರು ಎಂದು ಶಾಸಕ ಕೆ ಗೋಪಾಲಯ್ಯನವರು ಬಣ್ಣಿಸಿದರು.

ಕಮಲಾನಗರ ಕಸ್ತೂರಿ ಬಡಾವಣೆಯಲ್ಲಿ ಹಮ್ಮಿಕೊಂಡಿದ್ದ ಡಾ ಬಿ ಆರ್ ಅಂಬೇಡ್ಕರ್ ಅವರ ಪರಿನಿರ್ವಾಣ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಶಾಸಕರು ಅಂಬೇಡ್ಕರ್ ಅವರು ಸಮಾಜ ಸುಧಾರಕರಾಗಿದ್ದು, ದಲಿತ ಬೌದ್ಧ ಚಳುವಳಿಯನ್ನು ಮುನ್ನಡೆಸುವ ಮೂಲಕ ಪ್ರೇರಣೆಯಾದ ವ್ಯಕ್ತಿಯಾಗಿದ್ದರು, ಅದಲ್ಲದೆ ಭೀಮರಾವ್ ರಾಮ್ ಜಿ ಅಂಬೇಡ್ಕರ್ ಅವರು ದಲಿತ ಕುಟುಂಬದಲ್ಲಿ ಜನಿಸಿದ್ದರಿಂದ ಅಸ್ಪೃಶ್ಯತೆ ನೋವು ಮಾತ್ರ ಇವರನ್ನು ಬಿಡಲಿಲ್ಲ. ಹೀಗಾಗಿ ಅಂಬೇಡ್ಕರ್ ಅವರು ಮಹಿಳೆಯರ ಹಕ್ಕುಗಳು, ಶೋಷಿತ ವರ್ಗಗಳ ಹಕ್ಕಿಗಾಗಿ ಹೋರಾಟದ ಮಹಾನ್ ವ್ಯಕ್ತಿ ಡಿಸೆಂಬರ್ 6ರಂದು ಅಂಬೇಡ್ಕರ್ ಅವರ ಪುಣ್ಯ ತಿಥಿಯಾಗಿದ್ದು ಈ ದಿನವನ್ನು ಮಹಾಪರಿನಿರ್ವಾಣ ದಿನವನ್ನಾಗಿ ಆಚರಿಸಲಾಗುತ್ತದೆ.

ಅಂಬೇಡ್ಕರ್ ಅವರು ಭಗವಾನ್ ಬುದ್ಧನಂತೆಯೋ ಪ್ರಭಾವಶಾಲಿಯಾದ ವ್ಯಕ್ತಿ. ಶುದ್ಧ ಮನಸ್ಸಿನ ಹಾಗೂ ದೇವರಿಂದ ಆಶೀರ್ವಾದ ಹೊಂದಿದವರು. ಸಮಾಜದಲ್ಲಿನ ಅವರ ಮಹಾನ್ ಕಾರ್ಯಗಳಿಂದಾಗಿ ಅವರಿಗೆ ಯಾವುದೇ ಕರ್ಮದ ಋಣ ಉಳಿದಿಲ್ಲ ಎಂದು ನಂಬಿದ್ದ ಕಾರಣ ಅಂಬೇಡ್ಕರ್ ಅವರ ಪುಣ್ಯತಿಥಿಯನ್ನು ಮಹಾಪರಿ ನಿರ್ವಾಣ ದಿನ ಅಥವಾ ದಿವಸ್ ಎಂದು ಕರೆದರು ಅಂದಿನಿಂದ ಡಾಕ್ಟರ್ ಬಿ ,ಆರ್ ಅಂಬೇಡ್ಕರ್ ಅವರ ಪುಣ್ಯತಿಥಿಯನ್ನು ಮಹಾಪರಿ ನಿರ್ವಾಣ ದಿನವನ್ನಾಗಿ ಆಚರಿಸಲಾಗುತ್ತಿದೆ ಈ ದಿನದಂದು ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಭಾರತೀಯ ಸಂವಿಧಾನ ಪಿತಾಮಹ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರುಗಳಾದ ಡಾಬಾ ಶ್ರೀನಿವಾಸ್ ,ಜಯಸಿಂಹ ದಲಿತ ಮುಖಂಡರುಗಳಾದ ಸ್ವಾಮಿ, ಕಸ್ತೂರಿನಾರಾಯಣ್, ಕಸ್ತೂರಿ ರವಿ, ಗೋವಿಂದ್ ರಾಜ್ ಮಾದಿಹಳ್ಳಿ ಮುಂತಾದವರಿದ್ದರು.

## ಜಿಲ್ಲಾ-ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ

# ಜೆಡಿಎಸ್-ಬಿಜೆಪಿ ಸಮನ್ವಯತೆ



**ನವದೆಹಲಿ:** ಮುಂಬರುವ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ರಾಜ್ಯದಲ್ಲಿ ಜೆಡಿಎಸ್ - ಬಿಜೆಪಿ ಪರಸ್ಪರ ಸಮನ್ವಯತೆಯಿಂದ ಕೆಲಸ ಮಾಡುವ ನಿಟ್ಟಿನಲ್ಲಿ ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ರಾಜ್ಯ ಬಿಜೆಪಿ ಉಸ್ತುವಾರಿಗಳಾದ ರಾಧಾಮೋಹನ್ ದಾಸ್ ಅಗರ್ವಾಲ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆ ಹಾಗೂ ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿ ಎನ್ ಡಿಎ ಮೈತ್ರಿಕೂಟವನ್ನು ಮತ್ತಷ್ಟು ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಅಗತ್ಯ ಸಲಹೆ-ಸೂಚನೆ ಪಡೆದುಕೊಳ್ಳಲು ನಿಖಿಲ್ ಅವರು ಸೋಮವಾರ ಗೃಹ ಸಚಿವರಾದ ಅಮಿತ್ ಶಾ ಅವರನ್ನು ಭೇಟಿ ಮಾಡಲಿದ್ದಾರೆ.

ಈಗಾಗಲೇ ಗೃಹ ಸಚಿವರು ಸೋಮವಾರ ತಮ್ಮನ್ನು ಭೇಟಿಯಾಗುವಂತೆ ನಿಖಿಲ್ ಅವರಿಗೆ ಸಮಯ ನೀಡಿದ್ದು, ಅದಕ್ಕೆ ಪೂರ್ವಭಾವಿಯಾಗಿ ಅವರು ನವದೆಹಲಿಯಲ್ಲಿ ರಾಧಾ ಮೋಹನ್ ದಾಸ್ ಅಗರ್ವಾಲ್ ಅವರನ್ನು ಶುಕ್ರವಾರ ಭೇಟಿಯಾಗಿ ಮಾತುಕತೆ ನಡೆಸಿದರು.

ಕಳೆದ ಲೋಕಸಭೆ ಚುನಾವಣೆಯಲ್ಲಿ ಜೆಡಿಎಸ್ ಬಿಜೆಪಿ ಮೈತ್ರಿಕೂಟ ಕಾಂಗ್ರೆಸ್ ಪಕ್ಷದ ವಿರುದ್ಧ ಪ್ರಬಲ ಹೋರಾಟ ನಡೆಸಿ ಉತ್ತಮ ಫಲಿತಾಂಶ ಸಾಧಿಸಿದೆ. ಜನತೆ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ನಂಬಿಕೆ ಇರಿಸಿದ್ದಾರೆ. ಇದನ್ನು ಉಳಿಸಿ ಬೆಳೆಸಿಕೊಂಡು ಹೋಗುವ ನಿಟ್ಟಿನಲ್ಲಿ ಒಟ್ಟಾಗಿ ಕೆಲಸ ಮಾಡುವ ಅಗತ್ಯ ಇದೆ ಎಂದು ನಿಖಿಲ್ ಅವರು ರಾಧಾ ಮೋಹನ್ ದಾಸ್ ಅಗರ್ವಾಲ್ ಅವರಿಗೆ ಹೇಳಿದ್ದಾರೆ.



**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಭಾರತ ರತ್ನ ಡಾ. ಬಿ.ಆರ್.ಅಂಬೇಡ್ಕರ್‌ರವರ 68ನೇ ವರ್ಷದ ಮಹಾ ಪರಿನಿಬ್ಬಾಣ ದಿನಾಚರಣೆ ಅಂಗವಾಗಿ ಪಾಲಿಕೆ ಕೇಂದ್ರ ಕಛೇರಿಯ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ರವರು ಮಾಲಾರ್ಪಣೆ ಮಾಡಿ ಪುಷ್ಪನಮನ ಅರ್ಪಿಸಿದರು. ಈ ವೇಳೆ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಡಾ. ಕೆ ಹರೀಶ್ ಕುಮಾರ್, ಉಪ ಆಯುಕ್ತರಾದ ಮಂಜುನಾಥ ಸ್ವಾಮಿ, ಜಂಟಿ ಆಯುಕ್ತರಾದ ಲಕ್ಷ್ಮಿ ದೇವಿ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.**

## ಪಾಂಡವಪುರದಲ್ಲಿ 24 ಗಂಟೆಗಳ ಹ್ಯಾಕಥಾನ್

**ಬೆಂಗಳೂರು:** ರೈತ ನಾಯಕ ಹಾಗೂ ಮಾಜಿ ಶಾಸಕ ದಿವಂಗತ ಪುಟ್ಟಣ್ಣಯ್ಯ ಫೌಂಡೇಶನ್ ವತಿಯಿಂದ ಇದೇ ಡಿ.7 ಮತ್ತು 8ರ ಶನಿವಾರ ಮತ್ತು ಭಾನುವಾರ ರಾಜ್ಯಮಟ್ಟದ ಹ್ಯಾಕಥಾನ್ ನ್ನು (ಈಖಓ-ಂ-ಖಿಊಔಓ)

ಮಂಡ್ಯ ಜಿಲ್ಲೆ ಪಾಂಡವಪುರದ ವಿಜಯ ಶಿಕ್ಷಣ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ.

ದಿವಂಗತ ಪುಟ್ಟಣ್ಣಯ್ಯ ಅವರ ಪುತ್ರ ಹಾಗೂ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ಗುರುವಾರ ಬೆಂಗಳೂರು ಪ್ರೆಸ್ ಕ್ಲಬ್ ನಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.ಡಿ.7ರ ಶನಿವಾರ ಬೆಳಗ್ಗೆ 9 ಗಂಟೆಯಿಂದ ಡಿ.8ರ ಭಾನುವಾರ 9 ಬೆಳಗ್ಗೆ 9 ಗಂಟೆವರೆಗೆ 24 ಗಂಟೆಯ ಹ್ಯಾಕಥಾನ್ ನಡೆಯಲಿದೆ ಎಂದು ಅವರು ತಿಳಿಸಿದರು. ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳ ಸೃಜನಶೀಲತೆ ಮತ್ತು ಸಹಕಾರವನ್ನು ಉತ್ತೇಜಿಸಲು ಅವಕಾಶ ನೀಡಲಾಗುವುದು ಎಂದು ಅವರು ಹೇಳಿದರು.ಗ್ರಾಮೀಣ ಸಮುದಾಯಗಳನ್ನು ಆಧುನಿಕ ಪರಿಹಾರೋಪಾಯಗಳ ಮೂಲಕ ಶಕ್ತಿ ನೀಡಿ ಅವರ ಜೀವನ ಮಟ್ಟವನ್ನು ಮೇಲ್ದರ್ಜೆಗೇರಿಸುವ ಪ್ರಯತ್ನ ಇದಾಗಿದೆ ಎಂದೂ ಅವರು ಹೇಳಿದರು. ಪರಿವರ್ತನೆಗೆ ನಾಂದಿ ಹಾಡುವ ಈ ಕಾರ್ಯಕ್ರಮವೂ ರಾಜ್ಯದ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಮತ್ತು ವೃತ್ತಿಪರರ ಸೃಜನಶೀಲತೆ ಮತ್ತು ಪ್ರತಿಭೆಯನ್ನು ಬಳಸಿಕೊಂಡು ಗ್ರಾಮೀಣ ಭಾರತದಲ್ಲಿ ಆರ್ಥಿಕ ಸಾಕ್ಷರತೆಯನ್ನು ನೀಡುವ, ಪ್ರಚಾರ ಪಡಿಸುವ ಉದ್ದೇಶವನ್ನು ಹೊಂದಿದೆ ಎಂದು ದರ್ಶನ್ ಪುಟ್ಟಣ್ಣಯ್ಯ ವಿವರಿಸಿದರು.

## ಚುನಾವಣೆಯಲ್ಲಿ ನಮ್ಮ ಗೆಲುವು ಶತಸಿದ್ಧ



**ಬೆಂಗಳೂರು:** ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಕಾರಿ ಸಮಿತಿ ಚುನಾವಣೆಯಲ್ಲಿ ರಾಜ್ಯ ಪರಿಷತ್ತಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಶೋಭರಾಣಿ ಎನ್. ಶ್ರೀನಿವಾಸ ನಾಯಕ ಎ.ಪ್ರತೀಪ್, ರಮೇಶ್ ಪಿ.ಎಂ,ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಶ್ರೀದರ್ ಎಂ.ಕೆ.ಟಿ.ಸುರೇಶ್ ಬಾಬು ಆಯ್ಕೆಯಾಗಿದ್ದಾರೆ.

ಚುನಾವಣೆಯಲ್ಲಿ ವಿಜೇತ ರಾದ ಅಭ್ಯರ್ಥಿಗಳನ್ನು ಅಭಿನಂದಿಸಿ, ಪ್ರಮಾಣ ಪತ್ರ ವಿತರಿಸಿ ಮಾತನಾಡಿದ, ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ, ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾಧ್ಯಕ್ಷ ರಾಜ್ಯ ಪರಿಷತ್ ಚುನಾವಣೆಯಲ್ಲಿ ನಮ್ಮ ಪರವಾಗಿ ಉತ್ತಮ ಫಲಿತಾಂಶ ಬಂದಿದ್ದು ಗೆದ್ದಿರುವ ನಮ್ಮ ತಂಡದ ಅಭ್ಯರ್ಥಿಗಳು ಜಯಶೀಲರಾಗಿದ್ದಾರೆ, ಡಿ. 27ರಂದು ನಡೆಯಲಿರುವ ರಾಜ್ಯಾಧ್ಯಕ್ಷ ನಮ್ಮ ಗೆಲುವು ಶತಸಿದ್ದ ಇದರಲ್ಲಿ ಅನುಮಾನ ಬೇಡ ಎಂದು ಹೇಳಿದರು.

## ಕರ್ನಾಟಕ ಪ್ರತಿಭಾವರ್ಧಕ ಆಕಾಡೆಮಿಯಿಂದ ಕನ್ನಡ ಸುವರ್ಣ ಸಂಭ್ರಮ

# ನ್ಯಾ.ಶಿವರಾಜ್‌ಪಾಟೀಲ್ ದಂಪತಿಗಳಿಗೆ ಸನ್ಮಾನ



**ಬೆಂಗಳೂರು:** ಕರ್ನಾಟಕ ಪ್ರತಿಭಾವರ್ಧಕ ಆಕಾಡೆಮಿಯಿಂದ ಕರ್ನಾಟಕ ಸುವರ್ಣ ಸಂಭ್ರಮ ಸಮಾರಂಭ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಿತು.

ನಿಡುಮಾಮಡಿ ಮಠದ ವೀರಭದ್ರ ಚನ್ನಮಲ್ಲ ಸ್ವಾಮೀಜಿ, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಶಿವರಾಜ್ ಪಾಟೀಲ್,ಬೇಲಿ ಮಠದ ಶಿವಾನುಭವ ಚರಮೂರ್ತಿ ಸ್ವಾಮೀಜಿ,87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷರಾದ ಗೊ.ರು.ಚನ್ನಬಸಪ್ಪ ಕಾರ್ಯಕ್ರಮ ಉದ್ಘಾಟಿಸಿದರು.ದಾಂಪತ್ಯ ಜೀವನದಲ್ಲಿ ಆರು ದಶಕಗಳನ್ನು ಪೂರೈಸಿರುವ ಸುಪ್ರೀಂ ಕೋರ್ಟ್ ನ ನಿವೃತ್ತ ನ್ಯಾಯಮೂರ್ತಿ ಶಿವರಾಜ್ ಪಾಟೋಲ್ ಅವರ ದಂಪತಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಶಾಸ್ತ್ರೀಯ ಸಂಗೀತ ಕ್ಷೇತ್ರದ ಶರಣ ಸಾಹಿತ್ಯದ ಹಿರಿಯ ಐಎಎಸ್ ಅಧಿಕಾರಿ ಡಾ.ಸೋಮಶೇಖರ್, ವಿದ್ವಾನ್ ಡಾ.ಆರ್.ಕೆ.ಪದ್ಮನಾಭ,ಸಂಗೀತ ಕಲಾ ಆಕಾಡೆಮಿ ಅಧ್ಯಕ್ಷರಾದ ಶುಭ ಧನಂಜಯ, ಡಾ.ಜಿ.ಬಾಬು, ಬಸವಕುಮಾರ್ ಸ್ವಾಮೀಜಿ, ಆರ್. ವೆಂಕಟಚಲಪತಿ,ಸಹಕಾರ ಇಲಾಖೆಯ ಲಕ್ಷ್ಮೀ ಪತ್ತಯ್ಯ, ಗೋವಿಂದ ಬಾಬು ಪೂಜಾರಿ, ಟಿ.ಜಗದೀಶ್, ಡಾ.ನಕ್ಷತ್ರ, ಡಾ.ಕೆ.ಸೆಲ್ವಿರಾಜು ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಈಶಾ ಯೋಗ ಕೇಂದ್ರದಲ್ಲಿ ಮಣ್ಣು ದಿನ




**ಚಿಕ್ಕಬಳ್ಳಾಪುರ:** ತಾಲ್ಲೂಕಿನಅವಲಗುರ್ಕಿ ಬಳಿಯ ಈಶಾ ಯೋಗ ಕೇಂದ್ರದಲ್ಲಿ ಗುರುವಾರ ವಿಶ್ವ ಮಣ್ಣುದಿನದ ಕಾರ್ಯಕ್ರಮ ಆಚರಿಸಲಾಯಿತು.ಮಣ್ಣು ದಿನದ ಅಂಗವಾಗಿ ವಿವಿಧ ಚಟುವಟಿಕೆಗಳು ನಡೆದವು.

ಸದ್ಗುರು ಜಗ್ಗಿ ವಾಸುದೇ□□□ವರು ಪ್ರಾರಂಭಿಸಿದ 'ಮಣ್ಣು ಉಳಿಸಿ' ಅಂದೋಲನದಆಶ್ರಯದಲ್ಲಿ ಈ ಕಾರ್ಯಕ್ರಮವನ್ನು ಸಂಘಟಿಸಲಾಗಿತ್ತು. ಸ್ವಯಂ ಸೇವಕರು ಮಣ್ಣು ಉಳಿಸಿ ಎನ್ನುವವಿವಿಧ ಸಂದೇಶಗಳನ್ನು ಹೊಂದಿರುವ ಫಲಕಗಳನ್ನು ಹಿಡಿದಿದ್ದರು. ಮಣ್ಣು ದಿನದ ಕಾರ್ಯಕ್ರಮವು ಯೋಗ ಕೇಂದ್ರದಲ್ಲಿ ಶಿಕ್ಷಣ,ಸ್ಫೂರ್ತಿ ಮತ್ತು ಸಮುದಾಯದ ಸಹಭಾಗಿತ್ವದ ಸಂಗಮ ಎನ್ನುವ ರೀತಿಯಲ್ಲಿ ನಡೆಯಿತು. ಜೀವನವನ್ನು ರೂಪಿಸಿಕೊಳ್ಳುವಲ್ಲಿ ಮಣ್ಣಿನ ನಿರ್ಣಾಯಕ ಪಾತ್ರದ ಬಗ್ಗೆ ಸಂಪನ್ಮೂಲ ವ್ಯಕ್ತಿಗಳು ಮಾತನಾಡಿದರು.

ಮಣ್ಣಿನ ಜಾಗೃತಿ ಕೌಂಟರ್ ತೆರೆಯಲಾಗಿತ್ತು. ಮಣ್ಣಿನ ಮನೆಯ ಸೇರಿದಂತೆ ವಿವಿಧ ಮಾದರಿಗಳನ್ನು ಪ್ರದರ್ಶಿಸಲಾಯಿತು. ಲಯ ಮತ್ತು ಶಕ್ತಿಯನ್ನು ಬಿಂಬಿಸುವ ಮಣ್ಣು ಉಳಿಸಿ ನೃತ್ಯವು ಗಮನ ಸೆಳೆಯಿತು. ವಿವಿಧ ಶಾಲೆಗಳ ಮಕ್ಕಳು ಮತ್ತು ಈಶಾ ಸ್ವಯಂ ಸೇವಕರು ಮಣ್ಣು ದಿನದ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಮೊದಲ ಪುಟದಿಂದ

### ಕಪ್ಪು ಮಾಸ್ಕ್ ಧರಿಸಿ ಪ್ರತಿಭಟನೆ

ಮೋದಿ ಮತ್ತು ಅದಾನಿ ಇಬ್ಬರಲ್ಲ; ಅವರು ಒಂದು." ಪ್ರಧಾನಿ ಮತ್ತು ಅದಾನಿ ನಡುವಿನ ನಿಕಟ ಸಂಬಂಧವು ಪಾರದರ್ಶಕತೆ ಮತ್ತು ಆಡಳಿತದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಅವರು ಹೇಳಿದರು.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ದೇಶದ್ರೋಹಿ ಎಂದು ಬಿಜೆಪಿ ಮಾಡಿರುವ ಹೇಳಿಕೆಗೆ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಪ್ರತಿಕ್ರಿಯಿಸಿದ್ದು, ತನ್ನ ಸಹೋದರನಿಗೆ ದೇಶಕ್ಕಿಂತ ದೊಡ್ಡದು ಯಾವುದೂ ಇಲ್ಲ ಎಂದು ಹೇಳಿದರು.

ಆಡಳಿತ ಪಕ್ಷದವರು ಏನೇ ಹೇಳಿದರೂ ತನಗೆ ಲೆಕ್ಕವಿಲ್ಲ ಎಂದು ಪ್ರಿಯಾಂಕಾ ಹೇಳಿದ್ದಾರೆ. ದೇಶದ ಸ್ವಾತಂತ್ರ್ಯಕ್ಕಾಗಿ 13 ವರ್ಷ ಜೈಲು ವಾಸ ಅನುಭವಿಸಿದ ಪಂಡಿತ್ ಜವಾಹರಲಾಲ್ ನೆಹರು ಮತ್ತು ಪಾಕಿಸ್ತಾನವನ್ನು ಎರಡು ಭಾಗ ಮಾಡಿದ ಇಂದಿರಾ ಗಾಂಧಿ ಅವರನ್ನು ದೇಶದ್ರೋಹಿ ಎಂದು ಕರೆಯುವವರು ದೇಶದ್ರೋಹಿ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ರಾಹುಲ್ ಗಾಂಧಿ ಅವರನ್ನು ದೇಶದ್ರೋಹಿ ಎಂದು ಕರೆಯುವುದು ಅವರಿಗೆ ಹೊಸದೇನಲ್ಲ ಎಂದು ಅವರು ಕುಟುಕಿದರು.

"ನನ್ನ ಸಹೋದರನ ಬಗ್ಗೆ ನನಗೆ ತುಂಬಾ ಹೆಮ್ಮೆ ಇದೆ. ಅವರಿಗೆ ದೇಶಕ್ಕಿಂತ ಯಾವುದೂ ದೊಡ್ಡದಲ್ಲ, ಅವರು ದೇಶದ ಏಕತೆಗಾಗಿ ಎಂಟು ಸಾವಿರ ಕಿಲೋಮೀಟರ್ ಪ್ರಯಾಣಿಸಿದ್ದಾರೆ, ಅದರಲ್ಲಿ ನಾಲ್ಕು ಸಾವಿರ ಕಿಲೋಮೀಟರ್ ಪಾದಯಾತ್ರೆ" ಎಂದು ಹೇಳಿದರು. ಬಿಜೆಪಿಯನ್ನು ಗುರಿಯಾಗಿಸಿಕೊಂಡು, 'ಇವರು ಏನೇ ಹೇಳಿದರೂ ಪರವಾಗಿಲ್ಲ ಎಂದರು.

ಭಾರತ ಒಕ್ಕೂಟದ ಹಲವು ನಾಯಕರು ತಮ್ಮ ಕೈಯಲ್ಲಿ ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು ಈ ಪ್ರತಿಭಟನಾ ಮೆರವಣಿಗೆಯ ಭಾಗವಾದರು. ಕೈಗಾರಿಕೋದ್ಯಮಿ ಗೌತಮ್ ಅದಾನಿ ವಿರುದ್ಧವೂ ಘೋಷಣೆ ಕೂಗಿದರು. ಆರ್‌ಜೆಡಿ, ಜೆಎಂಎಂ ಮತ್ತು ಎಡಪಕ್ಷಗಳ ಸಂಸದರು ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡರು. ಆದರೆ, ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಸಮಾಜವಾದಿ ಪಕ್ಷವು ಈ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಲಿಲ್ಲ.ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳು ಜಂಟಿ ಸಂಸದೀಯ ಸಮಿತಿಯಿಂದ (ಜೆಪಿಸಿ) ತನಿಖೆಗೆ ಹಾಗೂ ಅದಾನಿಯನ್ನು ಕೂಡಲೇ ಬಂಧಿಸುವಂತೆ ಒತ್ತಾಯಿಸಿದರು. ಏತನ್ಮಧ್ಯೆ, ಲೋಕಸಭೆಯು 11 ಗಂಟೆಗೆ ಆರಂಭವಾದ ಎರಡು ನಿಮಿಷಗಳಲ್ಲಿ ಮುಂದೂಡಲ್ಪಟ್ಟಿತು.

### ರೆಪೋ; ಬದಲಾವಣೆ ಇಲ್ಲ

ನಗದು ಮೀಸಲು ಅನುಪಾತದಲ್ಲಿ ಕಡಿತ: ನಗದು ಮೀಸಲು ಅನುಪಾತ ಅಥವಾ ಸಿಆರ್‌ಆರ್ ಶೇಕಡಾ 4.5 ರಿಂದ ಶೇಕಡಾ 4ಕ್ಕೆ ಇಳಿಕೆ ಮಾಡಲಾಗಿದೆ. ಅಂದರೆ 50 ಬೇಸಿಸ್ ಪಾಯಿಂಟ್‌ಗಳಷ್ಟು ಕಡಿತಗೊಳಿಸಲಾಗಿದೆ ಎಂದು ಆರ್ ಬಿಐ ಗವರ್ನರ್ ಘೋಷಿಸಿದರು. ಇದು ಬ್ಯಾಂಕಿಂಗ್ ವ್ಯವಸ್ಥೆಗೆ ರೂ 1.15 ಲಕ್ಷ ಕೋಟಿ ಹಣದ ಹರಿವನ್ನು ಹೆಚ್ಚಿಸಲಿದೆ ಎಂದು ದಾಸ್ ಹೇಳಿದರು.

ತಟಸ್ಥ ನಿಲುವಿಗೆ ಸರ್ವಾನುಮತದ ಒಪ್ಪಿಗೆ: ತಟಸ್ಥ ನಿಲುವುಗಳೊಂದಿಗೆ ಮುಂದುವರಿಯಲು ಒಕಅ ಸಹ ಸರ್ವಾನುಮತದಿಂದ ಒಪ್ಪಿಕೊಂಡಿದೆ ಎಂದು ಶಕ್ತಿಕಾಂತ್ ದಾಸ್ ಹೇಳಿದ್ದಾರೆ. ಹಣದುಬ್ಬರವನ್ನು ನಿಯಂತ್ರಣ ಮಾಡಲು ಆರ್‌ಬಿಐ ನಿಸ್ಸಂದಿಗ್ಧವಾಗಿ ಗಮನಹರಿಸುತ್ತದೆ. ಬೆಳವಣಿಗೆಯ ಉದ್ದೇಶವನ್ನು ಬೆಂಬಲಿಸುವಾಗ ಬೆಲೆ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು ಭಾರತೀಯ ರಿಸರ್ವ್ ಬ್ಯಾಂಕ್‌ನ ಕರ್ತವ್ಯ ಹಾಗೂ ಆದೇಶ ಕೂಡಾ ಆಗಿದೆ ಎಂದು ಅವರು ಒತ್ತಿ ಹೇಳಿದರು. ಭಾರತದ ಆರ್ಥಿಕ ಪಥವನ್ನು ಪ್ರತಿಬಿಂಬಿಸಿದ ಶಕ್ತಿಕಾಂತ ದಾಸ್, "ಆರ್ಥಿಕವಾಗಿ, ಕಳೆದ ಮೂರು ವರ್ಷಗಳಲ್ಲಿ ಭಾರತವು ಶೇಕಡಾ 8 ರಷ್ಟು ಜಿಡಿಪಿ ಬೆಳವಣಿಗೆ ಸಾಧಿಸಿದೆ ಎಂದು ಹೇಳಿದರು.

ಬೆಳವಣಿಗೆ ಮತ್ತು ಹಣದುಬ್ಬರ ಪಥಗಳಲ್ಲಿ ಇತ್ತೀಚಿನ ಬೆಳವಣಿಗೆಗಳ ಹೊರತಾಗಿಯೂ, ಆರ್ಥಿಕತೆಯು ನಿರಂತರವಾಗಿ ಪ್ರಗತಿಯತ್ತ ಸಮತೋಲಿತ ಹಾದಿಯಲ್ಲಿ ತನ್ನ ಪ್ರಯಾಣವನ್ನು ಮುಂದುವರೆಸಿದೆ ಎಂದು ಅವರು ಸ್ಪಷ್ಟಪಡಿಸಿದರು.

### ವಿಶೇಷ ವಿಮಾನ ಸಂಚಾರ

ವಿಮಾನ ನಿಲ್ದಾಣಕ್ಕೆ ಆಗಮಿಸುತ್ತದೆ. ನಂತರ ಅದೇ ವಿಮಾನ ಬೆಳಗಾವಿ ವಿಮಾನ ನಿಲ್ದಾಣದಿಂದ ಬೆಳಗ್ಗೆ 7:30 ಕ್ಕೆ ಹೊರಟು ಬೆಳಗ್ಗೆ 8:30 ಕ್ಕೆ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ತಲುಪಲಿದೆ ಎಂದು ಇಂಡಿಗೋ ತಿಳಿಸಿದೆ. ಬೆಳಗಾವಿ ಸಂಸದರಾದ ಜಗದೀಶ್ ಶೆಟ್ಟರ್ ಮತ್ತು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು ಅಧಿವೇಶನದ ಸಮಯದಲ್ಲಿ ಬೆಳಗಾವಿ ಮತ್ತು ಬೆಂಗಳೂರು ನಡುವೆ ವಿಶೇಷ ವಿಮಾನ ಸಂಚಾರಕ್ಕೆ ಮನವಿ ಮಾಡಿದ್ದರು.

### ವರದಿ ಬಂದ ಬಳಿಕ ಕ್ರಮ

ಅಮಾನತು ಮಾಡಲಾಗಿದೆ. ವರದಿ ಬಂದ ಬಳಿಕ ಮುಂದಿನ ಕ್ರಮ ಜರುಗಿಸಲಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಂಪುಟ ಸಭೆ ನಡೆಯಲಿದೆ.ಈ ಒಂದು ಸಂಪುಟ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಚರ್ಚಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ಸಭೆಯಲ್ಲಿ ಹಲವು ಮಹತ್ವದ ವಿಷಯಗಳ ಕುರಿತು ಚರ್ಚಿಸಲಾಗುತ್ತದೆ ಎಂದು ಹೇಳಲಾಗುತ್ತಿದೆ. ಪ್ರಮುಖ ನಿರ್ಧಾರಗಳನ್ನು ಕೂಡ ಈ ಒಂದು ಸಭೆಯಲ್ಲಿ ತೆಗೆದುಕೊಳ್ಳುವ ಸಾಧ್ಯತೆ ಇದೆ ಎನ್ನಲಾಗಿದೆ.ಅಲ್ಲದೆ ಪ್ರಮುಖವಾಗಿ ಮುಡಾ ವಿಚಾರದಲ್ಲಿ ಇಡಿ ಇಂದ ಲೋಕಾಯುಕ್ತಕ್ಕೆ ಪತ್ರ ವ್ಯವಹಾರ ಮಾಡಿರುವ ಕುರಿತಾಗಿ ಅನೌಪಚಾರಿಕ ಚರ್ಚೆ ಮಾಡಲಾಗುತ್ತದೆ ಎನ್ನಲಾಗುತ್ತಿದೆ. ಅಲ್ಲದೆ ಇಡಿ ವಿರುದ್ಧ ಮುಂದಿನ ಕಾನೂನು ಹೋರಾಟದ ಕುರಿತು ಕೂಡ ಚರ್ಚೆ ಸಾಧ್ಯತೆ ಇದೆ ಎನ್ನಲಾಗಿದೆ.ಅಲ್ಲದೆ ಇನ್ನೂ ಕೆಲವೇ ದಿನಗಳಲ್ಲಿ ಬೆಳಗಾವಿಯಲ್ಲಿ ಅಧಿವೇಶನ ಕೂಡ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ವಿಪಕ್ಷಗಳು ಸರ್ಕಾರದ ವಿರುದ್ಧ ಹೋರಾಟ ಮಾಡಲು ಏನೆಲ್ಲ ಅಸ್ತ್ರಗಳನ್ನು ಉಪಯೋಗಿಸಲು ನಿರ್ಧರಿಸಿವೆಯೋ, ಅದಕ್ಕೆ ತಕ್ಕ ಪ್ರತ್ಯುತ್ತರ ನೀಡಲು ಇಂದಿನ ಸಂಪುಟ ಸಭೆಯಲ್ಲಿ ಪ್ರಮುಖವಾದಂತಹ ವಿಷಯಗಳ ಚರ್ಚೆ ನಡೆಸಲಾಗುತ್ತದೆ ಎಂದು ತಿಳಿದುಬಂದಿದೆ.

### ಮತ್ತೋರ್ವ ಬಾಣಂತಿ ಸಾವು

ರವಾನೆ ಮಾಡಲಾಗಿತ್ತು. ಈ ನಡುವೆ ಕಿಡ್ನಿ ವೈಫಲ್ಯವಾಗಿ ಸತತ ಡಯಾಲಿಸಿಸ್ ಮಾಡಲಾಗುತ್ತಿತ್ತು. ಆದರೂ ಚಿಕಿತ್ಸೆ ಫಲಕಾರಿಯಾಗದೇ 22 ದಿನಗಳ ಬಳಿಕ ಸುಮಯಾ ಸಾವನ್ನಪ್ಪಿದ್ದಾರೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ನವೆಂಬರ್ 9ರಿಂದ 11ರ ವರೆಗೆ ಬಳ್ಳಾರಿಯ ಜಿಲ್ಲಾಸ್ಪತ್ರೆಯಲ್ಲಿ ನಾಲ್ವರು ತಾಯಂದಿರು ಮರಣ ಹೊಂದಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿದ್ದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, 3 ದಿನಗಳಲ್ಲಿ ನಡೆಸಿದ 34 ಸಿಸೇರಿಯನ್ ಶಸ್ತ್ರಚಿಕಿತ್ಸೆಯ ಪೈಕಿ 7 ಪ್ರಕರಣಗಳಲ್ಲಿ ಮಾತ್ರ ಲೋಪದೋಷ ಕಂಡು ಬಂದಿದೆ. ಮೂತ್ರಪಿಂಡ ಗಾಯದಂತಹ ಸಮಸ್ಯೆಗಳು 7 ಪ್ರಕರಣಗಳಲ್ಲಿ ಕಂಡು ಬಂದಿದೆ. ಅದರಲ್ಲಿ ನಾಲ್ವರು ರೋಗಿಗಳು ಸಾವನ್ನಪ್ಪಿದ್ದಾರೆ. ಉಳಿದ 3 ರೋಗಿಗಳಲ್ಲಿ 2 ಮಂದಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದು, ಒಬ್ಬ ರೋಗಿಯು ಬಳ್ಳಾರಿ ವಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಪ್ರತಿಕ್ರಿಯೆ ನೀಡಿದ್ದರು. ಡ್ರಗ್ ಕಂಟ್ರೋಲರ್ ಅಮಾನತು: ಬಾಣಂತಿಯರ ಸರಣಿ ಸಾವಿನ ಬೆನ್ನಲ್ಲೇ ಮಹತ್ವದ ಸಭೆ ನಡೆಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕರ್ತವ್ಯಲೋಪ ಹಿನ್ನೆಲೆಯಲ್ಲಿ ಡ್ರಗ್ ಕಂಟ್ರೋಲರ್ ಉಮೇಶ್ ಅವರನ್ನು ಸಸ್ಪೆಂಡ್ ಮಾಡಿದ್ದರು. ಇನ್ನು ಮುಂದೆ ಈ ರೀತಿಯ ದುರ್ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದ್ದರು. ಪ್ರಯೋಗಾಲಯದ ವರದಿ ಬಂದ ಬಳಿಕ ಘಟನೆಗೆ ಜವಾಬ್ದಾರರಾದ ಪ್ರತಿಯೊಬ್ಬರನ್ನು ಗುರುತಿಸಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದರು.

### ತಪ್ಪಿದ್ರೆ ರಾಜೀನಾಮೆ ಕೊಡಲು ಸಿದ್ದ

ಇದರಲ್ಲಿ ನನ್ನ ಪ್ರತಿಷ್ಠೆ ಏನಿಲ್ಲ. ಇದು ಜೀವದ ವಿಚಾರ. ರಾಜೀನಾಮೆಯಿಂದ ಸರಿಯಾಗುತ್ತೆ ಅಂದರೆ ರಾಜೀನಾಮೆಗೆ ಸಿದ್ದ ಆದರೆ ಈ ಪ್ರಕರಣವನ್ನ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ ಪ್ರಕರಣದಲ್ಲಿ ವಿಪಕ್ಷಗಳ ಸಹಕಾರವೂ ಬೇಕು . ಬ್ಯಾನ್ ಮಾಡಿದ ಮೇಲೂ ಅದೇ ಔಷಧಿ ಸರಬರಾಜಾಗಿದೆ. 9 ಜನರಿಗೆ ಸಮಸ್ಯೆ ಆಗಿತ್ತು ನಾಲ್ವರು ಮೃತಪಟ್ಟಿದ್ದರು ಚಿಕಿತ್ಸೆ ಪಡೆಯುತಿದ್ದ ಬಾಣಂತಿ ನಿನ್ನೆ ಸಾವನ್ನಪ್ಪಿದ್ದಾರೆ. ಎಲ್ಲಿ ನಿರ್ಲಕ್ಯ ಆಗಿದೆ ಎಂಬುದನ್ನ ತನಿಖೆ ಮಾಡುತ್ತೇವೆ ಎಂದು ದಿನೇಶ್ ಗುಂಡೂರಾವ್ ತಿಳಿಸಿದರು.

### ಗ್ಯಾರಂಟಿ ರದ್ದುಗೊಳಿಸುವ ಪ್ರಯತ್ನ

ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಅವರು ಇರುವವರೆಗೂ ನಿಮ್ಮ ಗ್ಯಾರಂಟಿ ಯೋಜನೆಗಳನ್ನು ಕಸಿಯುವಂತ ಮಗ ಹುಟ್ಟುವುದಿಲ್ಲ. ನಾವು ಸಂವಿಧಾನದ ರಕ್ಷಣೆ ಮಾಡಿ, ರಾಜ್ಯದ ದಲಿತರು, ಅಲ್ಪಸಂಖ್ಯಾತರು, ದಲಿತರು, ಹಿಂದುಳಿದವರ ರಕ್ಷಣೆಯನ್ನು ಮಾಡುತ್ತೇವೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಅವರು ನೀವು ಶ್ರೀಮಂತ ಕಂಪನಿಗಳು ತೆರಿಗೆಯನ್ನು 33%ನಿಂದ 24% ಕಡಿತಗೊಳಿಸಿ ಅವರ ಜೇಬಿಗೆ 3 ಲಕ್ಷ ಕೋಟಿ ರೂಪಾಯಿ ಹಾಕಿದ್ದೀರಿ. ಆದರೆ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಸಂವಿಧಾನದ ವ್ಯಾಪ್ತಿಯಲ್ಲಿ ರಾಜ್ಯದ ಜನರ ಜೇಬಿಗೆ 56 ಸಾವಿರ ಕೋಟಿಯನ್ನು ಹಾಕಿದರೆ ನಿಮ್ಮ ಹೊಟ್ಟೆಗೆ ಬೆಂಕಿ ಯಾಕೆ ಬೀಳುತ್ತದೆ? ಕೇಂದ್ರ ಸರ್ಕಾರ ದೊಡ್ಡ ಕೈಗಾರಿಕೆ ಮಾಲೀಕರ 17 ಲಕ್ಷ ಕೋಟಿ ಸಾಲವನ್ನು ಮನ್ನಾ ಮಾಡಿದರೆ, ನಮ್ಮ ಸರ್ಕಾರ ಜನರ ಜೇಬಿಗೆ ಹಣ ಹಾಕಿದರೆ ಯಾಕೆ ಅಸೂಯೆಪಡುತ್ತೀರಿ? ಎಂದು ಪ್ರಶ್ನಿಸಿದರು.

ಸಂವಿಧಾನ ಎಂದರೇನು? ಕಾಂಗ್ರೆಸ್ ಪಕ್ಷ ಸಂವಿಧಾನವನ್ನು ಯಾಕೆ ಜಾರಿಗೆ ತಂದಿದೆ ಎಂದು ಪ್ರತಿಯೊಬ್ಬರನ್ನು ಪ್ರಶ್ನೆ ಮಾಡಬೇಕಾಗಿದೆ. ದೇಶದ ಬಡವರು, ರೈತರು, ಹಿಂದುಳಿದವರು, ಪರಿಷಶಿಷ್ಟರು, ಅಲ್ಪಸಂಖ್ಯಾತರಿಗೆ ಸಮಾನವಾಗಿ ಅಧಿಕಾರ ಹಾಗೂ ಗೌರವ ಸಿಗುವಂತೆ ಮಾಡಲು ಕಾಂಗ್ರೆಸ್ ಪಕ್ಷ ಬಾಂಬಾ ಸಾಹೇಬ್ ಅಂಬೇಡ್ಕರ್ ಅವರ ನೇತೃತ್ವದಲ್ಲಿ ಸಂವಿಧಾನ ಜಾರಿಗೆ ತರಲಾಯಿತು. ಬಿಜೆಪಿ ಸರ್ಕಾರ ಹಾಗೂ ಪ್ರಧಾನಿ ಮೋದಿ ಅವರು ಬಡವರು, ರೈತರು, ಪರಿಶಿಷ್ಟರು, ಶೋಷಿತರು, ಮಹಿಳೆಯರು, ಯುವಕರು, ಕಾರ್ಮಿಕರು, ಅಲ್ಪಸಂಖ್ಯಾತರ ಮೇಲೆ ದಾಳಿ ಮಾಡುತ್ತಿದೆ. ಬಿಜೆಪಿ ಸರ್ಕಾರ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಅವರ ವಿರುದ್ಧ ಯಾಕೆ ದಾಳಿ ಮಾಡುತ್ತದೆ ಎಂದು ಗೊತ್ತಿದೆಯಾ? ಕಾರಣ, ಇವರೆಲ್ಲರೂ ಬಡವರು, ದಲಿತರು, ಮಹಿಳೆಯರು, ಯುವಕರು, ರೈತರು, ಅಲ್ಪಸಂಖ್ಯಾತರ ಪರವಾಗಿ ಹೋರಾಟ ಮಾಡುತ್ತಾರೆ. ಈ ಕಾರಣಕ್ಕೆ ಬಿಜೆಪಿ ಇವರ ಮೇಲೆ ದಾಳಿ ಮಾಡುತ್ತಿದೆ ಎಂದು ಹೇಳಿದರು.

### ಪತ್ತೆ; ತನಿಖೆಗೆ ಆದೇಶ.!

ಆಸನ ಸಂಖ್ಯೆ 222 ರಲ್ಲಿ ಕರೆನ್ಸಿ ನೋಟುಗಳ ರಾಶಿಯನ್ನು ಪತ್ತೆ ಮಾಡಿದ್ದಾರೆ" ಎಂದು ಹೇಳಿದರು."ಈ ವಿಷಯವನ್ನು ನನ್ನ ಗಮನಕ್ಕೆ ತರಲಾಯಿತು ಮತ್ತು ತನಿಖೆ ನಡೆಯುತ್ತಿದೆ ಎಂದು ನಾನು ಖಚಿತಪಡಿಸಿದೆ" ಎಂದು ಅವರು ಹೇಳಿದರು.

### ದುಪ್ಪಟ್ಟು ಜನಸಂಖ್ಯೆಗೆ ಪಡಿತರ ಪೂರೈಕೆ

ಅನ್ನ ಚಕ್ರದಿಂದ ದಕ್ಷತೆ: "ಅನ್ನ ಚಕ್ರ" ಪೋರ್ಟಲ್ ಮೂಲಕ ಆಹಾರ ಇಲಾಖೆ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಪ್ರಯತ್ನ ನಡೆದಿದೆ. ಸಾರಿಗೆ ವೆಚ್ಚ ಮತ್ತು ಸಮಯ ಉಳಿತಾಯವಾಗಲಿದೆ. ಆಹಾರ ಇಲಾಖೆ ದಕ್ಷತೆ ಹೆಚ್ಚಲಿದೆ ಎಂದು ಸಚಿವ ಪ್ರಲ್ಹಾದ ಜೋಶಿ ವಿವರಿಸಿದರು. ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಓಆಂ ಸರ್ಕಾರದ 3ನೇ ಅವಧಿಯ ಮೊದಲ 100 ದಿನಗಳಲ್ಲಿ 4 ಕೇಂದ್ರೀಕೃತ ಕ್ಷೇತ್ರಗಳಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಲು ಪ್ರಯತ್ನಿಸಿದೆ ಎಂದರು. ತಂತ್ರಜ್ಞಾನದಿಂದ ಬಲವರ್ಧನೆ: ಆಹಾರ ಇಲಾಖೆ ಕಾರ್ಯಾಚರಣೆಗಳ ಡಿಜಿಟಲೀಕರಣ, ಸಂಗ್ರಹಣೆ ಮತ್ತು ಲಾಜಿಸ್ಟಿಕ್ಸ್‌ನ ಆಧುನೀಕರಣ, ನ್ಯಾಯಬೆಲೆ ಅಂಗಡಿಗಳು ಮತ್ತು ಇಲಾಖೆ ಅಡಿಯಲ್ಲಿ ಬರುವ ಸಂಸ್ಥೆಗಳ ಬಲವರ್ಧನೆಗೆ ತಂತ್ರಜ್ಞಾನ ಮೂಲಕ ಕ್ರಮ ಕೈಗೊಳ್ಳಲಾಗಿದೆ ಎಂದರು. ಆಹಾರ ಭದ್ರತಾ ಯೋಜನೆ, ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆ, ಏಪ್ರಿಲ್ 2020ರಲ್ಲಿ ಪ್ರಾರಂಭಿಸಲಾಯಿತು ಮತ್ತು ಕೊನೆಯದಾಗಿ ಫೆಬ್ರವರಿ 2023 ರಲ್ಲಿ ವಿಸ್ತರಿಸಲಾಯಿತು ಎಂದು ತಿಳಿಸಿದರು.

# ನಡು ರಾತ್ರಿ ಕೊಳ್ಳೇಗಾಲ ಪಟ್ಟಣದಲ್ಲಿ ಕಾಡಾನೆ ಸಂಚಾರ




**ಚಾಮರಾಜನಗರ :** ಕಾಡಿನಲ್ಲಿರಬೇಕಾದ ಕಾಡಾನೆಗಳು ಇದೀಗ ನಾಡಿಗೆ ಬರತೊಡಗಿದೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದಲ್ಲಿ ಕಾಡಾನೆಗಳು ಸಂಚಾರ ಮಾಡಿರುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಡಾ. ರಾಜ್ ಕುಮಾರ್ ರಸ್ತೆ ವೃತ್ತದಲ್ಲಿ ಎರಡು ಕಾಡಾನೆಗಳು ರಾಜ ಗಂಭೀರ್ಯವಾಗಿ ಸಂಚಾರ ಮಾಡುತ್ತಿರುವ ದೃಶ್ಯ ಪೆಟ್ರೋಲ್ ಬಂಕ್ ನಲ್ಲಿ ಅಳವಡಿಸಿರುವ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ರಸ್ತೆಯಲ್ಲಿ ನಡೆದ ಬಂದ ಕಾಡಾನೆಗಳು ಪೆಟ್ರೋಲ್ ಬಂಕ್ ಒಳಗೆ ಬಂದು ಸುತ್ತಾಡಿ ಮತ್ತೇ ರಸ್ತೆಗೆ ತೆರಳಿದ ದೃಶ್ಯ ಕ್ಯಾಮರಾದಲ್ಲಿ ಸೆರೆಯಾಗಿದೆ.

ಶುಕ್ರವಾರ ಮುಂಜಾನೆ ಸುಮಾರು ಒಂದೂವರೆ ಗಂಟೆಯ ಸಮಯದಲ್ಲಿ ಈ ಘಟನೆ ನಡೆದಿದ್ದು, ರಸ್ತೆಯಲ್ಲಿ ಆನೆ ಬರುವುದನ್ನು ಕಂಡ ಪೆಟ್ರೋಲ್ ಬಂಕ್ ನ ಸಿಬ್ಬಂದಿಯೊಬ್ಬರು ಹೆದರಿ ಅಲ್ಲಿಂದ ಕಾಲ್ಕಿತ್ತರು ಬಳಿಕ ಕಾಡಾನೆ ಬಂದು ಹೋಗಿದೆ.

ಇದೀಗ ಕಾಡಾನೆ ಸೆರೆಗೆ ಅರಣ್ಯ ಇಲಾಖೆಯವರು ಹುಡುಕಾಟ ನಡೆಸುತ್ತಿದ್ದಾರೆ.

# ನನಗೆ ಮಿನಿಸ್ಟರ್ ಪೋಸ್ಟ್ ಬೇಕೇ ಬೇಕು: ಶಾಸಕ ಸುಬ್ಬಾ ರೆಡ್ಡಿ



**ಚಿಕ್ಕಬಳ್ಳಾಪುರ:** ನನಗೆ ಸಚಿವ ಸ್ಥಾನ ಕೇಳುವ ಹಕ್ಕಿದೆ, ನಾನು ಹಿರಿಯ ಶಾಸಕ, ಮುಂದಿನ ಬಾರಿ ಸಚಿವ ಸಂಪುಟ ಪುನಾರಚನೆ ವೇಳೆ ನನಗೆ ಸಚಿವ ಸ್ಥಾನ ಕೊಡಲೇಬೇಕು ಅಂತ ಡಿಮ್ಯಾಂಡ್ ಮಾಡ್ತಿದ್ದೇನೆ ಅಂತ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಹೇಳಿದರು.

ಬಾಗೇಪಲ್ಲಿಯಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮದ ಆಯೋಜನೆಯ ಸಿದ್ಧತೆಗಳನ್ನ ಪರಿಶೀಲನೆ ಮಾಡಿ ಮಾತನಾಡಿದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಚಿಕ್ಕಬಳ್ಳಾಪುರ, ಶಿಡ್ಲಘಟ್ಟ, ಚಿಂತಾಮಣಿ, ಗೌರಿಬಿದನೂರು, ಎಲ್ಲಾ ಕ್ಷೇತ್ರದವರೂ ಸಚಿವರಾಗಿದ್ದಾರೆ. ಅದರೆ ಇದುವರೆಗೂ ಬಾಗೇಪಲ್ಲಿಗೆ ಸಚಿವ ಸ್ಥಾನ ಸಿಕ್ಕಿಲ್ಲ. ಅದರಲ್ಲೂ ಬಿಜೆಪಿ ಅಪರೇಷನ್ ಕಮಲದ ವೇಳೆ ನನಗೆ ಸಚಿವ ಸ್ಥಾನದ ಆಫರ್ ಕೊಟ್ಟರು. ಆದರು ನಾನು ಕಾಂಗ್ರೆಸ್ ಪಕ್ಷಕ್ಕೆ ನಿಷ್ಟೆಯಿಂದ ಇದ್ದೆ ಎಂದು ಹೇಳಿದ್ದಾರೆ.

ನಾನು ಸ್ವತಂತ್ರ ಅಭ್ಯರ್ಥಿಯಾಗಿ ನಿಂತು ನಂತರ ಕಾಂಗ್ರೆಸ್ ಪಕ್ಷಕ್ಕೆ ಬಂದೆ. ಇಲ್ಲಿ ಬಂದು ಪಕ್ಷಕ್ಕಾಗಿ ಸಾಕಷ್ಟು ಪ್ರಾಮಾಣಿಕವಾಗಿ ದುಡಿದಿದ್ದೇನೆ. ಹಾಗಾಗಿ ನನಗೆ ಈ ಬಾರಿ ಸಚಿವ ಸಂಪುಟ ಪುನಾರಚನೆ ವೇಳೆ ಸಚಿವ ಸ್ಥಾನ ಕೊಡಲೇಬೇಕು ಅಂತ ಸಿಎಂ ಹಾಗೂ ಡಿಸಿಎಂಗೆ ಡಿಮ್ಯಾಂಡ್ ಮಾಡುವುದಾಗಿ ಹೇಳಿದರು.

**ಪವರ್ ಶೇರಿಂಗ್ ಗುಪ್ತವಾಗಿಟ್ಟಿದೆ:**

ಇದೇ ವೇಳೆ ಸಿಎಂ–ಡಿಸಿಎಂ ನಡುವೆ ಪವರ್ ಶೇರಿಂಗ್ ವಿಚಾರಕ್ಕೆ ಪ್ರತಿಕ್ರಿಯಿಸಿ, ಹೈಕಮಾಂಡ್‌ನಲ್ಲಿ ಆಗಿರುವ ತೀರ್ಮಾನಗಳು ನಮಗೆ ಗೊತ್ತಾಗಲ್ಲ. ಹೈಕಮಾಂಡ್ ಆ ವಿಚಾರವನ್ನು ಗುಪ್ತವಾಗಿ ಇಟ್ಟಿದೆ. ನಮಗೆ ಸಿಎಂ,ಡಿಸಿಎಂ ಇಬ್ಬರು ಎರಡು ಕಣ್ಣುಗಳು ಇದ್ದಂತೆ. ಇಬ್ಬರಲ್ಲಿ ಯಾರು ಸಿಎಂ ಆದರೂ ನನಗೆ ಸಂತೋಷ ಎಂದು ಹೇಳಿದರು.

## ಸುದ್ದಿ ಸಂಜೆ

### ಡ್ರಗ್ಸ್ ಪ್ರಕರಣ; ಅಲಿ ಖಾನ್ ಪುತ್ರನ ಬಂಧನ!

ಕಾಲಿವುಡ್ ಚಿತ್ರಗಳಲ್ಲಿ ಖಳನಾಯಕನ ಪಾತ್ರವನ್ನು ನಿರ್ವಹಿಸುತ್ತಿರುವ ನಟ ಮನ್ಸೂರ್ ಅಲಿ ಖಾನ್ ಅವರ ಪುತ್ರ ಅಲಿ ಖಾನ್ ತುಘಲಕ್ ನನ್ನು ಡ್ರಗ್ಸ್ ಹೊಂದಿರುವ ಮತ್ತು ಮಾರಾಟದ ಆರೋಪದ ಮೇಲೆ ಪೊಲೀಸರು ಬಂಧಿಸಿದ್ದಾರೆ. ಮಾದಕವಸ್ತು ಕಳ್ಳಸಾಗಣೆ ಪ್ರಕರಣದಲ್ಲಿ ತಿರುಮಂಗಲಂ ಪೊಲೀಸರು ಸಂಪೂರ್ಣ ತನಿಖೆ ನಡೆಸಿದ ನಂತರ ಅಲಿ ಖಾನ್ ತುಘಲಕ್ ಸೇರಿ ಇತರ ಒಂಬತ್ತು ಆರೋಪಿಗಳನ್ನು ಬಂಧಿಸಿದ್ದಾರೆ. ಡ್ರಗ್ಸ್ ದಂಧೆಯಲ್ಲಿ ತೊಡಗಿರುವ ವ್ಯಕ್ತಿಗಳೊಂದಿಗೆ ತುಘಲಕ್ ಗೆ ನಂಟು ಇದೆ ಎಂಬ ಗುಪ್ತಚರ ಮಾಹಿತಿ ಪಡೆದ ಪೊಲೀಸರು ತನಿಖೆ ಆರಂಭಿಸಿದ್ದರು. ಇವರಲ್ಲಿ ಹಲವರನ್ನು ಇತ್ತೀಚೆಗೆ ಬಂಧಿಸಲಾಗಿತ್ತು. ಮಾದಕ ವಸ್ತು ಕಳ್ಳಸಾಗಣೆ ಜಾಲಕ್ಕೆ ಸಂಬಂಧಿಸಿದಂತೆ ಈ ಹಿಂದೆ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ 10 ಮಂದಿಯನ್ನು ಅಧಿಕಾರಿಗಳು ಬಂಧಿಸಿದ್ದರು.

ಸೈಯದ್ ಸಾಕಿ, ಮೊಹಮ್ಮದ್ ರಿಯಾಸ್ ಅಲಿ ಮತ್ತು ಫೈಸಲ್ ಅಹ್ಮದ್ ಜೊತೆ ತುಘಲಕ್ ನನ್ನು ಬಂಧಿಸಲಾಗಿದ್ದು ಹೆಚ್ಚಿನ ವಿಚಾರಣೆಗಾಗಿ ನಾಲ್ವರನ್ನು ಪೊಲೀಸ್ ಕಸ್ಟಡಿಯಲ್ಲಿ ಇರಿಸಲಾಗಿದೆ. ತಮಿಳುನಾಡಿನಲ್ಲಿ ಅಂತಾರಾಷ್ಟ್ರೀಯ ಡ್ರಗ್ ಸಿಂಡಿಕೇಟ್‌ನ ಹಲವಾರು ಪ್ರಕರಣಗಳು ದಾಖಲಾಗಿದ್ದು, ಇದರಲ್ಲಿ ನಿಷೇಧಿತ ಮಾದಕವಸ್ತುಗಳನ್ನು ಶ್ರೀಲಂಕಾ, ಮಲೇಷ್ಯಾ ಮತ್ತು ಆಸ್ಟ್ರೇಲಿಯಾದಂತಹ ದೇಶಗಳಿಗೆ ಕಳ್ಳಸಾಗಣೆ ಮಾಡಲಾಗುತ್ತದೆ.

### ಕೆ.ಎಸ್.ಈಶ್ವರಪ್ಪ ವಿರುದ್ಧ ಮತ್ತೊಂದು ಸುಮೊಟೊ ಪ್ರಕರಣ ದಾಖಲು

**ಶಿವಮೊಗ್ಗ:** ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪನವರ ವಿರುದ್ಧ ಶಿವಮೊಗ್ಗ ನಗರದಲ್ಲಿ ಮತ್ತೊಂದು ಸುಮೊಟೊ ಪ್ರಕರಣ ದಾಖಲಾಗಿದೆ. ಪ್ರಚೋದನಕಾರಿ ಭಾಷಣ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಕೋಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪೊಲೀಸ್ ಇನ್ಸ್‌ಪೆಕ್ಟರ್ ಹರೀಶ್ ಕೆ.ಪಟೇಲ್ ಅವರು ಸ್ವಯಂ ದೂರು ನೀಡಿದ್ದು, ಅದರಂತೆ ಠಾಣೆಯ ಸಿಬ್ಬಂದಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಡಿಸೆಂಬರ್ 3ರಂದು ಈಶ್ವರಪ್ಪ, ಹಿಂದೂ ಜನಜಾಗೃತಿ ಸಮಿತಿ ಆಯೋಜಿಸಿದ್ದ ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದಾಳಿ ಖಂಡಿಸುವ ಪ್ರತಿಭಟನಾ ಸಭೆಯಲ್ಲಿ ಭಾಗಿಯಾಗಿ ಭಾಷಣ ಮಾಡಿದ್ದರು.

## ಡಾ.ಅಂಬೇಡ್ಕರ್ ಮಹಾ ಪರಿನಿರ್ವಾಣ ದಿನ:

# ಅಧಿಕಾರಿಗಳ ನಿರ್ಲಕ್ಷ್ಯ ತಹಸೀಲ್ದಾರ್‌ಗೆ ತರಾಟೆ

**ಕುಕನೂರು :** ಡಾ ಬಿ ಆರ್ ಅಂಬೇಡ್ಕರ್ ಅವರ ಪುಣ್ಯ ತಿಥಿಯ ಅಂಗವಾಗಿ ಇಂದು ಕುಕನೂರು ಪಟ್ಟಣದಲ್ಲಿ ಮಹಾ ಪರಿ ನಿರ್ವಾಣ ದಿನ ಆಚರಣೆ ಮಾಡಲಾಯಿತು. ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಇರುವ ಬಾಬಾ ಸಾಹೇಬ್ ರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಮನ ಸಲ್ಲಿಸಲಾಯಿತು.

ಆದರೆ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ 68ನೇ ಪುಣ್ಯತಿಥಿ ನಿಮಿತ್ತ ಮಾಹಾ ಪರಿನಿರ್ವಾಣ ದಿನ ಆಚರಣೆಗೆ ಪಟ್ಟಣ ಪಂಚಾಯತ್ ಮುಖ್ಯಸ್ಥರು ಸೇರಿದಂತೆ ತಾಲೂಕಿನ ಅನೇಕ ಇಲಾಖೆಯ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದರಿಂದ ಆಕ್ರೋಶಗೊಂಡ ದಲಿತಪರ ಸಂಘಟನೆ ಕಾರ್ಯಕರ್ತರು ತಹಸೀಲ್ದಾರ್ ಅವರನ್ನು ತರಾಟೆಗೆ ತೆಗೆದುಕೊಂಡ ಪ್ರಸಂಗ ಕುಕನೂರು ಪಟ್ಟಣದಲ್ಲಿ ನಡೆಯಿತು.

ಪಟ್ಟಣದ ಡಾ ಅಂಬೇಡ್ಕರ್ ವೃತ್ತದಲ್ಲಿ ಇರುವ ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರ ಪುಣ್ಯತಿಥಿಯ ಮಹಾ ಪರಿನಿರ್ವಾಣ ದಿನದ ಸ್ಮರಣೆ ಮಾಡಲಾಯಿತು.



ಆದರೆ ಈ ಸಂದರ್ಭದಲ್ಲಿ ಕುಕನೂರು ತಹಸೀಲ್ದಾರ್ ಮತ್ತು ಬೆರಳೆಣಿಕೆಯು ಕೆಲವೇ ಕೆಲವು ಪಟ್ಟಣ ಪಂಚಾಯತ್ ಸದಸ್ಯರು ಮಾತ್ರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಇದರಿಂದ ಆಕ್ರೋಶಗೊಂಡ ಬಾಬಾಸಾಹೇಬ್ ಅವರ ಅನುಯಾಯಿಗಳು, ದಲಿತ ಪರ ಸಂಘಟನೆಯ ಕಾರ್ಯಕರ್ತರು ಅಲ್ಲೇ ಇದ್ದ ತಹಸೀಲ್ದಾರ್ ಅವರನ್ನು ತರಾಟೆಗೆ ತೆಗೆದುಕೊಂಡರು.

ದೇಶದ ಮಹಾನ್ ಚೇತನ, ಸಂವಿಧಾನ ಶಿಲ್ಪಿ ಅವರ ಮಹಾ ಪರಿ ನಿರ್ವಾಣ ದಿನದಂದು ತಾಲೂಕಿನ ಅನೇಕ ಇಲಾಖೆಯ ಪ್ರತಿನಿಧಿಗಳುಗಳು ಪಟ್ಟಣ ಪಂಚಾಯತ್ ನ ಬಹುತೇಕ ಸದಸ್ಯರು ಗೈರು ಹಾಜರಾಗಿದ್ದರು.

ಇದರ ಬಗ್ಗೆ ತಹಸೀಲ್ದಾರ್ ಎಚ್ ಪ್ರಾಣೇಶ್ ಅವರ ಗಮನಕ್ಕೆ ತಂದಾಗ ಆಗಿರುವ ಸಣ್ಣ ಪುಟ್ಟ ನ್ಯೂನ್ಯತೆಗಳನ್ನು ಸಂಬಂಧ ಪಟ್ಟ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದು ಸರಿಪಡಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಮಣ್ಣ ಬಜೇಂತ್ರಿ ನಾಗಪ್ಪ ಕಲ್ಮನಿ, ಲಕ್ಷ್ಮಣ್ ಕಾಳಿ, ಸಣ್ಣ ಯಲ್ಲಪ್ಪ, ಗುದ್ನೇಶ್ ಛಲವಾದಿ, ನಿಂಗಪ್ಪ ಗೊರ್ಲೆಕೊಪ್ಪ, ನಿಂಗು ಬೇಣಕಲ್,ಭರಮಪ್ಪ ತಲ್ವಾರ್, ಶಂಕರ್ ಭಂಡಾರಿ, ಲಕ್ಷ್ಮಣ್ ಬಾರಿಗಿದಡ್, ವಿರೇಶ್ ಸಬರದ್ ಪಟ್ಟಣ ಪಂಚಾಯತ್ ಸದಸ್ಯರಾದ ನೂರುದ್ದಿನ್ ಸಾಬ್ ಗುಡಿ ಹಿಂದಲ್, ಪ್ರಶಾಂತ್ ಆರು ಬೆರಳಿನ, ಮಲ್ಲಿಕಾರ್ಜುನ ಚೌದರಿ, ಮಹಾಂತೇಶ್ ಹೂಗಾರ್ ಇತರರು ಇದ್ದರು.

# ಎಲ್ಲರು ಕನ್ನಡವನ್ನೇ ಹೆಚ್ಚಾಗಿ ಬಳಸಬೇಕು: ಶಂಕರ್ ಕೇಸರಿ

**ಮುಳಬಾಗಿಲು :** ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಘಟಕದ ವತಿಯಿಂದ ಮುಳಬಾಗಿಲು ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗ ಇಲ್ಲಿ ಕನ್ನಡ ಕಂಠ ಪಾಠ ಸ್ಪರ್ಧೆ ಕಾರ್ಯಕ್ರಮ ರೂಪಿಸಲಾಯಿತು ಕಾರ್ಯಕ್ರಮದ ಪ್ರಾರ್ಥನೆಯನ್ನು ದೀಕ್ಷಾ ಮತ್ತು ಐಶ್ವರ್ಯ ಮಾಡಿಕೊಟ್ಟರು,

ನಿರೂಪಣೆ ಶಿಕ್ಷಕರಾದ ಅರುಣ್ ಕುಮಾರ್ ನಡೆಸಿದರು, ಸ್ವಾಗತವನ್ನು ಶಿಕ್ಷಕರಾದ ಲಾವಣ್ಯ ಸಿಂಗ್ ನಡೆಸಿಕೊಟ್ಟರು, ಕಾರ್ಯಕ್ರಮದ ಉದ್ಘಾಟನೆಯನ್ನು ತಾಲ್ಲೂಕು ಕನ್ನಡಪರ ಸಂಘಟನೆಗಳ ಅಧ್ಯಕ್ಷರು ಆದ ಶಂಕರ್ ಕೇಸರಿ ಉದ್ಘಾಟಿಸಿ ಎಲ್ಲರು ಕನ್ನಡವನ್ನೇ ಹೆಚ್ಚಾಗಿ ಬಳಿಸಬೇಕು ಎಂದು ವಿದ್ಯಾರ್ಥಿಗಳಲ್ಲಿ ಕಳಿಕಳಿಯಾಗಿ ಕರೆ ನೀಡಿದರು ಗಡಿಭಾಗದಲ್ಲಿ ಹೆಚ್ಚು ಕಾರ್ಯಕ್ರಮ ನಡೆಯುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದರು

ಹವ್ಯಾಸಿ ಬರಹಗಾರ ಭರಮಣ್ಣ ವಯಸ್ಸಿನಲ್ಲಿ ಕಿರಿಯರಾದರೂ ಹಲವು ಕವನ ಸಂಕಲನಗಳನ್ನು ಬರೆದಿರುತ್ತಾರೆ ಮತ್ತು ಉತ್ತಮ ವಾಗ್ಮಿ ಹಾಗು ಮಕ್ಕಳಿಗೆ



ಹಿತವಚನ ನೀಡಿದರು

ಬಹುಮಾನ ವಿತರಣೆಯನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮುಖಂಡರು ವೇದಿಕೆಯ ಗಣ್ಯರ ಜೊತೆ ನೀಡಿ ಮಾತನಾಡಿದ ಅವರು ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರು ಹೆಚ್ಚು ಬಹುಮಾನಗಳನ್ನ ಪಡೆದಿದ್ದರಿಂದ ಅವರನ್ನು ಶ್ಲಾಘಿಸಿದರು. ಪ್ರಥಮ ಬಹುಮಾನ ಪಡೆದ ವಿದ್ಯಾರ್ಥಿಗಳಾದ ತನುಜಾ, ಆಲಿಯಾಕೌನೈನ್, ತಸ್ಮಿಯಸುಲ್ತಾನಾ ಇವರನ್ನು ವಿಶೇಷವಾಗಿ ಶ್ಲಾಘಿಸಲಾಯಿತು

ಮುಳಬಾಗಿಲು ತಾಲ್ಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎನ್ ಜಗದೀಶ್ ಮಾತನಾಡಿದ ಅವರು ಕನ್ನಡ ಸಾಹಿತ್ಯ ಪರಿಷತ್ತು ಪ್ರಾರಂಭ,ಕನ್ನಡದ ಹುಟ್ಟು,ಕವಿಗಳ ಕೊಡುಗೆಗಳ ಬಗ್ಗೆ ತಿಳಿಹೇಳಿದರು

ಶಾಲೆಯ ಮುಖ್ಯೋಪಾಧ್ಯಾಯರಾದ ಆನಂದ ವಿ ಅಧ್ಯಕ್ಷತೆಯನ್ನು ವಹಿಸಿ ಭರಮಣ್ಣ ತುಂಬಾ

ಕಿರಿಯರಾದರೋ ಬೃಹತ್ ಕವನ ಸಂಕಲನಗಳನ್ನು ಬರೆದಿರುವುದು ಶ್ಲಾಘನೀಯ ವಿದ್ಯಾರ್ಥಿನಿಯರು ಇಷ್ಟು ಸೊಗಸಾಗಿ ಗಾಯನ ಮಾಡುವುದು ನನಗೆ ತುಂಬಲಾರದ ಸಂತೋಷವಾಗಿದೆ ದುರಂತ ಅಂದರೆ ಮುಳಬಾಗಿಲು ನಗರದಲ್ಲಿ ಕನ್ನಡ ಚಲನಚಿತ್ರ ಬಿಡುಗಡೆ ಆಗುವುದಿಲ್ಲ ಇದು ತುಂಬಾ ಶೋಚನೀಯವಾಗಿದೆ ಎಂದು ತಿಳಿಸಿದರು ನೀವು ತಪ್ಪದೇ ಕನ್ನಡದಲ್ಲಿ ಮಾತನಾಡಬೇಕು ಎಂದು ತಿಳಿಸಿದರು

ಜಿ ಪಿ ರಾಜರತ್ನಂ ಕವಿತೆಗಳನ್ನು ಹೇಳುತ್ತಾ ರತ್ನನಪದಗಳು ಉಲ್ಲೇಖಿಸಿದರು ಶಾಲೆಯ ಹಿರಿಯ ಶಿಕ್ಷಕರಾದ ಮಂಜುನಾಥ್,ಕನ್ನಡಶಿಕ್ಷಕಿ ಕಳಾವತಮ್ಮ,ಸಿರಾಜ್ ಅಹ್ಮದ್, ಪುಷ್ಪಲತಾ,ರೇವತಿ ದೇವಿ ಹಾಜರಿದ್ದರು

# ‘ಶಿಂಧೆ ಯುಗ ಮುಗಿಯಿತು, ಆತ ಮತ್ತೆಂದು ಸಿಎಂ ಆಗಲ್ಲ’



**ಮುಂಬೈ:** ಶಿವಸೇನೆ (ಯುಬಿಟಿ) ನಾಯಕ ಸಂಜಯ್ ರಾವುತ್ ಅವರು ನಿರ್ಗಮಿತ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ’ಶಿಂಧೆ ಯುಗ ಮುಗಿದಿದೆ’ ಅವರು ಮತ್ತೆ ಎಂದಿಗೂ ಸಿಎಂ ಆಗುವುದಿಲ್ಲ ಎಂದು ಹೇಳಿದ್ದಾರೆ.

ಮಹಾಯುತಿ ಮೈತ್ರಿಕೂಟವು ದೇವೇಂದ್ರ ಫಡ್ನವಿಸ್ ಅವರನ್ನು ಮುಂದಿನ ಸಿಎಂ ಆಗಿ ಆಯ್ಕೆ ಮಾಡಿದ ನಂತರ ಮತ್ತು ಮಹಾರಾಷ್ಟ್ರದಲ್ಲಿ ಅವರ ಐತಿಹಾಸಿಕ ವಿಜಯದ ನಂತರ ನಿರ್ಗಮಿತ ಸಿಎಂ ಏಕನಾಥ್ ಶಿಂಧೆಗೆ ಉಪ ಮುಖ್ಯಮಂತ್ರಿ ಹುದ್ದೆಯನ್ನು ನೀಡಿದ ನಂತರ ಸಂಜಯ್ ರಾವುತ್ ಅವರ ಈ ಹೇಳಿಕೆ ಬಂದಿವೆ.

ಶಿಂಧೆಯನ್ನು ಭಾರತೀಯ ಜನತಾ ಪಕ್ಷವು ’ಬಳಸಿ ಬಿಸಾಡಿದೆ’ ಎಂದು ರಾವತ್ ಹೇಳಿದ್ದಾರೆ. ಶಿಂಧೆ ಯುಗ ಮುಗಿದಿದೆ. ಅವರ ಉಪಸ್ಥಿತಿ ಕೇವಲ ಎರಡು ವರ್ಷಗಳು ಮಾತ್ರ. ಅವರ ಬಳಿಕೆ ಈಗ ಕೊನೆಗೊಂಡಿದೆ. ಅವರನ್ನು ಬದಿಗೆ ತಳ್ಳಲಾಗಿದೆ. ಶಿಂಧೆ ಅವರು ಮುಂದೆ ಈ ರಾಜ್ಯದ ಸಿಎಂ ಆಗುವುದಿಲ್ಲ. ಇದು ಬಿಜೆಪಿಯ ನೀತಿಯಾಗಿದೆ. ರಾಜಕೀಯದಲ್ಲಿ ಬಿಜೆಪಿಯವರು ತಮ್ಮೊಂದಿಗೆ ಕೆಲಸ ಮಾಡುವವರ ಪಕ್ಷವನ್ನು ಒಡೆಯುತ್ತಾರೆ ಎಂದರು.

ಸ್ಪಷ್ಟ ಬಹುಮತವಿದ್ದರೂ ಮಹಾರಾಷ್ಟ್ರ ಸಿಎಂ ಹೆಸರನ್ನು ಬಹಿರಂಗಪಡಿಸಲು ವಿಳಂಬ ಮಾಡಿರುವುದನ್ನು ರಾವತ್ ಪ್ರಶ್ನಿಸಿದ್ದಾರೆ. ಮಹಾಯುತಿ ಮೈತ್ರಿಯಲ್ಲೇ ದೋಷವಿದೆ ಎಂದರು. ದೇವೇಂದ್ರ ಫಡ್ನವಿಸ್ ಇಂದಿನಿಂದ ರಾಜ್ಯದ ಸಿಎಂ ಆಗಲಿದ್ದಾರೆ. ಅವರಿಗೆ ಬಹುಮತವಿದೆ. ಆದರೆ ಈ ಹೊರತಾಗಿಯೂ ಅವರು 15 ದಿನಗಳ ಕಾಲ ಸರ್ಕಾರ ರಚಿಸಲು ಸಾಧ್ಯವಾಗಲಿಲ್ಲ. ಇದರರ್ಥ ಅವರ ಪಕ್ಷ ಅಥವಾ ಮಹಾಯುತಿಯಲ್ಲಿ ಏನಾದರೂ ತಪ್ಪಾಗಿದೆ. ಈ ವಿಷಯ ನಾಳೆಯಿಂದ ಗೋಚರಿಸುತ್ತದೆ ಎಂದರು..

# ಫಡ್ನವಿಸ್, ಶಿಂಧೆ, ಪವಾರ್ ಪ್ರಮಾಣ

**ಮುಂಬೈ:** ಮಹಾರಾಷ್ಟ್ರದ ಹೊಸ ಮುಖ್ಯಮಂತ್ರಿಯಾಗಿ ದೇವೇಂದ್ರ ಫಡ್ನವಿಸ್ ಇಂದು ಸಂಜೆ ಪ್ರಮಾಣವಚನ ಸ್ವೀಕರಿಸಿದರು. ಶಿವಸೇನೆಯ (ಶಿಂಧೆ ಬಣ) ಮುಖ್ಯಸ್ಥ ಏಕನಾಥ್ ಶಿಂಧೆ, ಎನ್‌ಸಿಪಿ ಮುಖ್ಯಸ್ಥ ಅಜಿತ್ ಪವಾರ್ ಅವರು ಉಪ ಮುಖ್ಯಮಂತ್ರಿಗಳಾಗಿ ಪ್ರಮಾಣವಚನ ಕೈಗೊಂಡರು.

ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾಗಿ ಸುಮಾರು ಎರಡು ವಾರಗಳ ನಂತರ ಇಂದು ಸಂಜೆ ದಕ್ಷಿಣ ಮುಂಬೈನ ಆಜಾದ್ ಮೈದಾನದಲ್ಲಿ ನಡೆದ ಅದ್ಧೂರಿ ಸಮಾರಂಭದಲ್ಲಿ ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಅವರು ಮುಖ್ಯಮಂತ್ರಿ ಮತ್ತು ಮುಖ್ಯಮಂತ್ರಿಗಳಿಗೆ ಅಧಿಕಾರದ ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಸಚಿವರಾದ ನಿತಿನ್ ಗಡ್ಕರಿ, ನಿರ್ಮಲಾ ಸೀತಾರಾಮನ್, ಜ್ಯೋತಿರಾದಿತ್ಯ ಸಿಂಧಿಯಾ, ಶಿವರಾಜ್ ಸಿಂಗ್ ಚೌಹಾಣ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಮತ್ತು ಎನ್‌ಡಿಎ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ಎನ್‌ಡಿಎ ನಾಯಕರು, ಪ್ರಮುಖ ನಟರು, ಎಲ್ಲಾ ಪಕ್ಷಗಳ ಮುಖಂಡರು ಉಪಸ್ಥಿತರಿದ್ದರು.ಬಾಲಿವುಡ್ ನಟರಾದ ಶಾರುಖ್ ಖಾನ್, ಸಲ್ಮಾನ್ ಖಾನ್, ರಣಬೀರ್ ಕಪೂರ್ ಮತ್ತು ರಣವೀರ್ ಸಿಂಗ್, ಮಾಜಿ ಕ್ರಿಕೆಟಿಗ ಸಚಿನ್ ತೆಂಡೂಲ್ಕರ್, ಕೈಗಾರಿಕೋದ್ಯಮಿಗಳಾದ ಮುಖೇಶ್ ಅಂಬಾನಿ ಮತ್ತು ಗೌತಮ್ ಅದಾನಿ ಸೇರಿದಂತೆ ಪ್ರಮುಖ ಸೆಲೆಬ್ರಿಟಿಗಳೂ ಸಹ ಸಮಾರಂಭಕ್ಕೆ ಸಾಕ್ಷಿಯಾದರು. ರಾಜ್ಯದ ನಾನಾ ಭಾಗಗಳಿಂದ ಸಾವಿರಾರು ಕಾರ್ಯಕರ್ತರು ಕೂಡಾ ಆಗಮಿಸಿದ್ದರು.

### ಮೊದಲ ಸಂಪುಟ ಸಭೆ ನಡೆಸಿದ ಫಡ್ನವಿಸ್

ಮುಂಬೈ: ಮೂರನೇ ಬಾರಿ ಮಹಾರಾಷ್ಟ್ರ ಮುಖ್ಯಮಂತ್ರಿಯಾಗಿ ಗುರುವಾರ ಪ್ರಮಾಣವಚನ ಸ್ವೀಕರಿಸಿದ ಬಿಜೆಪಿ ನಾಯಕ ದೇವೇಂದ್ರ ಫಡ್ನವಿಸ್ ಅವರು ಮುಂಬೈನ ರಾಜ್ಯ ಸಚಿವಾಲಯ ‘ಮಂತ್ರಾಲಯ’ದಲ್ಲಿ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು. ಮಂತ್ರಾಲಯಕ್ಕೆ ಆಗಮಿಸಿದ ನೂತನ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಉಪ ಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಹಾಗೂ ಅಜಿತ್ ಪವಾರ್ ಅವರಿಗೆ ಸಿಬ್ಬಂದಿ ಸಾಂಪ್ರದಾಯಿಕ ಸ್ವಾಗತ ಕೋರಿದರು. ಛತ್ರಪತಿ ಶಿವಾಜಿ ಮಹಾರಾಜ್, ಜೀಜಾಬಾಯಿ, ಬಿ ಆರ್ ಅಂಬೇಡ್ಕರ್ ಮತ್ತು ಮಹಾತ್ಮ ಫುಲೆ ಅವರ ಭಾವಚಿತ್ರಗಳಿಗೆ ಫಡ್ನವಿಸ್ ಮತ್ತು ಅವರ ಉಪ ಮುಖ್ಯಮಂತ್ರಿಗಳು ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಖ್ಯ ಕಾರ್ಯದರ್ಶಿ ಸುಜಾತಾ ಸೌನಿಕ್ ಉಪಸ್ಥಿತರಿದ್ದರು.ಫಡ್ನವಿಸ್ ಅಧ್ಯಕ್ಷತೆಯಲ್ಲಿ, ಶಿಂಧೆ ಮತ್ತು ಪವಾರ್ ಅವರು ಹೊಸ ಸರ್ಕಾರದ ಮೊದಲ ಕ್ಯಾಬಿನೆಟ್ ಸಭೆ ನಡೆಸಿದರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು.

# ಕಾಂಗ್ರೆಸ್ ಬಂದ ಮೇಲೆ ಯಾವ ಅಭಿವೃದ್ಧಿ ಕೆಲಸ ನಡೆಯುತ್ತಿಲ್ಲ

**ರಾಯಚೂರು :** ದರಿದ್ರ ಕಾಂಗ್ರೆಸ್ ಬಂದ ಮೇಲೆ ರಾಜ್ಯದಲ್ಲಿ ಯಾವ ಅಭಿವೃದ್ಧಿ ಕೆಲಸ ನಡೆಯುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ ವಿಜಯೇಂದ್ರ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಜಿಲ್ಲೆಯ ಲಿಂಗಸುಗೂರಿನಲ್ಲಿ ಆಯೋಜಿಸಿದ್ದ ನಮ್ಮ ಭೂಮಿ, ನಮ್ಮ ಹಕ್ಕು ಬೃಹತ್ ಆಂದೋಲನದಲ್ಲಿ ಭಾಗವಹಿಸುವ ಮುನ್ನ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಹಾಸನದಲ್ಲಿ ಕಾಂಗ್ರೆಸ್ ಜನಕಲ್ಯಾಣ ಸಮಾವೇಶ ಕುರಿತಂತೆ ಪ್ರತಿಕ್ರಿಯೆ ನೀಡಿದ ಅವರು, ಶಾಸಕರು ಕಷ್ಟಪಟ್ಟು ಚುನಾವಣೆ ಗೆದ್ದು, ಸಿದ್ದರಾಮಯ್ಯನವರು ಹೊಸ ಯೋಜನೆಗಳನ್ನ ಕೊಡುತ್ತಾರೆ ಎಂದು ಗುದ್ದಲಿ ಹಿಡಿದುಕೊಂಡು ಓಡಾಡುತ್ತಿದ್ದಾರೆ. ಅವು ಮನೆಗಳನ್ನ ಸೇರಿವೆ. ಯಾವುದೇ ಗುದ್ದಲಿ ಪೂಜೆ, ಶಂಕುಸ್ಥಾಪನೆಯೂ ನಡೆಯುತ್ತಿಲ್ಲ. ಇಂತಹ ಅಭಿವೃದ್ಧಿ ಶೂನ್ಯ ಸರ್ಕಾರವನ್ನ ಹಿಂದೆಂದೂ ಕೂಡ ನಾಡಿನ ಜನತೆ ನೋಡಿರಲಿಲ್ಲ ಎಂದಿದ್ದಾರೆ.

ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಗಾದಿಗೆ ಪೈಪೋಟಿ ಶುರುವಾಗಿದೆ, ಮುಂದೆ ಯಾವುದೇ ಹಂತಕ್ಕೆ ಹೋಗಬಹುದು. ಒಪ್ಪಂದ ಆಗಿದೆ, ಬಹಿರಂಗವಾಗಿ ಮಾತಾಡಲ್ಲ ಎಂದಿದ್ದು ಡಿಕೆಶಿ, ನಾವಲ್ಲ. ಶಾಸಕರು ಅವರ ಜೊತೆಯಿಲ್ಲ, ಆದ್ರೂ ಸಿದ್ದರಾಮಯ್ಯ ಮನಸ್ಸು ಗೆಲ್ಲುವ ಶತ ಪ್ರಯತ್ನ ಡಿ. ಕೆ ಶಿವಕುಮಾರ್ ಮಾಡುತ್ತಿದ್ದಾರೆ. ಸಿಎಂ ಖುರ್ಚಿ ಇರುವುದು ಒಂದೇ, ಮುಂದೆ ಏನಾಗುತ್ತೋ ನೋಡೋಣ. ಸಿಎಂ ಗಾದಿಗೆ ಸಿದ್ದರಾಮಯ್ಯ, ಡಿಕೆಶಿ, ಪರಮೇಶ್ವರ್ ಮಾತ್ರವಲ್ಲ 8 ಜನ ಪೈಪೋಟಿಯಲ್ಲಿದ್ದಾರೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಸರಿ ಹೋಗಲಿದೆ: ಬಿಜೆಪಿಯಲ್ಲಿ ಯತ್ನಾಳ್ ಭಿನ್ನಮತ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಪಕ್ಷದಲ್ಲಿನ ಈ ಬೆಳವಣಿಗೆ ಜನರಲ್ಲೂ ಗೊಂದಲ ಮೂಡಿಸಿದೆ.

ರಾಜ್ಯದಲ್ಲಿ ಲಕ್ಷಾಂತರ ಕಾರ್ಯಕರ್ತರು ಹಗಲು ರಾತ್ರಿ ಪಕ್ಷ ಸಂಘಟಿಸುವ ನಿಟ್ಟಿನಲ್ಲಿ ಶ್ರಮ ಹಾಕುತ್ತಿದ್ದಾರೆ. ಇದರ ನಡುವೆ ನನ್ನ ಸೇರಿ ಎಲ್ಲಾ ನಾಯಕರ ನಡವಳಿಕೆಯನ್ನ ಕಾರ್ಯಕರ್ತರು, ಜನರು ಗಮನಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಸರಿ ಹೋಗಲಿದೆ ಎಂಬ ವಿಶ್ವಾಸವಿದೆ ಎಂದರು.

ಪಕ್ಷದ ಹಿರಿಯರು ನನಗೆ ಅಧ್ಯಕ್ಷ ಸ್ಥಾನದ ಜವಾಬ್ದಾರಿ ಕೊಟ್ಟ ನಂತರದಲ್ಲಿ ನಾನು ಪ್ರಾಮಾಣಿಕವಾಗಿ ಹಗಲು ರಾತ್ರಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಪಕ್ಷ ಸಂಘಟಿಸುವ ಕೆಲಸ ಮಾಡುತ್ತಿದ್ದೇನೆ. ಕಾರ್ಯಕರ್ತರಿಗೆ ಸ್ಫೂರ್ತಿ, ಶಕ್ತಿ ತುಂಬುವ ಕೆಲಸ ಮಾಡುತ್ತಿದ್ದೇನೆ. ಗಂಭೀರವಾಗಿ ಇದನ್ನ ಪರಿಗಣಿಸಿ ಸರಿ ಮಾಡುವ ಕೆಲಸವನ್ನು ಪಕ್ಷದ ಹಿರಿಯರು, ವರಿಷ್ಠರು ಮಾಡಲಿದ್ದಾರೆ ಎಂಬ ವಿಶ್ವಾಸ ನಮಗಿದೆ ಎಂದು ವಿಜಯೇಂದ್ರ ತಿಳಿಸಿದರು.



ಗ್ಯಾರಂಟಿ ಯೋಜನೆಗಳನ್ನ ನಿಲ್ಲಿಸಲು ಕೇಂದ್ರ ಬಿಜೆಪಿ ಸರ್ಕಾರ ಕುತಂತ್ರ ನಡೆಸಿದೆ ಎಂಬ ಕಾಂಗ್ರೆಸ್ ನಾಯಕ ಸುರ್ಜೆವಾಲಾ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಕುಣಿಯಲು ಬಾರದವನು ನೆಲ ಡೊಂಕು ಅನ್ನೋ ಹಾಗಾಗಿದೆ ಕಾಂಗ್ರೆಸ್ ಪರಿಸ್ಥಿತಿ. ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಸ್ಕಾಲರ್‌ಶಿಪ್ ಬಂದ್ ಮಾಡಿದ್ದಾರೆ.

ಸರ್ಕಾರಿ ನೌಕರರಿಗೆ ಸಂಬಳ ಕೊಡಲು ಆಗುತ್ತಿಲ್ಲ. ಶಕ್ತಿ ಯೋಜನೆ ನಿಲ್ಲಿಸುವ ಬಗ್ಗೆ ಡಿಕೆಶಿ ಮಾತನಾಡಿದ್ದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಚಾಟಿ ಬೀಸಿದ್ದರು. ಕಾಂಗ್ರೆಸ್ ನವರಿಗೆ ಈಗ ಜ್ಞಾನೋದಯವಾಗಿದೆ. ಮನವರಿಕೆ ಮಾಡಿಕೊಳ್ಳುತ್ತಿದ್ದಾರೆ. ಸುರ್ಜೇವಾಲಾ ಈ ರೀತಿ ತಮ್ಮ ಸತ್ಯ ಬಿಚ್ಚಿಡುತ್ತಿದ್ದಾರೆ ಎಂದು ತಿರುಗೇಟು ನೀಡಿದರು.

ರಾಜ್ಯದಲ್ಲಿ ಕೆಲ ತಿಂಗಳಿಂದ ವಕ್ಫ್ ನೋಟಿಸ್ ಬಂದಿದ್ದರಿಂದ ರೈತರು ಆತಂಕದಲ್ಲಿದ್ರು. ರಾಜ್ಯ ಸರ್ಕಾರದ ಕುಮ್ಮಕ್ಕಿನಿಂದ ರೈತರು, ಮಠ ಮಾನ್ಯಗಳಿಗೆ ನೋಟಿಸ್ ನೀಡಲಾಗಿತ್ತು. ಎನ್‌ಡಿಎ ವಕ್ಫ್ ಕಾಯಿದೆ ತರಬೇಕು ಅಂತ, ಜಾಯಿಂಟ್ ಪಾರ್ಲಿಮೆಂಟ್ ಕಮಿಟಿ ಎಲ್ಲೆಡೆ ಓಡಾಡಿ ತಿದ್ದುಪಡಿಗೆ ತಯಾರಿ ನಡೆಸಿದೆ. ಬಿಜೆಪಿ ವಿರೋಧ ಪಕ್ಷವಾಗಿ ರೈತರ ಪರವಾಗಿ ಹೋರಾಟ ಮಾಡಬೇಕು ಅಂತ 3 ತಂಡಗಳಲ್ಲಿ ರಾಜ್ಯ ಪ್ರವಾಸ ಮಾಡುತ್ತಿದ್ದೇವೆ. ರಾಜ್ಯ ಸರ್ಕಾರ ರೈತರನ್ನ ಸಂಪೂರ್ಣ ಮರೆತಿದೆ. ಸಿಎಂಗೆ ಯಾಕೆ ರೈತರ ಮೇಲೆ ಆಕ್ರೋಶ ಅನ್ನೋ ಪ್ರಶ್ನೆ ಕಾಡುತ್ತಿದೆ. ಕೇಂದ್ರದ ರೈತರಿಗೆ ಸಿಗುವ ಯೋಜನೆಗಳನ್ನ ಸಿಎಂ ಸಿದ್ದರಾಮಯ್ಯ ಬಂದ್ ಮಾಡುತ್ತಿದ್ದಾರೆ ಎಂದು ವಿಜಯೇಂದ್ರ ಆರೋಪಿಸಿದರು.

ಚುನಾವಣೆ ಗೆಲ್ಲುವ ಟೆಕ್ನಿಕ್ ಕಲಿತಿದ್ದಾರೆ: ಬೊಮ್ಮಾಯಿ ಅವರಿದ್ದಾಗ ರೈತ ವಿದ್ಯಾನಿಧಿ ಜಾರಿಗೆ ತಂದಿದ್ದರು, ಅದಕ್ಕೂ ಕಲ್ಲಾಕುವ ಕೆಲಸವನ್ನು ಸಿದ್ದರಾಮಯ್ಯ ಸರ್ಕಾರ ಮಾಡಿದೆ. ಮತದಾನಕ್ಕೂ ಮುಂಚೆ ಹಣ ವರ್ಗಾವಣೆ ಮಾಡಿ ಚುನಾವಣೆ ಗೆಲ್ಲುವ ಟೆಕ್ನಿಕ್ ಕಲಿತಿದ್ದಾರೆ.

ಆದರೆ ರೈತರಿಗೆ, ಜನರಿಗೆ ಮೋಸ ಮಾಡುತ್ತಿದ್ದಾರೆ. ಯಾವುದೇ ಅಭಿವೃದ್ಧಿ ಕೆಲಸಗಳು ಕೂಡಾ ನಡೆಯುತ್ತಿಲ್ಲ. ಆಡಳಿತ ಪಕ್ಷದ ಶಾಸಕರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬಂದಿದೆ ಅಂತ ಹೇಳುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ದೂರಿದರು.

# ಡಾ.ರಾಜ್‌ಕುಮಾರ್ ಅಭಿಮಾನಿಗಳೇ ದೇವರು ಅಂದಿದ್ರು, ನಮಗೆ ಮತದಾರರೇ ದೇವರು: ಸಿಎಂ ಸಿದ್ದರಾಮಯ್ಯ

**ಹಾಸನ:** ಡಾ.ರಾಜ್‌ಕುಮಾರ್ ಅವರು ಅಭಿಮಾನಿಗಳೇ ದೇವರು ಎಂದು ಹೇಳಿದ್ದರು. ಆದರೆ ನಮಗೆ ಮತದಾರರೇ ದೇವರುಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ರಾಜ್‌ಕುಮಾರ್ ಹೇಳಿಕೆಯನ್ನು ಉಲ್ಲೇಖ ಮಾಡುವ ಮೂಲಕ ಗಮನ ಸೆಳೆದಿದ್ದಾರೆ.

ಜೆಡಿಎಸ್ ಭದ್ರಕೋಟೆ ಹಾಸನದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಹಾಗೂ ಸ್ವಾಭಿಮಾನಿ ಸಮಿತಿಯ ಆಶ್ರಯದಲ್ಲಿ ನಡೆದ ಬೃಹತ್ ಜನಕಲ್ಯಾಣ ಸಮಾವೇಶ ಉದ್ದೇಶಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಜೆಡಿಎಸ್ ಹಾಗೂ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಅವರ ಕುಟುಂಬದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ದೇವೇಗೌಡರು ಸಿದ್ದರಾಮಯ್ಯನ್ನ ಹಣಕಾಸು ಮಂತ್ರಿ ಮಾಡಿದೆ, ಆಮೇಲೆ ಬೆಳ್ಕಂಡ ಅಂತಾರೆ. ಆದರೆ ದೇವೇಗೌಡರನ್ನು ಮುಖ್ಯಮಂತ್ರಿ ಮಾಡಿದವರು ನಾವು, ಅವ್ರು ನಮ್ಮನ್ನು ಬೆಳಸಲಿಲ್ಲ ಎಂದರು. ನಾವು ನಿಮ್ಮನ್ನ 1994 ರಲ್ಲಿ ಮುಖ್ಯಮಂತ್ರಿ ಮಾಡೋಕೆ ನಿಮ್ಮ ಜೊತೆ ನಿಲ್ಲದೇ ಹೋಗಿದ್ರೆ ನೀವು ಸಿಎಂ ಆಗ್ತಾ ಇರಲಿಲ್ಲ ಎಂದರು.

ದೇವೇಗೌಡರು ಜೆಡಿಎಸ್‌ನಲ್ಲಿ ಯಾರನ್ನೂ ಬೆಳೆಯಲು ಬಿಟ್ಟಿಲ್ಲ. ಬಿಎಲ್ ಶಂಕರ್, ವೈಕೆ ರಾಮಯ್ಯ ಅವರ ಮನೆ ಮಕ್ಕಳಂತಿದ್ರು, ಆದ್ರೂ ಅವರನ್ನು ಬೆಳೆಸಿಲ್ಲ. ನಮಗೆಲ್ಲಾ ರಾಜಕೀಯ ವನವಾಸ ಮಾಡಿಸಿದ್ರು, ಈಗ ತಮ್ಮ ವನವಾಸವನ್ನು ತಾವೇ ಅನುಭವಿಸುತ್ತಿದ್ದಾರೆ ಎಂದು ತಿರುಗೇಟು ನೀಡಿದರು.

ಕಳೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಮೂರು ಕ್ಷೇತ್ರಗಳಲ್ಲೂ ಗೆಲುವು ಸಾಧಿಸಿದೆ. ಅದರಲ್ಲೂ ಶಿಗ್ಗಾಂವಿಯಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ತಮ್ಮ ಪುತ್ರ ಭರತ್ ಬೊಮ್ಮಾಯಿಯನ್ನು ಗೆಲ್ಲಿಸಿಕೊಳ್ಳಲು ಆಗಲಿಲ್ಲ ಹಾಗೂ ಚನ್ನಪಟ್ಟಣ ಕ್ಷೇತ್ರದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಪುತ್ರ ನಿಖಿಲ್ ಕುಮಾಮಾರಸ್ವಾಮಿಯನ್ನು ಗೆಲ್ಲಿಸಿಕೊಳ್ಳಲು ಆಗಲಿಲ್ಲ ಎಂದು ಸಿಎಂ ಕುಟುಕಿದರು. ಹಾಗೆಯೇ ಸಂಡೂರಿನಲ್ಲೂ ಕೂಡ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಗೆಲುವು ಸಾಧಿಸಿದ್ದಾರೆ ಎಂದರು.ಬಿಜೆಪಿ, ಜೆಡಿಎಸ್ ಬಡವರಿಗೆ ಮೋಸ ಮಾಡುವಂತಹ ಕೆಲಸವನ್ನು ಮುಂದುವರೆಸಿವೆ. ಬಡವರಿಗೆ 7 ಕೆ.ಜಿ. ಅಕ್ಕಿ ಕೊಟ್ಟಿದ್ದು ನಾವು. ಬಿಜೆಪಿಯವರು ಯಡಿಯೂರಪ್ಪ ಸಿಎಂ ಆಗಿದ್ದ ವೇಳೆ ಅಕ್ಕಿಯನ್ನು 5 ಕೆ.ಜಿಗೆ ಇಳಿಸಿದರು. ಇಲ್ಲೇ ಗೊತ್ತಾಗುತ್ತದೆ ಬಡವರಿಗೆ ಯಾರು ಅನ್ಯಾಯ ಮಾಡುತ್ತಿದ್ದಾರೆ. ಅವರಿಗೆ ಬಿಪಿಎಲ್ ಕಾರ್ಡ್ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಅಂತಾ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.



ಇದೇ ವೇಳೆ ಗ್ಯಾರಂಟಿ ಯೋಜನೆಗಳ ಬಗ್ಗೆ ಮಾತನಾಡಿದ ಸಿಎಂ, ಯಾವುದೇ ಕಾರಣಕ್ಕೂ ನಮ್ಮ ಐದು ಗ್ಯಾರಂಟಿಗಳನ್ನು ನಿಲ್ಲಿಸುವುದಿಲ್ಲ. ನಮ್ಮದು ಬಡವರು, ಹಿಂದುಳಿದ ಪರ ಇರುವ ಪಕ್ಷವಾಗಿದೆ. ಆದ್ದರಿಂದ ಮುಂದಿನ ಬಾರಿಯೂ ಕೂಡ ನಮ್ಮ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದರು.

ಇಂದಿನ ಹಾಸನ ಸಮಾವೇಶ ಹೊಸ ಇತಿಹಾಸನ ಸೃಷ್ಟಿಸಲಿದೆ. ಹಾಸನದಲ್ಲಿ ಏಳು ವಿಧಾನ ಸಭಾ ಕ್ಷೇತ್ರ ಇವೆ. ಮುಂದಿನ ಬಾರಿ ಏಳಕ್ಕೆ ಏಳು ಗೆದ್ದೇ ಗೆಲ್ತೀವಿ ಅನ್ನೋ ಮಾತು ಹೇಳ್ತಿನಿ. ನನಗೆ ಅವರ ಮೇಲೆ ದ್ವೇಷ ಇಲ್ಲ, ಅವರಿಗೆ ಆರೋಗ್ಯ ಕೊಡಲಿ ಇನ್ನು ರಾಜಕಾರಣ ಮಾಡಲಿ. ಆದರೆ ರಾಜಕೀಯವಾಗಿ ಮುಗಿಸ್ತಿನಿ ಅಂತ ದ್ವೇಷದ ರಾಜಕಾರಣ ಮಾಡಬೇಡಿ. ಮುಂದಿನ ಚುನಾವಣೆಯಲ್ಲಿ ಇಲ್ಲಿ ಎಲ್ಲಾ ಸ್ಥಾನಗಳನ್ನು ಗೆಲ್ತೀವಿ ಅದಕ್ಕಾಗೆ ಈ ಸಮಾವೇಶ ಎಂದು ಸಿದ್ದರಾಮಯ್ಯ ಹೇಳಿದರು. ಹಾಸನದ ಮಹಾನ್ ನಾಯಕರ ಮೊಮ್ಮಗ ನಿಖಿಲ್ ಕುಮಾರಸ್ವಾಮಿಯನ್ನು ಚನ್ನಪಟ್ಟಣದಲ್ಲಿ, ಮಾಜಿ ಮುಖ್ಯಮಂತ್ರಿ ಎಸ್.ಆರ್.ಬೊಮ್ಮಾಯಿ ಅವರ ಮೊಮ್ಮಗನನ್ನು ಶಿಗ್ಗಾಂವಿಯಲ್ಲಿ ಜನ ಸೋಲಿಸಿ ನಮಗೆ ಆಶೀರ್ವದಿಸಿದ್ದಾರೆ.ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಮುಖ್ಯಮಂತ್ರಿ ಆಗುವಷ್ಟು ಬಹುಮತ ಈ ರಾಜ್ಯದ ಜನತೆ ಯಾವತ್ತೂ ಕೊಟ್ಟಿಲ್ಲ. ಒಮ್ಮೆ ಕಾಂಗ್ರೆಸ್ ಬೆಂಬಲದಲ್ಲಿ ಮತ್ತೊಮ್ಮೆ ಬಿಜೆಪಿ ಬೆಂಬಲದಲ್ಲಿ ಮುಖ್ಯಮಂತ್ರಿ ಆದರು. ಬಳಿಕ ಎರಡೂ ಪಕ್ಷಗಳಿಗೆ ವಂಚಿಸಿದರು ಎಂದು ಬೇಸರಿಸಿದರು.

ಹಾಸನದ ಹೆಣ್ಣು ಮಕ್ಕಳು ಕಣ್ಣೀರಲ್ಲಿ ಕೈತೊಳೆಯುತ್ತಿದ್ದಾರೆ. ಕೇಂದ್ರ ಸರ್ಕಾರ ರಾಜ್ಯದ ರೈತರ ಪಾಲಿನ ಸಬಾರ್ಡ್ ಸಾಲದಲ್ಲಿ ಶೇ.58 ರಷ್ಟನ್ನು ಕಡಿತಗೊಳಿಸಿದೆ. ಇದರಿಂದ ಹಾಸನದ ರೈತರು ಮತ್ತು ರಾಜ್ಯದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಮಗ ಎಂದುಕೊಂಡಿರುವ ಕುಮಾರಸ್ವಾಮಿಯವರು ಏಕೆ ಕೇಂದ್ರ ಸರ್ಕಾರವನ್ನು ಪ್ರಶ್ನಿಸುತ್ತಿಲ್ಲ? ನಬಾರ್ಡ್ ನಿಂದ ಆಗಿರುವ ಅನ್ಯಾಯವನ್ನು ಕುಮಾರಸ್ವಾಮಿ ಅವರು ಏಕೆ ಸರಿಪಡಿಸುತ್ತಿಲ್ಲ? ಕಳೆದ ಹಣಕಾಸು ವರ್ಷದಲ್ಲಿ ಕೇಂದ್ರದಿಂದ ರಾಜ್ಯಕ್ಕೆ ನಷ್ಟ ಆಗಿರುವ 11 ಸಾವಿರ ಕೋಟಿ ರೂಪಾಯಿಯನ್ನು ರಾಜ್ಯಕ್ಕೆ ಕೊಡಿಸಲು ಬಿಜೆಪಿ-ಜೆಡಿಎಸ್ ಏಕೆ ಬಾಯಿ ಬಿಡುತ್ತಿಲ್ಲ?

ಹಾಸನದಲ್ಲಿ ಇಂದು ನಡೆದ ಜನಕಲ್ಯಾಣೋತ್ಸವದ ಅಭೂತಪೂರ್ವ ಯಶಸ್ಸು ನನಗೆ ಆನೆಬಲ ನೀಡಿದೆ.ನನ್ನ ಮತ್ತು ಪಕ್ಷದ ಮೇಲಿನ ಪ್ರೀತಿಯಿಂದ ದೂರದೂರದ ಊರುಗಳಿಂದ ಆಗಮಿಸಿ, ಅನ್ಯಾಯ, ಅಪಪ್ರಚಾರ,ದ್ವೇಷರಾಜಕಾರಣದ ವಿರುದ್ಧದ ನನ್ನ ದನಿಗೆ ದನಿಗೂಡಿಸಿದ ನನ್ನ ಎಲ್ಲಾ ಅಭಿಮಾನಿಗಳು ಮತ್ತು ಪಕ್ಷದ ಕಾರ್ಯಕರ್ತರಿಗೆ ನಾನು ಋಣಿ. ಎಂದರು.

ಈ ಕಾರ್ಯಕ್ರಮದ ಆಯೋಜನೆಗೆ ಶ್ರಮಿಸಿದ ಶೋಷಿತ ಸಮುದಾಯಗಳ ಸಂಘಟನೆಗಳು ಮತ್ತು ಪಕ್ಷದ ನಾಯಕರಿಗೆ ಅನಂತ ಧನ್ಯವಾದಗಳು.ಜನತೆಯ ಸೇವೆಯೇ ಜನಾರ್ಧನನ ಸೇವೆ. ಅಧಿಕಾರವೆಂಬುದು ಜನಸೇವೆ ಮಾಡಲು ಒದಗಿಬಂದ ಅವಕಾಶ ಎಂದು ಪ್ರಾಮಾಣಿಕವಾಗಿ ನಂಬಿದವನು ನಾನು.ಸತ್ಯ, ಧರ್ಮ ಮತ್ತು ನ್ಯಾಯದ ನಡಿಗೆಯಲ್ಲಿ ನನ್ನ ಜೊತೆ ಈ ನಾಡಿನ ಪ್ರಜ್ಞಾವಂತರು, ಶೋಷಿತ ಜನರು ಇದ್ದಾರೆ ಎಂಬುದಕ್ಕೆ ಇಂದು ಸೇರಿದ್ದ ಜನಸಾಗರ ಸಾಕ್ಷಿ. ನಿಮ್ಮೆಲ್ಲರ ಪ್ರೀತಿ - ಆಶೀರ್ವಾದ ಇರುವ ವರೆಗೆ ರಾಜಕೀಯ ವಿರೋಧಿಗಳ ಯಾವ ಷಡ್ಯಂತ್ರ, ಬೆದರಿಕೆಗಳಿಗೆ ನಾನು ಜಗ್ಗುವುದೂ ಇಲ್ಲ, ಕುಗ್ಗುವುದೂ ಇಲ್ಲ.ಎಲ್ಲವನ್ನೂ ಎದುರಿಸಿ ಗೆಲ್ಲುತ್ತೇನೆ. ನಾನು ಸತ್ಯದ ಪರವಾಗಿದ್ದೇನೆ, ಅಂತಿಮವಾಗಿ ಗೆಲ್ಲುವುದು ಸತ್ಯವೇ ಎಂದು ತಿಳಿಸಿದರು.

# ಉರುಕತ್ತಮ್ಮನವರ ಮೂರನೇ ವರ್ಷದ ವಾರ್ಷಿಕೋತ್ಸವ

ಚಾಮರಾಜನಗರ: ತಾಲ್ಲೂಕಿನ ಗೂಳಿಪುರ ಗ್ರಾಮದಲ್ಲಿ ಜಗನ್ಮಾತೆ ಉರುಕತ್ತಮ್ಮನವರ ಮೂರನೇ ವರ್ಷದ ವಾರ್ಷಿಕೋತ್ಸವ ಭಕ್ತಿ ಸಡಗರದೊಂದಿಗೆ ವಿಜೃಂಭಣೆಯಿಂದ ನಡೆಯಿತು.

ಉರುಕತ್ತಮ್ಮ ದೇವಸ್ಥಾನದಲ್ಲಿ ಮುಂಜಾನೆಯಿಂದಲೇ ಹೋಮ ಹವನ ನೆರವೇರಿಸಿ ಮಧ್ಯಾಹ್ನ ಮಹಾ ಮಂಗಳಾರತಿ ಮಾಡಲಾಯಿತು.

ಗ್ರಾಮದ ಎಲ್ಲಾ ಭಕ್ತರು ಭಾಗವಹಿಸಿ ತಾಯಿ ಉರುಕತ್ತೇಶ್ವರಿ ಅಮ್ಮನವರ ಕೃಪೆಗೆ ಪಾತ್ರರಾದರು. ಪೂಜೆಯ ನಂತರ ಎಲ್ಲಾರಿಗೂ ಅನ್ನಸಂತರ್ಪಣೆ ಮಾಡಲಾಯಿತು. ಒಟ್ಟಾರೆಯಾಗಿ ಗೂಳಿಪುರ ಗ್ರಾಮ ದಲ್ಲಿ ಗುರುವಾರ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಈ ಸಂದರ್ಭದಲ್ಲಿ ತಮ್ಮಡಿ ನಾಗರಾಜು, ಪುಟ್ಟ ಸ್ವಾಮಿ, ಯಜಮಾನ್ರು ದೊರೆಸ್ವಾಮಿನಾಯಕ, ಅಂಗಡಿ ಮಹಾದೇವನಾಯಕ, ರಂಗಸ್ವಾಮಿ,ನಾಗೇಶ್ ಮುಖಂಡರಾದ ರವೀಶ್, ಹೋಟೆಲ್ ನಾಗಣ್ಣ, ಬಿಳಿಗಿರಿ ರಂಗನಾಯಕ, ರಾಚನಾಯಕ, ಮಾದೇಶ್ ಕುಮಾರ್, ಗುರುಲಿಂಗ, ಚಾಮುಂಡಿ, ಸೋಮು, ಬಿಳಿಗಿರಿ,ಕಡ್ಡಾ, ಶಿವಕುಮಾರ್, ನಂಜುಂಡಸ್ವಾಮಿ, ರಾಮು, ಶ್ರೀನಿವಾಸ್, ಗ್ರಾಮಸ್ಥರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರು.



# ತಾಲೂಕಿಗೆ ಕನ್ನಡ ಸಾಹಿತ್ಯ ಸಮ್ಮೇಳನ ರಥ ಆಗಮನ: ಸಂಭ್ರಮದ ಸ್ವಾಗತ



**ಚಾಮರಾಜನಗರ** : 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಕನ್ನಡ ಜ್ಯೋತಿ ಹೊತ್ತ ರಥಯಾತ್ರೆ ಗುರುವಾರ ಚಾಮರಾಜನಗರ ತಾಲೂಕಿಗೆ ಪ್ರವೇಶಿಸಿತು.

ಯಳಂದೂರು ತಾಲೂಕಿನಿಂದ ಹೊರಟ ಕನ್ನಡ ಸಾಹಿತ್ಯ ಸಮ್ಮೇಳನ ರಥವನ್ನು ಮೆಲ್ಲಹಳ್ಳಿ ಗೇಟ್ ಬಳಿ ಚಾಮರಾಜನಗರ ತಾಲೂಕು ತಹಶೀಲ್ದಾರ್ ಗಿರಿಜಾ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಲಿಂಗರಾಜು, ಇನ್ನಿತರರು ಸಡಗರದಿಂದ ಬರ ಮಾಡಿಕೊಂಡರು. ಈ ವೇಳೆ ಯಳಂದೂರು ತಹಶೀಲ್ದಾರ್ ಜಯಪ್ರಕಾಶ್, ಇತರೆ ಅಧಿಕಾರಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ರಥವನ್ನು ಬೀಳ್ಕೊಟ್ಟರು.

ಬಳಿಕ ಚಾಮರಾಜನಗರ ಪಟ್ಟಣಕ್ಕೆ ಕನ್ನಡ ಸಾಹಿತ್ಯ ಸಮ್ಮೇಳನ ರಥ ಆಗಮಿಸುತ್ತಿದ್ದಂತೆ ಸಂತೇಮರಹಳ್ಳಿ ವೃತ್ತದ ಹತ್ತಿರದ ಆದಿಶಕ್ತಿ ದೇವಾಲಯದ ಬಳಿ ಅದ್ದೂರಿಯಾಗಿ ಸ್ವಾಗತಿಸಲಾಯಿತು. ನಗರಸಭೆ ಅಧ್ಯಕ್ಷರಾದ ಸುರೇಶ್, ಉಪಾಧ್ಯಕ್ಷರಾದ ಮಮತ ಬಾಲಸುಬ್ರಹ್ಮಣ್ಯ, ಸದಸ್ಯರಾದ ಚಂದ್ರಶೇಖರ್, ತಹಶೀಲ್ದಾರ್ ಗಿರಿಜಾ, ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಶೈಲಕುಮಾರ್, ತಾಲೂಕು ಅಧ್ಯಕ್ಷರಾದ ಸುರೇಶ್ ಋಗ್ವೇದಿ, ನಗರಸಭೆ ಆರೋಗ್ಯ ನಿರೀಕ್ಷಕರಾದ ಮಂಜುನಾಥ್, ಇನ್ನಿತರ ಅಧಿಕಾರಿಗಳು ಸಮ್ಮೇಳನ ರಥವನ್ನು ಬರಮಾಡಿಕೊಂಡರು.

ಶ್ರೀ ಚಾಮರಾಜೇಶ್ವರ ದೇವಾಲಯದ ಬಳಿ ಆಗಮಿಸಿದ ಕನ್ನಡ ಸಾಹಿತ್ಯ ಸಮ್ಮೇಳನ ರಥವನ್ನು ಕನ್ನಡಪರ ಸಂಘಟನೆಗಳ ಮುಖಂಡರಾದ ಚಾ.ರಂ. ಶ್ರೀನಿವಾಸಗೌಡ, ಚಾ.ಗು. ನಾಗರಾಜು, ಪಣ್ಯದಹುಂಡಿ ರಾಜು, ಚಾ.ವೆಂ. ರಾಜಗೋಪಾಲ್, ಮಾಂಬಳ್ಳಿ ಅರುಣ್ ಕುಮಾರ್, ಇನ್ನಿತರರು ಅದ್ದೂರಿಯಾಗಿ ಸ್ವಾಗತಿಸಿದರು.

## ಮಾನವ-ಪ್ರಾಣಿ ಸಂಘರ್ಷ: ತ.ನಾಡು ಮಾದರಿ ಅಧ್ಯಯನ ಮಾಡುವಂತೆ ಅಧಿಕಾರಿಗಳಿಗೆ ಖಂಡ್ರೆ ಸೂಚನೆ

**ಬೆಂಗಳೂರು:** ಮಾನವ-ಪ್ರಾಣಿ ಸಂಘರ್ಷಗಳನ್ನು ನಿಯಂತ್ರಿಸುವಲ್ಲಿ ತಮಿಳುನಾಡು ಅನುಸರಿಸುತ್ತಿರುವ ವಿಧಾನಗಳ ಪರಿಣಾಮಕಾರಿತ್ವದ ಕುರಿತು ಅಧ್ಯಯನ ಮಾಡುವಂತೆ ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಅವರು ಗುರುವಾರ ಅರಣ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕರ್ನಾಟಕದಲ್ಲಿ ಆನೆಗಳ ಸಂಖ್ಯೆ ಕೇವಲ 5,395 ರಷ್ಟಿದೆ. ಜೀವ ಮತ್ತು ಬೆಳೆ ಹಾನಿಯನ್ನು ತಡೆಯಲು ಪರ್ಯಾಯ ಯೋಜನೆಯನ್ನು ರೂಪಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.



ಕೊಡಗು, ಹಾಸನ, ಸಕಲೇಶಪುರ, ಶಿವಮೊಗ್ಗ, ಚಿಕ್ಕಮಗಳೂರು, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಮಾನವ-ಪ್ರಾಣಿ ಸಂಘರ್ಷದಿಂದ ಹೆಚ್ಚು ಹಾನಿಯಾಗುತ್ತಿದೆ.

ಪ್ರಸ್ತುತ ಕರ್ನಾಟಕವು ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಿರುವ ಹಳ್ಳಿಗಳಿಗೆ ಆನೆಗಳು ನುಗ್ಗದಂತೆ ತಡೆಯಲು ರೈಲ್ವೆ ಹಳಿಗಳನ್ನು ಬಳಸಿ ಬ್ಯಾರಿಕೇಡ್ ನಿರ್ಮಿಸಲು ಪ್ರತಿ ಕಿಲೋಮೀಟರ್‌ಗೆ 1.5 ಕೋಟಿ ರೂ. ವೆಚ್ಚವಾಗುತ್ತಿದ್ದು, ಕರ್ನಾಟಕವು ಇದುವರೆಗೆ 312 ಕಿ.ಮೀ. ಬ್ಯಾರಿಕೇಡ್ ನಿರ್ಮಿಸಿದೆ.

ಆದರೆ ತಮಿಳುನಾಡು ಪ್ರತಿ ಕಿಲೋಮೀಟರ್‌ಗೆ ಕೇವಲ 45 ಲಕ್ಷ ರೂಪಾಯಿ ವೆಚ್ಚದಲ್ಲಿ ಉಕ್ಕಿನ ಹಗ್ಗಗಳನ್ನು ಬಳಸುತ್ತಿದೆ. ಸ್ಟೀಲ್ ಹಗ್ಗಗಳು ಆನೆಗಳು ಮತ್ತು ಇತರ ಕಾಡು ಪ್ರಾಣಿಗಳ ಅತಿಕ್ರಮಣವನ್ನು ತಡೆದುಕೊಳ್ಳುತ್ತದೆಯೇ ಎಂಬುದನ್ನು ನಾವು ನೋಡಬೇಕು. ಈ ಬಗ್ಗೆ ಪರಿಶೀಲಿಸಿ 10 ದಿನದೊಳಗೆ ವರದಿ ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈಲ್ವೆ ಹಳಿ ಬಳಸಿದ ಬೇಲಿಗಳನ್ನು ಅಳವಡಿಸುವ ಮೊದಲು ಮತ್ತು ನಂತರದ ಜೀವಹಾನಿ ಮತ್ತು ಬೆಳೆ ಹಾನಿಯ ಬಗ್ಗೆ ತುಲನಾತ್ಮಕ ವರದಿಯನ್ನು ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಆದೇಶಿಸಿದರು.

ಈ ಸಂಬಂಧ ಎಲ್ಲಾ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೂ ಸೂಚನೆ ರವಾನಿಸಲಾಗಿದೆ ಎಂದು ಸಚಿವ ಖಂಡ್ರೆ ಅವರ ಕಚೇರಿಯ ಪತ್ರಿಕಾ ಪ್ರಕಟಣೆ ತಿಳಿಸಿದೆ.

# ಮೀಸಲಾತಿ ಕೊಟ್ಟರೆ ಮುತ್ತಿನ ಹಾರ, ಕೊಡದಿದ್ದರೆ ಸುವರ್ಣಸೌಧಕ್ಕೆ ಮುತ್ತಿಗೆ

**ಬೆಳಗಾವಿ:** 2ಎ ಮೀಸಲಾತಿಗೆ ಆಗ್ರಹಿಸಿ ಮತ್ತೆ ಪಂಚಮಸಾಲಿ ಸಮಾಜ ಸಿಡಿದೆದ್ದಿದೆ. ಚಳಿಗಾಲ ಅಧಿವೇಶನದ ವೇಳೆ ಕೂಡಲಸಂಗಮದ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಬೃಹತ್ ಟ್ರ್ಯಾಕ್ಟರ್ ರ್‍ಯಾಲಿಗೆ ಸಿದ್ಧತೆ ನಡೆದಿದೆ. ಕಾಲಿಗೆ ಚಕ್ರ ಕಟ್ಟಿಕೊಂಡಂತೆ ಸ್ವಾಮೀಜಿ ಹಳ್ಳಿಹಳ್ಳಿಗೆ ಭೇಟಿ ನೀಡಿ ಜನರನ್ನು ಜಾಗೃತಿಗೊಳಿಸುತ್ತಿದ್ದಾರೆ.

"ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಸುಮಾರು 18 ತಿಂಗಳಿನಿಂದ ಶಾಂತಿಯುತವಾಗಿ ಹೋರಾಡಿದ್ದೇವೆ. ಆದರೂ ಸೌಜನ್ಯಯುತವಾಗಿಯೂ ಕರೆದು ನಮ್ಮನ್ನು ಮಾತನಾಡಿಸಲಿಲ್ಲ. ವಕೀಲರು ಹೋರಾಟ ಮಾಡಿದ ಮೇಲೆ, ಬೆಂಗಳೂರಿಗೆ ಕರೆಸಿ ಮುಖ್ಯಮಂತ್ರಿಗಳು ಮಾತನಾಡಿದರು. ಆದರೆ, ಆ ವೇಳೆ ಯಾವುದೇ ಭರವಸೆ ಮತ್ತು ಸಮಯಾವಕಾಶವನ್ನೂ ಕೊಡಲಿಲ್ಲ. ಇದು ನಮಗೆ ಮತ್ತು ವಕೀಲರಿಗೆ ತೀವ್ರ ನಿರಾಸೆ ತಂದಿತು" ಎಂದು ಸ್ವಾಮೀಜಿ ಬೇಸರಿಸಿದರು.

"ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ನೀಡುವಲ್ಲಿ ನಿರ್ಲಕ್ಷ್ಯ ತೋರಿದ ಸರ್ಕಾರಗಳ ವಿರುದ್ಧ ಚಳಿಗಾಲ ಅಧಿವೇಶನ ವೇಳೆ ಧರಣಿ ಮಾಡುತ್ತಾ ಬಂದಿದ್ದೇವೆ. ಹಿಂದೆ ಜಗದೀಶ ಶೆಟ್ಟರ್ ಮುಖ್ಯಮಂತ್ರಿ ಆಗಿದ್ದಾಗಲೂ ಸೌಧಕ್ಕೆ ಮುತ್ತಿಗೆ ಹಾಕಿದ್ದೆವು. 2020ರಲ್ಲಿ ಯಡಿಯೂರಪ್ಪ ಸರ್ಕಾರ, 2022ರಲ್ಲಿ ಬೊಮ್ಮಾಯಿ ಸರ್ಕಾರಕ್ಕೂ ಬಿಸಿ ಮುಟ್ಟಿಸಿದ್ದೆವು. ಈಗ ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಯಾವುದೇ ಸ್ಪಂದನೆ ಸಿಗದ ಹಿನ್ನೆಲೆಯಲ್ಲಿ 5 ಸಾವಿರ ಟ್ರ್ಯಾಕ್ಟರ್, 10 ಸಾವಿರ ವಕೀಲರ ನೇತೃತ್ವದಲ್ಲಿ, ಲಕ್ಷಾಂತರ ಪಂಚಮಸಾಲಿ ಸಮುದಾಯದವರು ಸೌಧಕ್ಕೆ ಮುತ್ತಿಗೆ ಹಾಕಲಿದ್ದೇವೆ. ಮೀಸಲಾತಿ ಘೋಷಿಸುವವರೆಗೂ ಅಲ್ಲೇ ಧರಣಿ ಮುಂದುವರಿಸುತ್ತೇವೆ" ಎಂದು ಸ್ವಾಮೀಜಿ ತಿಳಿಸಿದರು.

ಪಂಜಾಬ್ ಮಾದರಿ ಟ್ರ್ಯಾಕ್ಟರ್ ರ್‍ಯಾಲಿ: "ದೆಹಲಿಯಲ್ಲಿ ಪಂಜಾಬ್ ರೈತರ ಮೆರವಣಿಗೆ ಮಾದರಿಯಲ್ಲಿ ನಾವು ಟ್ರ್ಯಾಕ್ಟರ್ ಮೆರವಣಿಗೆಗೆ ಸಜ್ಜಾಗಿದ್ದೇವೆ. ಆದರೆ, ನಮ್ಮದು ಕಾನೂನಿಗೆ ಪೂರಕವಾಗಿ, ಬಸವಣ್ಣನವರ ಶಾಂತಿ ತತ್ವ, ರಾಣಿ ಚನ್ನಮ್ಮನವರ ಹೋರಾಟ ಪ್ರೇರಣೆಯಾಗಿಸಿಕೊಂಡು ಶಾಂತಿಯುತ ಪ್ರತಿಭಟನೆ ಕೈಗೊಳ್ಳುತ್ತೇವೆ. ಡಿ.7ರಂದು ಬೆಳಗಾವಿಯಲ್ಲಿ ಸಮಾಜದ ಹಾಲಿ-ಮಾಜಿ ಶಾಸಕರು, ಮುಖಂಡರ ಸಭೆ ಕರೆದಿದ್ದೇವೆ. ಟ್ರ್ಯಾಕ್ಟರ್ ರ್‍ಯಾಲಿ ಎಲ್ಲಿಂದ ಆರಂಭಿಸಬೇಕು, ಸಮಾವೇಶ ಹೇಗಿರಬೇಕು, ಸೌಧಕ್ಕೆ ಮುತ್ತಿಗೆ ಹಾಕುವ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ನಿರ್ಧರಿಸುತ್ತೇವೆ" ಎಂದು ತಿಳಿಸಿದರು.

**ಡಿ.10ರಂದು ಮುತ್ತಿಗೆ:** "ಕಳೆದ ನಾಲ್ಕು ವರ್ಷಗಳಲ್ಲಿ ನಮ್ಮ ಹೋರಾಟ ಹತ್ತಿಕ್ಕಲು ಅನೇಕರು ಯತ್ನಿಸಿದ್ದಾರೆ. ಆದರೆ, ನಮ್ಮೊಳಗಿನ ಪ್ರಾಮಾಣಿಕ ಹೋರಾಟದ ಗುಣ, ಸಾಮಾಜಿಕ ನ್ಯಾಯದ ಪರ ಇರೋದರಿಂದ ಜನರ ರೂಪದಲ್ಲಿ ದೇವರು ನಮಗೆ ಶಕ್ತಿ ತುಂಬುತ್ತಿದ್ದಾನೆ. ಬಸವಣ್ಣ, ಚನ್ನಮ್ಮಾಜಿ ಕಾಲದಲ್ಲೂ ಅಂಥ ಮನಸ್ಥಿತಿಗಳು ಇದ್ದವು. ಹಾಗಾಗಿ, ಯಾವುದೇ ಜನಪ್ರತಿನಿಧಿ, ಮುಖಂಡರ ಗಾಸಿಪ್ ಮಾತುಗಳಿಗೆ ಯಾರೂ ಕಿವಿಗೊಡಬಾರದು. ಡಿ.10ರಂದು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕುವುದು ಶತಸಿದ್ಧ. ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಜನರು ಹೋರಾಟದಲ್ಲಿ ಪಾಲ್ಗೊಳ್ಳಬೇಕು" ಎಂದು ಸ್ವಾಮೀಜಿ ಕರೆ ನೀಡಿದರು.



"ಹೋರಾಟಕ್ಕೂ ಮೊದಲು ಮೀಸಲಾತಿ ಘೋಷಿಸಿದರೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ 15 ಅಡಿ ಎತ್ತರದ ಮುತ್ತಿನ ಹಾರ ಹಾಕಿ, ಚನ್ನಮ್ಮಾಜಿ ಪುತ್ಥಳಿ ನೀಡಿ ಸನ್ಮಾನಿಸುತ್ತೇವೆ. ಮೀಸಲಾತಿ ಆದೇಶ ಪತ್ರ ಕೊಡದಿದ್ದರೆ ಮುತ್ತಿಗೆ ಹಾಕುವುದು ಶತಸಿದ್ಧ" ಎಂದು ಸ್ವಾಮೀಜಿ ಎಚ್ಚರಿಕೆ ನೀಡಿದರು.

ಪುರುಷರು ಬಸವಣ್ಣ, ಮಹಿಳೆಯರು ಚನ್ನಮ್ಮನಂತೆ ಬನ್ನಿ: "ಹಿಂದೆ ಬೆಂಗಳೂರಲ್ಲಿ 10 ಲಕ್ಷ, ಬೆಳಗಾವಿಯಲ್ಲಿ 20 ಲಕ್ಷ ಜನರನ್ನು ಸೇರಿಸಿ ಶಕ್ತಿ ಪ್ರದರ್ಶನ ಮಾಡಿದ್ದೇವೆ. ಹಾಗಾಗಿ, ಈ ಬಾರಿ ಶಕ್ತಿ ಪ್ರದರ್ಶನದ ಜೊತೆಗೆ ಸರ್ಕಾರದಿಂದ ನಮಗಾಗಿರುವ ಅಸಮಾನತೆ, ನೋವು ವ್ಯಕ್ತಪಡಿಸಲು ಲಕ್ಷಾಂತರ ಸಂಖ್ಯೆಯಲ್ಲಿ ಸೇರುತ್ತೇವೆ. ಪ್ರತೀ ಊರಿನಿಂದ ಕನಿಷ್ಟ 1 ಟ್ರ್ಯಾಕ್ಟರ್ ತರಬೇಕು. ತಮ್ಮ ವಾಹನಗಳಲ್ಲಿ ಜನರನ್ನು ಕರೆತರಬೇಕು. ಟ್ರ್ಯಾಕ್ಟರ್ ಮೂಲಕ ರಸ್ತೆ ತಡೆದು, ವಾಹನಗಳಲ್ಲಿ ಬರುವವರು ಸೌಧಕ್ಕೆ ಮುತ್ತಿಗೆ ಹಾಕಲಾಗುವುದು. ಪುರುಷರು ಬಸವಣ್ಣ, ಮಹಿಳೆಯರು ಚನ್ನಮ್ಮನಂತೆ ಪಾಲ್ಗೊಳ್ಳಬೇಕು" ಸ್ವಾಮೀಜಿ ಇದೇ ವೇಳೆ ಕರೆ ನೀಡಿದರು.

## ಸುದ್ದಿ ಸಂಜೆ

### ಅವಧಿ ವಿಸ್ತರಣೆ

**ಚಾಮರಾಜನಗರ:** ಹಿಂದುಳಿದ ವರ್ಗಗಳ 'ಇಲಾಖೆಯಿಂದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆಅಲೆಮಾರಿ ಪ್ರವರ್ಗ-1ರ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನ, ಶುಲ್ಕಮರುಪಾವತಿ,ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 20 ರವರೆಗೆ ವಿಸ್ತರಿಸಲಾಗಿದೆ.ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ,ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ 2024-25ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಸೌಲಭ್ಯಕ್ಕೆ ಆನ್‌ಲೈನ್‌ಮೂಲಕ ವೆಬ್‌ಸೈಟ್ https://ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in, ಇಲಾಖಾ ಸಹಾಯವಾಣಿ ದೂ.ಸಂ 8050770005, ಇ-ಮೇಲ್ bcwdhelpline@gmail.in, ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್ postmatrichelp@karnataka.gov.in ಮತ್ತು ದೂ.ಸಂ 1902 ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 20 ಅಂತಿಮ ದಿನವಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುರಿ ಮೇಕೆ ಘಟಕ: ಅರ್ಜಿ ಆಹ್ವಾನ

**ಚಾಮರಾಜನಗರ:** ಕರ್ನಾಟಕ ಕುರಿಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ 2024-25ನೇ ಸಾಲಿಗೆ ಗಿರಿಜನ ಉಪಯೋಜನೆಯಡಿ ನೀಡಲಾಗುವ ಕುರಿ, ಮೇಕೆ ಘಟಕ ಸಹಾಯಧನಕ್ಕಾಗಿ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಪಂಗಡದ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ 10 ಸುಧಾರಿತ ಹೆಣ್ಣು ಕುರಿ, ಮೇಕೆ, 1 ಟಗರು/ಹೋತ ಒಟ್ಟು ಘಟಕ ವೆಚ್ಚ 66 ಸಾವಿರ ರೂ. ಗಳಿದ್ದು ಶೇ.90 ರಷ್ಟು ಸಹಾಯಧನ ಹೊಂದಿರುತ್ತದೆ. 18 ರಿಂದ 60 ವರ್ಷದೊಳಗಿನ ಮಹಿಳಾ ಹಾಗೂ ಪುರುಷ ಸದಸ್ಯರು ಅರ್ಜಿ ಸಲ್ಲಿಸಬಹುದು. ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಮೂಲಕ ಡಿ.15ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದಲ್ಲಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ ಅಥವಾ ಚಾಮರಾಜನಗರದ ಪಶು ಆಸ್ಪತ್ರೆ ಆವರಣದಲ್ಲಿರುವ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸುವಂತೆ ನಿಗಮದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸ್ಕೇಟಿಂಗ್: ಶಿಡ್ಲಘಟ್ಟ ವಿದ್ಯಾರ್ಥಿಗಳಿಗೆ ಜಯ

ಶಿಡ್ಲಘಟ್ಟ : ಶಿಡ್ಲಘಟ್ಟ ಸ್ಪೀಡ್ ಸ್ಕೇಟಿಂಗ್ ಅಸೋಸಿಯೇಷನ್ ವಿದ್ಯಾರ್ಥಿಗಳು ಗೌರಿಬಿದನೂರಿನ ನೇತಾಜಿ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ಜಯ ಸಾದಿಸಿದ್ದು ನಾಲ್ಕು ಪ್ರಥಮ, ಎರಡು ದ್ವಿತೀಯ ಹಾಗು ಎರಡು ತೃತೀಯ ಸ್ಥಾನಗಳನ್ನು ಪಡೆದಿದ್ದಾರೆ.ಪ್ರಶಸ್ತಿ ವಿಜೇತರು:ನಿರಂಜನ್ (10 ವರ್ಷ): 500 ಮೀಟರ್ ಮತ್ತು 1000 ಮೀಟರ್ ಕ್ವಾಡ್ ಸ್ಕೇಟಿಂಗ್‌ನಲ್ಲಿ ಎರಡು ಪ್ರಥಮ ಸ್ಥಾನ ಪಡೆದಿದ್ದಾರೆ.ರಿತ್ವಿಕ್ (10 ವರ್ಷ): 500 ಮೀಟರ್‌ನಲ್ಲಿ ದ್ವಿತೀಯ ಹಾಗೂ 1000 ಮೀಟರ್‌ನಲ್ಲಿ ತೃತೀಯ ಸ್ಥಾನ ಜಯಿಸಿದ್ದಾರೆ. ಮೋಹನ್ (10 ವರ್ಷ): 500 ಮೀಟರ್‌ನಲ್ಲಿ ತೃತೀಯ ಮತ್ತು 1000 ಮೀಟರ್‌ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.ಸಿ.ತನ್ಮಯಿ (12 ವರ್ಷ): 500 ಮೀಟರ್ ಮತ್ತು 1000 ಮೀಟರ್ ಕ್ವಾಡ್ ಸ್ಕೇಟಿಂಗ್‌ನಲ್ಲಿ ಎರಡು ಪ್ರಥಮ ಸ್ಥಾನ ಗಳಿಸಿದ್ದಾರೆ.ಸ್ಕೇಟಿಂಗ್ ತರಬೇತುದಾರ ಅರುಣ್ ಕುಮಾರ್ ಅವರು ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದು ಈ ಸಾಧನೆ ಉತ್ತಮ ಪರಿಶ್ರಮದ ಫಲವಾಗಿದೆ ಎಂದು ಶ್ಲಾಘಿಸಿದರು. ಈ ವಿಜೇತ ವಿದ್ಯಾರ್ಥಿಗಳು ಮುಂದಿನ ಹಂತದ ಸ್ಕೇಟಿಂಗ್ ಪಂದ್ಯಾವಳಿಗಳತ್ತ ಗಮನಹರಿಸಿದ್ದು, ತಮಗೆ ಮತ್ತಷ್ಟು ಯಶಸ್ಸು ತರುವ ಭರವಸೆ ವ್ಯಕ್ತಪಡಿಸಿದ್ದಾರೆ.

### ಗುಂಡಿಗಳಿಂದ ತುಂಬಿರುವ ರಸ್ತೆ

**ಮಾಲೂರು:** ತಾಲ್ಲೂಕಿನ ಲಕ್ಕೂರು ಹೋಬಳಿಯ ಕೋಡಿಹಳ್ಳಿ ಗೇಟ್ ಬಳಿ ಗುಂಡಿಯಲ್ಲಿ ಕೆ.ಎಸ್.ಆರ್.ಟಿ.ಸಿ.ಬಸ್ ನಿಂತು ಹೋದ ಹಿನ್ನೆಲೆಯಲ್ಲಿ ಸುಮಾರು 2-3 ಕೀ.ಮಿ ವಾಹನಗಳ ಜಾಮ್. ಜಾಮ್‌ನಿಂದ ಶಾಲಾ ವಾಹನಗಳು, ಕಾರ್ಮಿಕರು, ವಾಹನ ಸವಾರರು, ಸಾರ್ವಜನಿಕರು ಪರದಾಡುವಂತ ಪರಿಸ್ಥಿತಿ ನಿರ್ಮಾಣವಾಗಿತ್ತು. ಇತ್ತೀಚೆಗೆ ಸತತವಾಗಿ ಬಾರಿ ಮಳೆಗಳು ಸುರಿದ ಹಾಗೂ ಅಧಿಕ ಭಾರದ ವಾಹನಗಳ ಸಂಚಾರದ ಹಿನ್ನೆಲೆಯಲ್ಲಿ ರಸ್ತೆಗಳು ಹದಗೆಟ್ಟು ಬಾರಿ ಗಾತ್ರದ ಗುಂಡಿಗಳು ಬಿದ್ದಿದ್ದು, ಹೆಚ್ಚು ಮಳೆ ಸುರಿಯುತ್ತಿರುವುದರಿಂದ ಗುಂಡಿಗಳಲ್ಲಿ ಮಳೆಯ ನೀರು ನಿಂತು ಗುಂಡಿ ಯಾವುದು ರಸ್ತೆ ಯಾವುದು ಎನ್ನುವುದು ಗೊತ್ತಾಗಿದೆ ಕೆ.ಎಸ್.ಅರ್.ಟಿ.ಸಿ ಬಸ್ ಚಾಲಕ ಗುಂಡಿಯಲ್ಲಿ ಬಿಟ್ಟಿದರಿಂದ ಬಸ್ ಗುಂಡಿಯಲ್ಲಿ ಸಿಲುಕಿ ಹಿಂದೆ ಬರುವ ವಾಹನಗಳು ಸೀತನಾಯಕನಹಳ್ಳಿವರೆಗೆ ಹಾಗೂ ಜಯಮಂಗಲ ಗ್ರಾಮದವರೆಗೆ 2-3 ಕಿ.ಮೀ ನಿಂತು ವಾಹನ ಸವಾರರು ಪರದಾಡುವಂತ ಪರಿಸ್ಥಿತಿ ನಿರ್ಮಾಣ ವಾಗಿ ಶಾಲಾ ಕಾಲೇಜುಗಳ ವಾಹನ, ಕಾರ್ಮಿಕರು, ವಾಹನ ಸವಾರರು 2 ಗಂಟೆಗಳ ರಸ್ತೆಯಲ್ಲಿ ನಿಲ್ಲುವಂತ ಘಟನೆ ನಡೆಯಿತು. ಅಧಿಕಾರಿಗಳ ಬಿರುದ್ದ ಹಿಡಿ ಶಾಪ ಹಾಕಿ ಇನ್ನಾದರೂ ಸಂಬಂಧ ಪಟ್ಟ ಅಧಿಕಾರಗಳು ಇತ್ತ ಗಮನಹರಿಸಿ ತಾತ್ಕಾಲಿಕವಾಗಿ ಗುಂಡಿಗಳನ್ನು ಮುಚ್ಚಿ ವಾಹನ ಸವಾರರ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವರೇ ಎನ್ನುವುದು ಸಾರ್ವಜನಿಕರ ಯಕ್ಷ ಪ್ರಶ್ನೆಯಾಗಿದೆ.

ಮುಸ್ಸಂಜೆ



# ರಾಷ್ಟ್ರದ ಸಂರಕ್ಷಣೆ ಸೈನಿಕರ ಮಹಾ ಕೊಡುಗೆ

ಚಾಮರಾಜನಗರ: ಸೈನಿಕರು ದೇವರಿದ್ದಂತೆ. ರಾಷ್ಟ್ರದ ಭದ್ರತೆ, ಸುರಕ್ಷತೆ, ಸಂರಕ್ಷಣೆ ಸೈನಿಕರ ಮಹಾ ಕೊಡುಗೆ. ದೇಶದ ರಕ್ಷಣೆಯ ಮೂಲಕ ಗೌರವಕ್ಕೆ ಸದಾಕಾಲ ಪಾತ್ರವಾಗುವ ಸೈನಿಕರಿಗೆ ಸ್ಫೂರ್ತಿ ತುಂಬೋಣ ಎಂದು ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ,ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಅವರು ಜೈ ಹಿಂದ್ ಪ್ರತಿಷ್ಠಾನ, ಜಿಲ್ಲಾ ಯುವ ಸಂಘಟನೆಗಳ ಒಕ್ಕೂಟ, ಋಗ್ವೇದಿ ಯೂತ್ ಕ್ಲಬ್ ಜೈ ಹಿಂದ್ ಕಟ್ಟೆ ಯಲ್ಲಿ ಭಾರತೀಯ ನೌಕಾಪಡೆಯ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ 1971ರಲ್ಲಿ ಇಂಡಿಯಾ ಮತ್ತು ಪಾಕಿಸ್ತಾನದ ಯುದ್ಧ ನಡೆದಾಗ ಭಾರತೀಯ ನೌಕಾಪಡೆ ಪಾಕ್ ಸೇನೆಯನ್ನು ಸೋಲಿಸಿದ ಸ್ಮರಣೆ ಹಾಗುವೀರ ಮರಣ ಹೊಂದಿದ ಸೈನಿಕರ ಗೌರವಾರ್ಥ ಡಿಸೆಂಬರ್ 4 ಅನ್ನು ಪ್ರತಿ ವರ್ಷ ಭಾರತೀಯ ನೌಕಾಪಡೆಯ ದಿನವನ್ನಾಗಿ ಆಚರಿಸಲಾಗುತ್ತಿದೆ ಭಾರತೀಯ ನೌಕಾಪಡೆಯ ಶಕ್ತಿ ಇಡೀ ವಿಶ್ವದಲ್ಲಿ ಐದನೇ ಸ್ಥಾನ ದಲ್ಲಿರುವುದು ಹೆಮ್ಮೆಯ ವಿಷಯ. ಭಾರತದ ಮೂರು ದಿಕ್ಕುಗಳಲ್ಲೂ ಸಮುದ್ರ ತೀರವನ್ನು ಹೊಂದಿದ್ದು ,ದೇಶ ಮತ್ತು ವಿದೇಶಗಳ ಸಂಬಂಧ ವೃದ್ಧಿ ಹಾಗೂ ರಾಷ್ಟ್ರದ ಅಭಿವೃದ್ಧಿ ಸಂಕೇತವಾಗಿ ಇರುವ ನೌಕಾಪಡೆ ಸದಾ ಕಾಲ ಸಂರಕ್ಷಣೆಯ ಕಾರ್ಯವನ್ನು ನಿರ್ವಹಿಸುತ್ತಿದೆ. 11 ನೌಕಾನೆಲೆ ಕಾರ್ಯನಿರ್ವಹಿಸುತ್ತಿದ್ದು ದೇಶದ ಹೆಮ್ಮೆಯ ಐಎ□□□ಸ್ ವಿಕ್ರಮಾದಿತ್ಯ ,ಐ ಎನ್ ಎಸ್ ವಿಕ್ರಾಂತ್ ನೌಕೆಗಳು ರಾಷ್ಟ್ರಕ್ಕೆ ಮತ್ತಷ್ಟು ಗೌರವವನ್ನು ತಂದಿದೆ. ಯುವಕರು ದೇಶದ ರಕ್ಷಣೆಗೆ ಸುಭದ್ರತೆಗೆ ರಾಷ್ಟ್ರದ ಅಭಿವೃದ್ಧಿಗೆ ಕಾರ್ಯವನ್ನು ಮುಖ್ಯವಾಗಬೇಕು. ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಸೈನ್ಯಕ್ಕೆ ಸೇರುವ ಮೂಲಕ ರಾಷ್ಟ್ರದ ಋಣವನ್ನು ತೀರಿಸುವ ಕಾರ್ಯದಲ್ಲಿ ನಮ್ಮೆಲ್ಲರಿಗೂ ನೌಕಾಪಡೆಯ ದಿನ ಸ್ಫೂರ್ತಿಯಾಗಲಿ . ಭಾರತೀಯ ಇತಿಹಾಸದಲ್ಲಿ ನೌಕಾಪಡೆಯ ಪಿತಾಮಹರಾದ ಶಿವಾಜಿ ಮಹಾರಾಜರ ನೌಕಾ ಶಕ್ತಿ ಅಪಾರವಾಗಿತ್ತು .ಭಾರತದಲ್ಲಿ ನೌಕಾಪಡೆಯ ಇತಿಹಾಸ ಪ್ರಾಚೀನವಾದದ್ದುಎಂದು ಋಗ್ವೇದಿ ತಿಳಿಸಿದರು.



ಉಪನ್ಯಾಸಕ ಶಿವರಾಂ ಮಾತನಾಡಿ ಯುವ ಸಂಘಟನೆಗಳು ರಾಷ್ಟ್ರೀಯ ಕಾರ್ಯಕ್ರಮಗಳನ್ನು ರೂಪಿಸುತ್ತಿರುವುದು ಹಾಗೂ ನೌಕಾಪಡೆಯ ದಿನವನ್ನು ಆಚರಿಸುವ ಮೂಲಕ ದೇಶದ ನೌಕಾಪಡೆಯ ಪಾತ್ರ ಮತ್ತು ಮಹತ್ವವನ್ನು ಯುವಕರಿಗೆ ತಿಳಿಸುವ ಕಾರ್ಯ ಮಹತ್ತರವಾದದ್ದು ದೇಶದ ಸೈನ್ಯದ ವ್ಯವಸ್ಥೆ ವಿಶ್ವಕ್ಕೆ ಮಾದರಿಯಾದ ವ್ಯವಸ್ಥೆಯಾಗಿದೆ ದೇಶಭಕ್ತಿಯನ್ನು ಮೂಡಿಸಿಕೊಳ್ಳುವ ಮೂಲಕ ವಿಶೇಷ ದಿನಗಳ ಆಚರಣೆಯ ಮೂಲಕ ಸಂಭ್ರಮ ಪಡೋಣ ಎಂದು ತಿಳಿಸಿದರು.

ಜಿಲ್ಲಾ ಯುವ ಸಂಘಟನೆಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಸುರೇಶ್ ದೊಡ್ಡ ಮೋಳೆ ಮಾತನಾಡಿ ಯುವಕರಿಗೆ ಮಾರ್ಗದರ್ಶನದ ಅವಶ್ಯಕತೆ ಇದೆ. ಉತ್ತಮ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ದೇಶದ ಬಗ್ಗೆ ಅಭಿಮಾನವನ್ನು ಮೂಡಿಸಿಕೊಳ್ಳೋಣ. ರಾಷ್ಟ್ರವನ್ನು ಅಭಿವೃದ್ಧಿಯ ದಿಕ್ಕಿನಲ್ಲಿ ಕೊಂಡೊಯ್ಯುವ ಕಾರ್ಯವನ್ನು ಸದಾ ಕಾಲ ನಿರ್ವಹಿಸೋಣ ಎಂದರು.

ಸಲಹೆಗಾರರಾದ ಶಿವ ಸ್ವಾಮಿ, ಆನಂದ, ಕುಮಾರ, ಹಾಗೂ ಯುವಕರು ಉಪಸ್ಥಿತರಿದ್ದರು

# ಉಚಿತ ಆರೋಗ್ಯ ತಪಾಸಣಾ ಶಿಬಿರ

**ಮುಳಬಾಗಿಲು. :** ನಗರದ ತಾಲೂಕು ಪಂಚಾಯಿತಿ ಆವರಣದಲ್ಲಿ ಗ್ರಾಮ ಭಾರತಿ ಟ್ರಸ್ಟ್ , ವಂಶೋದಯ ಆಸ್ಪತ್ರೆ ಮತ್ತು ತಾಲೂಕು ಪಂಚಾಯತ್ ಮುಳಬಾಗಿಲು ಸಹಯೋಗದಲ್ಲಿ ವಿಶೇಷ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಶಿಬಿರಕ್ಕೆ ಚಾಲನೆ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಡಾಟಟ ಸರ್ವೇಶ ಗ್ರಾಮಸ್ಥರ ಕೋರಿಕೆಯಂತೆ ವಿಶೇಷ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿ ಸುತ್ತೇವೆ ಎಂದು ತಿಳಿಸಿದರು.

ತ್ಯಾಜ್ಯದಿಂದ ಗಾಳಿ, ನೀರು ಕಲುಷಿತವಾಗಿರುವ ಬಗ್ಗೆ ವರದಿ ಸಲ್ಲಿಸುವಂತೆ ಅಧಿ ಕಾರಿಗಳಿಗೆ ಸೂಚನೆ ನೀಡಲಾಗಿದೆ. ಗ್ರಾಮಗಳ ನೀರಿನ ಮಾದರಿ ಸಂಗ್ರಹಿಸಿ, ಬಳಕೆಗೆ ಯೋಗ್ಯವಿರುವ ಬಗ್ಗೆ ಪರೀಕ್ಷಿಸಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಗ್ರಾಮಸ್ಥರ ರಕ್ತದ ಮಾದರಿ ಸಂಗ್ರಹಿಸಿ ವಿಶೇಷ ಪರೀಕ್ಷೆಗೆ ಒಳಪಡಿಸುವಂತೆ ಹೇಳಿದರು. ಒಂದು ವೇಳೆ ಆರೋಗ್ಯ ಸಮಸ್ಯೆ ಗಂಭೀರವಾಗಿದ್ದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆ ನೀಡುವಂತೆಯೂ ಸೂಚಿಸಲಾಗಿದೆ. ಜನರು ಆರೋಗ್ಯ ಕಾಪಾಡಲು ತಾಲೂಕು ಪಂಚಾಯಿತಿ ಬದ್ಧವಾಗಿದೆ ಎಂದು ಹೇಳಿದರು.

ತಾಲೂಕು ಪಂಚಾಯಿತಿ ನರೇಗಾ ಸಹಾಯಕ ನಿರ್ದೇಶಕರು ರವಿಚಂದ್ರ ಮಾತನಾಡಿ, ಕೆಲವು ಗ್ರಾಮಗಳಲ್ಲಿ ಆರೋಗ್ಯ ತಪಾಸಣೆ ಇರುವ ಬಗ್ಗೆ ಮಾಹಿತಿ ನೀಡಿದರು.

ಕಾರಣಗಳನ್ನು ಕಂಡುಹಿಡಿದು ನಿಯಂತ್ರಣಕ್ಕೆ ಕ್ರಮ ವಹಿಸಲಾಗಿದೆ. ಗ್ರಾಮಗಳಿಗೆ ಶುದ್ಧ ನೀರು ಪೂರೈಸಲು ಯೋಜನೆ ರೂಪಿಸಲಾಗಿದೆ. ಸ್ವಚ್ಛ ಭಾರತ್ ಮಿಷನ್‌ನಡಿ ಮನೆ ಮನೆಯಿಂದ ಕಸ ಸಂಗ್ರಹಿಸಿ, ಪ್ಲಾಸ್ಟಿಕ್ ತೊಡೆದುಹಾಕಿ ಪರಿಸರ ಕಾಯ್ದುಕೊಳ್ಳುವುದು, ಶೌಚಾಲಯ ಬಳಸುವಂತೆ ಜಾಗೃತಿ ಮೂಡಿಸಲಾಗುವುದು. ಗ್ರಾಮಗಳಲ್ಲಿ ಗಾಳಿ, ನೀರಿನಿಂದ ಹರಡುವ ರೋಗ ತಡೆಗಟ್ಟಲು ಕ್ರಮ ಕೈಗೊಳ್ಳಲಾಗುವುದು ಎಂದು ಗ್ರಾಮ ಭಾರತಿ ಟ್ರಸ್ಟ್ ಅಧ್ಯಕ್ಷ ಎಂ.ಬಿ.ಕೃಷ್ಣಮೂರ್ತಿ ತಿಳಿಸಿದರು.

ತಾಲೂಕು ಪಂಚಾಯಿತಿ ಸಿಬ್ಬಂದಿ ವಂಶೋಧಯ ಆಸ್ಪತ್ರೆಯ ನಾಗೇಶ್ ಗೌಡ ಹಾಗೂ ಸಿಬ್ಬಂದಿ ಇದ್ದರು.




# ಗ್ರಾಮ ಅಭಿವೃದ್ಧಿಯಾದಲ್ಲಿ ರಾಜ್ಯ ಹಾಗೂ ದೇಶ ಅಭಿವೃದ್ಧಿಯಾಗುತ್ತದೆ



**ಶಿಡ್ಲಘಟ್ಟ :** ಗ್ರಾಮ ಅಭಿವೃದ್ಧಿಯಾದಲ್ಲಿ ರಾಜ್ಯ ಹಾಗು ದೇಶ ಅಭಿವೃದ್ಧಿಯಾಗುತ್ತದೆ ಹಾಗು ಪಕ್ಷ ಸಂಘಟನೆಗು ಮೂಲ ಬೇರು ಗ್ರಾಮಗಳು ಪ್ರತಿ ಮತವು ಅಮೂಲ್ಯವಾದ್ದರಿಂದ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ತಮ್ಮ ವಲಯದಲ್ಲಿ ಮತದಾರರೊಂದಿಗೆ ನಿಕಟ ಸಂಪರ್ಕ ಬೆಳೆಸಿ ಮತದಾನ ಮಾಡಲು ಮನವೊಲಿಸಬೇಕು ಎಂದು ಕೆಪಿಸಿಸಿ ಕೋ-ಆರ್ಡಿನೇಟರ್ ರಾಜೀವ್ ಗೌಡ ತಿಳಿಸಿದರು.

ತಾಲ್ಲೂಕಿನ ಮಳಮಾಚನಹಳ್ಳಿ,ಭಕ್ತರಹಳ್ಳಿ, ನಾಗಮಂಗಲ ಮತ್ತು ಹೊಸಪೇಟೆ ಗ್ರಾಮ ಪಂಚಾಯಿತಿಗಳಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗು ನಾಮಪತ್ರ ಸಲ್ಲಿಸಿರುವ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು. ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು, ಬಸವಣ್ಣನವರ ಆದರ್ಶಗಳು ಮತ್ತು ಅಂಬೇಡ್ಕರರ ಆಶಯಗಳನ್ನು ಉಳಿಸಿಕೊಂಡು ಜನರ ಮನಸ್ಸು ಗೆದ್ದಿವೆ ಈ ಸಾಧನೆಗಳನ್ನು ಜನರಿಗೆ ವಿವರಿಸುವ ಮೂಲಕ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಬೆಂಬಲಿತ ಸದಸ್ಯರನ್ನು ಗೆಲ್ಲಿಸಲು ಪಣತೊಡಬೇಕು ಎಂದು ಹೇಳಿದರು.

ಬಹುತೇಕ ಗ್ರಾಮ ಪಂಚಾಯತಿಗಳ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ಪಕ್ಷದೊಳಗೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ನಮ್ಮ ಬೆಂಬಲಿತ ಅಭ್ಯರ್ಥಿಗಳನ್ನು ಜಯಶೀಲರನ್ನಾಗಿಸುವುದು ನಮ್ಮ ಗುರಿಯಾಗಬೇಕು ಎಂದು ಮನವಿ ಮಾಡಿದರು.

ರಾಜ್ಯ ಸರ್ಕಾರದ ಗ್ಯಾರಂಟಿಗಳು, ಅಭಿವೃದ್ಧಿ ಕಾರ್ಯಕ್ರಮಗಳ ಯಶಸ್ಸನ್ನು ಮತದಾರರಿಗೆ ವಿವರಿಸಿ ಪ್ರಚಾರ ಮಾಡಬೇಕು ,ಗ್ರಾಮ ಪಂಚಾಯಿತಿಗಳಲ್ಲಿ ನಮ್ಮ ಬಲವನ್ನು ಹೆಚ್ಚಿಸುವ ಮೂಲಕ ಮುಂದಿನ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಚುನಾವಣೆಗೆ ತಯಾರಾಗೋಣ ಎಂದರು.

ಈ ಸಂದರ್ಭದಲ್ಲಿ ಕೋಚಿಮುಲ್ ಮಾಜಿ ಅಧ್ಯಕ್ಷ ಕೆ. ಗುಡಿಯಪ್ಪ, ಹಾಪ್ ಕಾಮ್ಸ್ ಮಾಜಿ ಅಧ್ಯಕ್ಷ ಮುನೇಗೌಡ,ಹೀರೆಬಲ್ಲಾ ರಾಜೀವ್ ಕುಮಾರ್, ಮಳಮಾಚನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬೈರೇಗೌಡ,ನಾಗಮಂಗಲ ಗ್ರಾಮ ಪಂಚಾಯಿತಿಯ ಮಾಜಿ

## ನಾಳೆ ನೂತನ ಶಾಲಾ ಕಟ್ಟಡ ಉದ್ಘಾಟನೆ

ಚಾಮರಾಜನಗರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಕೊಳ್ಳೇಗಾಲ ತಾಲೂಕಿನ ಸತ್ತೇಗಾಲ ಗ್ರಾಮದ ಲಕ್ಷ್ಮಮ್ಮ ಸೊಸಯ್ಯನ ಸಿದ್ದಯ್ಯ ಸರ್ಕಾರಿಹಿರಿಯ ಪ್ರಾಥಮಿಕ ಶಾಲೆಯ ನೂತನ ಶಾಲಾ ಕಟ್ಟಡದ ಉದ್ಘಾಟನಾಕಾರ್ಯಕ್ರಮ ಡಿಸೆಂಬರ್ 7 ರಂದು ಬೆಳಿಗ್ಗೆ 10 ಗಂಟೆಗೆ ಸತ್ತೇಗಾಲ ಗ್ರಾಮದಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಬೆಂಗಳೂರು ಮಹಾಬೋಧಿ ಸೊಸೈಟಿಯ ಪ್ರಧಾನ ಕಾರ್ಯದರ್ಶಿಗಳಾದಪೂಜ್ಯ ಬಿಕ್ಕು ಆನಂದ ಬಂತೇ ಅವರು ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸುವರು. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಉದ್ಘಾಟನೆನೆರವೇರಿಸುವರು.

ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್, ಮಧುಬಂಗಾರಪ್ಪ, ಡಾ. ಹೆಚ್.ಸಿ ಮಹದೇವಪ್ಪ ಅವರು ಉಪಸ್ಥಿತಿ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್, ಶಾಸಕರಾದ ಎಂ.ಆರ್. ಮಂಜುನಾಥ್, ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ್ ಪ್ರಸಾದ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಎಸ್. ಜಯಣ್ಣ, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಿ. ಮರಿಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಿ. ಚಂದ್ರು, ಸತ್ತೇಗಾಲ ಗ್ರಾ ಪಂ ಅಧ್ಯಕ್ಷ ಎಲ್. ಕೆಂಪರಾಜು, ಉಪಾಧ್ಯಕ್ಷರಾದ ಎಂ.ಎಸ್ ಸುವರ್ಣ, ಸತ್ತೇಗಾಲ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಜಿ. ಶಾಂತರಾಜು ಹಾಗೂ ಶಾಲಾ ಕಟ್ಟದ ಸಮಗ್ರ ಅಭಿವೃದ್ದಿಗೆ ಶ್ರಮಿಸಿದ ದಾನಿಗಳು ಹಾಗೂ ಸತ್ತೇಗಾಲದ ಗ್ರಾಮ ಅಭಿವೃದ್ಧಿ ಸಂಘದ ಅಧ್ಯಕ್ಷರು ಹಾಗೂ ನಿವೃತ್ತ ಪೊಲೀಸ್ ಮಹಾನಿರ್ದೇಶಕರಾದ ಎಸ್. ಮರಿಸ್ವಾಮಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಮಣ್ಣು ಪರೀಕ್ಷೆ; ಗುಣಮಟ್ಟದ ಬೆಳೆ ಬೆಳೆಯಲು ಸಾಧ್ಯ

ಮಾಲೂರು : ಪ್ರತಿಯೊಬ್ಬ ರೈತರು ಪ್ರತಿ ವರ್ಷಕ್ಕೊಮ್ಮೆ ಮಣ್ಣಿನ ಪರೀಕ್ಷೆ ಮಾಡಿಸಿ ನಂತರ ಬೆಳೆ ಬೆಳೆದಾಗ ಮಾತ್ರ ಉತ್ತಮ ಇಳಿವರಿ ಹಾಗೂ ಗುಣಮಟ್ಟದ ಬೆಳೆ ಬೆಳೆಯಲು ಸಾಧ್ಯ ಎಂದು ಕೃಷಿ ಸಹಾಯಕ ನಿರ್ದೇಶಕ ಮಂಜುನಾಥ್ ಹೇಳಿದರು.

ತಾಲ್ಲೂಕಿನಲ್ಲಿ ದೊಡ್ಡ ಶಿವಾರ ಗ್ರಾಮ ಪಂಚಾಯಿತಿ ಆವರಣದಲ್ಲಿ ಕೃಷಿ ಇಲಾಖೆ ಮತ್ತು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ವತಿಯಿಂದ ವಿಶ್ವ ಮಣ್ಣು ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬ ರೈತರು ಪ್ರತಿ ವರ್ಷಕ್ಕೊಮ್ಮೆ ತಮ್ಮ ಭೂಮಿಯಲ್ಲಿ ಮಣ್ಣಿನ ಪರೀಕ್ಷೆ ಮಾಡಿಸಿ ನಂತರ ಬೆಳೆ ಬೆಳೆಯಬೇಕು ರೈತರಿಗೆ ನಮ್ಮ ಇಲಾಖೆ ಯಿಂದ ಉಚಿತವಾಗಿ ಮಣ್ಣು ಪರೀಕ್ಷೆಯನ್ನು ಮಾಡಿಸಿ ಕೊಡುತ್ತಿದ್ದೇವೆ. ಇದರ ಪ್ರಯೋಜನವನ್ನು ಪ್ರತಿಯೊಬ್ಬ ರೈತರು ಪಡೆದುಕೊಂಡು ಗುಣಮಟ್ಟದ ಉತ್ತಮ ಇಳಿವರಿ ಬೆಳೆಗಳನ್ನು ಬೆಳದು ಆರ್ಥಿಕ ವಾಗಿಬೇಕು ಅಭಿವೃದ್ಧಿ ಹೊಂದುವಂತೆ ಹೇಳಿದರು.

ಶ್ರೀ ಧರ್ಮಸ್ಥಳ ಸಂಸ್ಥೆಯ ತಾಲ್ಲೂಕು ಕೃಷಿ ಅಧಿಕಾರಿ ಮಧುರಾಜ್ ಮಾತನಾಡಿ, ಅಂತರಾಷ್ಟ್ರೀಯ ಮಟ್ಟದಲ್ಲಿ 2013 ನೇ ಸಾಲಿನಲ್ಲಿ ಡಿಸೆಂಬರ್ 5ರಂದು ವಿಶ್ವ ಮಣ್ಣು ದಿನಾಚರಣೆ ಕಾರ್ಯಕ್ರಮವನ್ನು ಜಾರಿಗೆ ಬಂದಿದ್ದು, ಮಣ್ಣು ಭೂಮಿಯ ಮೇಲಿನ ಪದರವಾಗಿದ್ದು ಸಾವಯವ ಮತ್ತು ಅಜೈವಿಕ ವಸ್ತುಗಳ ಮಿಶ್ರಣವಾಗಿದ್ದು 80 ರಿಂದ 90 ಪರ್ಸೆಂಟ್ ನಮಗೆ ಬೇಕಾದ ಆಹಾರವನ್ನು ಭೂಮಿಯಿಂದ ಮಾತ್ರ ಬೆಳೆಯಲು ಸಾಧ್ಯವಾಗಿದೆ. ಆದಕಾರಣ ರೈತರು ಪ್ರತಿವರ್ಷಕೊಮ್ಮೆ ಮಣ್ಣು ಪರೀಕ್ಷೆ ಮಾಡಿಸಿ ಬೆಳೆಯನ್ನು ಬೆಳೆಯಬೇಕು ಹಾಗೂ ಅತಿ ಹೆಚ್ಚು ತೋಟಗಾರಿಕೆ ಬೆಳೆ ಮತ್ತು ಸಿರಿಧಾನ್ಯ ಬೆಳೆಯನ್ನು ಬೆಳೆದರೆ ನಮ್ಮ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು. ಧರ್ಮಸ್ಥಳ ಸಂಸ್ಥೆ ವತಿಯಿಂದ ಸಂಘದ ಸದಸ್ಯರಿಗೆ ಸಾಲ ಪಡೆದು ಹಣ್ಣಿನ ಗಿಡ ಗುಲಾಬಿ ಕೃಷಿ ಕನಕಾಂಬರ ರೋಟವೇಟರ್ ಕಲ್ಟಿವೇಟರ್ ಹಾಲು ಕರೆಯುವ ಯಂತ್ರ, ಮೇವು ಕಟ್ಟಾವು ಮಾಡುವ ಯಂತ್ರಗಳನ್ನು ಖರೀದಿ ಮಾಡಿದರೆ ಸಹಾಯಧನವಾಗಿ ರೂ.1,000 ದಿಂದ 5,000 ತನಕ ಸಿಗುತ್ತದೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ದೊಡ್ಡ ಶಿವಾರ ಗ್ರಾ.ಪಂ. ಅಧ್ಯಕ್ಷ ಮಂಜುನಾಥ್, ರೇಷ್ಮೆ ಇಲಾಖೆಯ ಅಧಿಕಾರಿ ರಾಘವೇಂದ್ರ, ಕೃಷಿ ಇಲಾಖೆಯ ಆತ್ಮ ಯೋಜನೆಯ ತಾಲೂಕು ವ್ಯವಸ್ಥಾಪಕ ನಾರಾಯಣಸ್ವಾಮಿ ಹಾಗೂ ರೈತರು ಭಾಗವಹಿಸಿದ್ದರು.



# ನಿರಂತರ ಓದು ಮತ್ತು ಪರಿಶ್ರಮವೇ ಯಶಸ್ಸಿನ ಮೆಟ್ಟಿಲು

ನಾಗಮಂಗಲ: ವಿದ್ಯಾರ್ಥಿಗಳು ನಿರಂತರ ಓದು ಮತ್ತು ಪರಿಶ್ರಮಗಳನ್ನು ಮೈಗೂಡಿಸಿಕೊಂಡರೆ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದು ಪಾಂಡವಪುರ ಉಪವಿಭಾಗಾಧಿಕಾರಿಗಳಾದ ಶ್ರೀ ಎ.ಆರ್. ಶ್ರೀನಿವಾಸ್ ರವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಾಗಮಂಗಲ ತಾಲೂಕು ದೇವಲಾಪುರ ಕರ್ನಾಟಕ ಪಬ್ಲಿಕ್ ಸ್ಕೂಲ್ , ದೇವಲಾಪುರದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಉಪನ್ಯಾಸ ನೀಡುತ್ತಾ ಮಾತನಾಡಿದರು.

ವಿದ್ಯಾರ್ಥಿಗಳು ದೊಡ್ಡ ಕನಸುಗಳನ್ನು ಕಾಣುತ್ತಲೇ ಅದನ್ನು ನನಸು ಮಾಡಿಕೊಳ್ಳಲು ನಿರಂತರ ಪರಿಶ್ರಮ ಪಡಬೇಕು ಎಂದರು. ನಮ್ಮಲ್ಲಿ ಛಲ, ಪ್ರತಿಭೆ , ಆತ್ಮವಿಶ್ವಾಸ ಮತ್ತು ಬದ್ಧತೆಗಳು ಇದ್ದಲ್ಲಿ ಜೀವನದಲ್ಲಿ ಅಸಾಧ್ಯವಾದುದು ಯಾವುದೂ ಇರುವುದಿಲ್ಲ ಎಂದರು. ತಮ್ಮ ವಿದ್ಯಾರ್ಥಿ ಜೀವನದ ಕ್ಷಣಗಳನ್ನು ಸ್ಮರಿಸಿಕೊಂಡು ಸದ್ಯದ ಹುದ್ದೆಯವರೆಗೂ ಸಾಗಿ ಬಂದ ಹಾದಿಯನ್ನು ಮಕ್ಕಳೊಂದಿಗೆ ಹಂಚಿಕೊಂಡು ಸ್ಫೂರ್ತಿ ತುಂಬಿದರು.



ಎಸ್.ಎಸ್.ಎಲ್.ಸಿ. ಪರೀಕ್ಷೆಗಳ ವೇಳಾಪಟ್ಟಿ ಈಗಾಗಲೇ ಪ್ರಕಟವಾಗಿದ್ದು ಸಕಾರಾತ್ಮಕ ಮನೋಧೋರಣೆ ಹಾಗೂ ಓದಿದ್ದನ್ನು ಪದೇ ಪದೇ ಮನನ ಮಾಡಿಕೊಂಡು ಪರೀಕ್ಷೆಯನ್ನು ಆತ್ಮವಿಶ್ವಾಸದಿಂದ ಎದುರಿಸಿ ತಂದೆ ತಾಯಿ , ಶಿಕ್ಷಕರು ಮತ್ತು ಗ್ರಾಮಸ್ಥರು ಹೆಮ್ಮೆ ಪಡುವಂತಹ ಸಾಧನೆ ಮಾಡಿ ಎಂದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ಶಾಲಾ ಕಲಿಕಾ ಪರಿಸರ ಹಾಗೂ ಮಕ್ಕಳ ಭಾಗವಹಿಸುವಿಕೆಯನ್ನು ಮುಕ್ತಕಂಠದಿಂದ ಶ್ಲಾಘಿಸಿ ದಾನಿಗಳ ನೆರವಿನಿಂದ ಈ ಶಾಲೆಯನ್ನು ಮತ್ತಷ್ಟು ಸಶಕ್ತಗೊಳಿಸುವ ಭರವಸೆ ನೀಡಿದರು.

ಮಕ್ಕಳೊಂದಿಗೆ ಸಂವಾದ ನಡೆಸಿ ಭವಿಷ್ಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ನಿದರ್ಶನಗಳೊಂದಿಗೆ ಅಗತ್ಯ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಶಾಲಾ ಮುಖ್ಯಸ್ಥರಾದ ಶಿವಕುಮಾರ್ ಎನ್.ಸಿ., ಶಿಕ್ಷಕರಾದ ಗಿರೀಶ್, ತೋಂಟಾರಾಧ್ಯ, ಇಂದ್ರೇಶ್, ಅಂದಾನಿಗೌಡ, ನವೀನ್, ಕಾಂತರಾಜು, ಶ್ಯಾಮಲಾ, ಸಮ್ಯ ಮತ್ತಿತರರು ಉಪಸ್ಥಿತರಿದ್ದರು.

## ಸುದ್ದಿ ಸಂಜೆ

### ಚಂದ್ರ ಹಾಸನ್ ಮತ್ತು ಮನೋಜ್ ಕುಮಾರ್‌ಗೆ ಚಿನ್ನದ ಪದಕ




**ಮುಳಬಾಗಿಲು :** ತಾಲೂಕಿನ 10ನೇ ಓಪನ್ ನ್ಯಾಷನಲ್ ಸ್ಕೂಲ್ ಸ್ಪೋರ್ಟ್ಸ್ ಚಾಂಪಿಯನ್ ಶಿಪ್ 2024 ಗೋವಾದಲ್ಲಿ ನಡೆದ ಬ್ಯಾಡ್ಮಿಂಟನ್ ಮೊದಲನೇ ಗೋಲ್ಡ ಮೆಡಲ್ ಪದಕವನ್ನು ಮುಳಬಾಗಿಲು ತಾಲ್ಲೂಕಿನ ಕನ್ನಸಂದ್ರದ ಕೆ.ವಿ. ನಾಗರಾಜ್ ರವರ ಮಗ ಕೆ.ಎನ್.ಕಾರ್ತೀಕ್ ಮುಳಬಾಗಿಲು ತಾಲೂಕಿನ ಚಂದ್ರ ಹಾಸನ್ ಮತ್ತು ಮನೋಜ್ ಕುಮಾರ್ ಗೋಲ್ಡ್ ಪದಕಗಳನ್ನು ಜಯಗಳಿಸಿದ್ದಾರೆ ಮತ್ತು ನೇಪಾಳದಲ್ಲಿ ನಡೆಯುವ ಅಂತರ ರಾಷ್ಟ್ರೀಯ ಬ್ಯಾಡ್ಮಿಂಟನ್ ಗೆ ಕೆ ಎನ್ ಕಾರ್ತಿಕ್. ಚಂದ್ರ ಹಾಸನ್. ಮನೋಜ್ ಕುಮಾರ್ ಆಯ್ಕೆಯಾಗಿದ್ದಾರೆ ಎಂದು ಕನ್ನಸಂದ್ರ ಗ್ರಾಮದ ತಾಲೂಕು ಎಸ್ ಡಿ ಎಂ ಸಿ ಕಾರ್ಯದರ್ಶಿಗಳಾದ ಮುನಿಕೃಷ್ಣ ತಿಳಿಸಿದರು.

### ವಿವಿಧ ಕಳ್ಳತನ ಪ್ರಕರಣ ಬೇಧಿಸಿದ ಪೊಲೀಸರು.



ಕುಕನೂರು : ಯಲಬುರ್ಗಾ ಸರ್ಕಲ್ ವ್ಯಾಪ್ತಿಯಲ್ಲಿ ನಡೆದ ವಿವಿಧ ಕಳ್ಳತನ ಪ್ರಕರಣಗಳನ್ನು ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಬೇಧಿಸಿದ್ದು ಕಳ್ಳತನ ಮಾಡಿದ ಆರೋಪಿಗಳನ್ನು, ವಸ್ತುಗಳನ್ನು ವಶಕ್ಕೆ ಪಡೆದುಕೊಂಡು ನ್ಯಾಯಾಲಯಕ್ಕೆ ಒಪ್ಪಿಸಿದ್ದಾರೆ. ಕೊಪ್ಪಳ ಜಿಲ್ಲೆಯ ಯಲಬುರ್ಗಾ ವೃತ್ತ ವ್ಯಾಪ್ತಿಯ ಒಟ್ಟು 6 ಕಳ್ಳತನ ಪ್ರಕರಣಗಳಿಂದ 6 ಜನ ಅಪಾದಿತರನ್ನು ಪತ್ತೆ ಮಾಡಿ ಅವರಿಂದ ಸುಮಾರು 4 ಲಕ್ಷ 70 ಸಾವಿರ ನಗದು, 3.15 ಲಕ್ಷ ರೂ ಮೌಲ್ಯದ ಟ್ರಾಲಿ, ಕೃತ್ಯಕ್ಕೆ ಬಳಸಿದ ಎರಡು ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ, ಉತ್ತಮ ಪತ್ತೆ ಕಾರ್ಯ ಮಾಡಿದ ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳಿಗೆ ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್ ಎಲ್ ಅರಸಿದ್ಧಿ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಕೊಪ್ಪಳ ಹೆಚ್ಚುವರಿ ಎಸ್ ಪಿ ಹೇಮಂತ್ ಕುಮಾರ್, ಡಿ ಎಸ್ ಪಿ ಮುತ್ತಣ್ಣ ಸವರಗೋಲ್ ಮಾರ್ಗದರ್ಶನ, ಯಲಬುರ್ಗಾ ವೃತ್ತ ಪೊಲೀಸ್ ಅಧಿಕಾರಿ ಮೌನೇಶ್ ಮಾಲಿ ಪಾಟೀಲ್ ನೇತೃತ್ವದಲ್ಲಿ ಪಿಎಸ್‌ಐಗಳಾದ ವಿಜಯ್ ಪ್ರತಾಪ್, ಗುಲಾಂ ಅಹ್ಮದ್, ಟಿ ಗುರುರಾಜ್, ಶ್ರೀಕಾಂತ್, ಮತ್ತು ಸಿಬ್ಬಂದಿಗಳನ್ನು ಒಳಗೊಂಡ ತನಿಖಾ ತಂಡಕ್ಕೆ ಪ್ರಶಂಸೆ ವ್ಯಕ್ತವಾಗಿದೆ.

### ನಾಳೆ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಕಟ್ಟಡದ ಶಂಕುಸ್ಥಾಪನೆ

**ಚಾಮರಾಜನಗರ:** ಆರೋಗ್ಯ ಮತ್ತುಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ಯಳಂದೂರು ತಾಲೂಕು ಸಾರ್ವಜನಿಕ ಆಸ್ಪತ್ರೆಯ 100 ಹಾಸಿಗೆಗಳ ಕಟ್ಟಡದ ಶಂಕುಸ್ಥಾಪನೆ ಕಾರ್ಯಕ್ರಮ ಡಿಸೆಂಬರ್ 7 ರಂದು ಮಧ್ಯಾಹ್ನ 3ಗಂಟೆಗೆ ಯಳಂದೂರು ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ನೆರವೇರಲಿದೆ.ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಶಂಕುಸ್ಥಾಪನೆ ನೆರವೇರಿಸುವರು. ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಘನ ಉಪಸ್ಥಿತಿ ವಹಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಅವರು ಉದ್ಘಾಟನೆ ನೆರವೇರಿಸುವರು. ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ ಮಹದೇವಪ್ಪ ಉಪಸ್ಥಿತರಿರುವರು. ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್, ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾದ ಎಸ್. ಜಯಣ್ಣ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ.ಚಂದ್ರು, ಯಳಂದೂರು ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಎಸ್. ಲಕ್ಷ್ಮಿ ಮಲ್ಲು, ಸದಸ್ಯರಾದ ಮಹೇಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ಸಿನಿಮಾ ಮುಸ್ಸಂಜೆ

# ಲಂಗ ದಾವಣಿಯಲ್ಲಿ ಕಾಣಿಸಿಕೊಂಡ ಮೇಘಾಶೆಟ್ಟಿ



ಜೊತೆ ಜೊತೆಯಲಿ ಧಾರಾವಾಹಿಯಲ್ಲಿ ಅನುಸಿರಿಮನೆ ಪಾತ್ರದ ಮೂಲಕ ಕರ್ನಾಟಕದ ಮೂಲೆ ಮೂಲೆಗೂ ತಲುಪಿ, ಜನಪ್ರಿಯತೆ ಪಡೆದ ನಟಿ ಮೇಘಾ ಶೆಟ್ಟಿ . ಇವರು ನಟಿಸಿದ ಮೊದಲ್ ಸೀರಿಯಲ್ ಸೂಪರ್ ಹಿಟ್.

ಮೊದಲ ಸೀರಿಯಲ್ ಹಿಟ್ ಆಗಿದ್ದೇ ತಡ, ನಟಿ ಕಿರುತೆರೆಗೆ ಗುಡ್ ಬೈ ಹೇಳಿ, ಸದ್ಯ ಹಿರಿತೆರೆಯಲ್ಲಿ ಬ್ಯುಸಿಯಾಗಿದ್ದಾರೆ. ಇದರ ಜೊತೆ ಜೊತೆಗೆ ಕನ್ನಡದ ಕೆಲವು ಸೀರಿಯಲ್ ಗಳ ನಿರ್ಮಾಣ ಕೂಡ ಮಾಡ್ತಿದ್ದಾರೆ ಬೆಡಗಿ.

ಸೋಶಿಯಲ್ ಮೀಡೀಯಾದಲ್ಲಿ ಆಕ್ಟೀವ್ ಆಗಿರುವ ನಟಿ ಮೇಘಾ ಶೆಟ್ಟಿ, ಹೆಚ್ಚಾಗಿ ತಮ್ಮ ಹೊಸ ಹೊಸ ಫೋಟೊ ಶೂಟ್ ಮೂಲಕ ಕಾಣಿಸಿಕೊಳ್ಳುತ್ತಿರುತ್ತಾರೆ, ಜೊತೆಗೆ ತಮ್ಮ ಸಿನಿಮಾಗಳ ಬಗ್ಗೆ ಅಪ್ ಡೇಟ್ ಕೂಡ ಕೊಡುತ್ತಿರುತ್ತಾರೆ.

ಇದೀಗ ನಟಿ ಸಿಂಪಲ್ ಆಗಿ ಲಂಗ ದಾವಣಿಯಲ್ಲಿ ಕಾಣಿಸಿಕೊಂಡಿದ್ದಾರೆ. ಗ್ರೇ ಬಣ್ಣದ ಫ್ಲೋರಲ್ ಲಂಗ, ಮರೂನ್ ಬಣ್ಣದ ಬ್ಲೌಸ್, ಕಪ್ಪು ಬಣ್ಣದ ದಾವಣಿ ಧರಿಸಿ, ಕುತ್ತಿಗೆಯಲ್ಲೊಂದು ಕಪ್ಪು ದಾರ, ಕೈಯಲ್ಲಿ ಗಾಜಿನ ಬಳೆ ಧರಿಸಿ, ಗ್ರಾಮದ ಹುಡುಗಿಯಂತೆ ಕಾಣಿಸಿಕೊಂಡಿದ್ದಾರೆ.

ತಮ್ಮ ಫೋಟೊಗಳ ಜೊತೆಗೆ ನಟಿ 'ನಿಮ್ಮ ಪಕ್ಕದ ಮನೆ ಹುಡುಗಿ' ಎಂದು ಕ್ಯಾಪ್ಶನ್ ಹಾಕಿದ್ದಾರೆ, ಇದನ್ನ ಮೆಚ್ಚಿಕೊಂಡಿರುವ ಅಭಿಮಾನಿಗಳು ನಮ್ಮ ಮುದ್ದು ಮೇಘ ಸುಂದರಿ. ನಮ್ಮ ಬೆಳದಿಂಗಳ ಚೆಲುವೆ. ನಿಮ್ಮ ಅಂದವ ಹೊಗಳಲು ಪದ ಪುಂಜ ಸಾಲದು, ಪಕ್ಕದಮನೆ ಹುಡುಗಿ ಅಲ್ಲ, ನಮ್ಮ ಮನೆಯ ಒಡತಿ ಎಂದು ಕೂಡ ಹಾಡಿ ಹೊಗಳಿದ್ದಾರೆ.

ಇನ್ನು ಮೇಘಾ ಶೆಟ್ಟಿ ಸಿನಿ ಜರ್ನಿ ಬಗ್ಗೆ ಹೇಳೊದಾದ್ರೆ ಗೋಲ್ಡನ್ ಸ್ಟಾರ್ ಗಣೇಶ್ ನಟನೆಯ 'ತ್ರಿಬಲ್ ರೈಡಿಂಗ್' ಚಿತ್ರದ ಮೂಲಕ ಚಂದನವನಕ್ಕೆ ಎಂಟ್ರಿ ಕೊಟ್ಟು, ನಂತರ ಡಾರ್ಲಿಂಗ್ ಕೃಷ್ಣ ಜೊತೆ ದಿಲ್ ಪಸಂದ್ ಬಳಿಕ ಕೈವಾ ಸಿನಿಮಾದಲ್ಲೂ ನಟಿಸಿದ್ದರು.

ಮೇಘಾ ಶೆಟ್ಟಿ, ಸದ್ಯ ವಿನಯ್ ರಾಜ್‌ಕುಮಾರ್ ಅಭಿನಯದ ಗ್ರಾಮಾಯಣ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಅಷ್ಟೇ ಅಲ್ಲದೇ ಆಫ್ಟರ್ ಆಪರೇಶನ್ ಲಂಡನ್ ಕೆಫೆ, ಚೀತಾ ಸಿನಿಮಾಗಳಲ್ಲೂ ಮೇಘಾ ಶೆಟ್ಟಿ ನಾಯಕಿಯಾಗಿ ನಟಿಸುತ್ತಿದ್ದಾರೆ. ಈ ಸಿನಿಮಾಗಳು ಯಾವಾಗ ಬಿಡುಗಡೆಯಾಗುತ್ತವೆ ಎನ್ನುವ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ



## ಸುದೀಪ್‌ಗೆ ಪ್ರಿನ್ಸಿಪಾಲರ ಪತ್ರ!

ಕನ್ನಡದ ಸ್ಟಾರ್ ನಟ ಕಿಚ್ಚ ಸುದೀಪ್ ಅವರು ಸದ್ಯ ಬಿಗ್ ಬಾಸ್ ಕನ್ನಡ ಸೀಸನ್ 11 ಹೋಸ್ಟ್ ಮಾಡುತ್ತಿರುವುದು ಗೊತ್ತೇ ಇದೆ. ಇದೀಗ, ಅವರ ನಟನೆಯ ಮುಂಬರುವ ಮ್ಯಾಕ್ಸ್ ಚಿತ್ರವು ಈ ತಿಂಗಳು 25ರಂದು ಬಿಡುಗಡೆಗೆ ಸಜ್ಜಾಗಿದೆ. ಈ ನಡುವೆ ನಟ ಸುದೀಪ್ ಮಾತನಾಡಿರುವ ಹಳೆಯ ವೀಡಿಯೋಗಳು ಸೋಷಿಯಲ್ ಮೀಡಿಯಾಗಳಲ್ಲಿ ಸಖತ್ ವೈರಲ್ ಆಗುತ್ತಿವೆ. ಅವು ಸಾಕಷ್ಟು ವ್ಯೂಸ್, ಲೈಕ್ಸ್ ಹಾಗೂ ಕಾಮೆಂಟ್ಸ್ ಪಡೆಯುತ್ತವೆ. ಕಾರಣ, ನಟ ಸುದೀಪ್ ಅವರ ಮ್ಯಾಗ್ನೆಟಿಕ್ ವ್ಯಕ್ತಿತ್ವ ಅನ್ನಬಹುದು.

ಹೌದು, ನಟ ಸುದೀಪ್ ಅವರದು ಬಹುಮುಖ ಪ್ರತಿಭೆ ವ್ಯಕ್ತಿತ್ವ. ಜೊತೆಗೆ, ಅವರು ತಮಗೆ ಜೀವನದಲ್ಲಿ ಆಗಿರುವ ಅನುಭವಗಳ ಮೂಲಕ ತಮ್ಮದೇ ಆದ ರೀತಿಯಲ್ಲಿ 'ಲೈಫ್ ಲೆಸನ್' ತರ ಮಾತನಾಡುತ್ತಿರುತ್ತಾರೆ. ಕೆಲವೊಮ್ಮೆ ಸಂದರ್ಶನಗಳಲ್ಲಿ ಪ್ರಶ್ನೆಗೆ ಉತ್ತರ ರೂಪದಲ್ಲಿ, ಇನ್ನೂ ಕೆಲವೊಮ್ಮೆ ಎಲ್ಲೋ ವೇದಿಕೆಗಳಲ್ಲಿ ಜೀವನ, ಜೀವನ ಪಾಠ, ತಮ್ಮ ಬಗ್ಗೆ, ಬೇರೆಯವರ ಬಗ್ಗೆ ಅಭಿಪ್ರಾಯ, ಅನಿಸಿಕೆಗಳನ್ನು ಹಂಚಿಕೊಳ್ಳುತ್ತ ಇರುತ್ತಾರೆ. ಅಂತಹದೇ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಕಿಚ್ಚ ಸುದೀಪ್ ಅವರು ಕನ್ನಡದ 'ಬಿಗ್ ಬಾಸ್ ಸೀಸನ್ 11' ನಡೆಸಿಕೊಡುತ್ತಿರುವುದು ಬಹುತೇಕರಿಗೆ ಗೊತ್ತು. ಅದರಲ್ಲೂ ಮುಖ್ಯವಾಗಿ ಶನಿವಾರ ಹಾಗೂ ಭಾನುವಾರದ ಕಿಚ್ಚನ ಪಂಚಾಯಿತಿಗೆ ಹೆಚ್ಚಿನ ಡಿಮ್ಯಾಂಡ್ ಹಾಗು ಟಿಆರ್‌ಪಿ ಇದೆ. ಮೊದಲಿನಿಂದಲೂ ಅಷ್ಟೇ, ಕೊನೆಯಲ್ಲಿ ಬಿಗ್ ಬಾಸ್ ವಿನ್ನರ್ ಯಾರ್ ಆಗ್ತಾರೆ ಅನ್ನೋದನ್ನ ಬಿಟ್ಟರೆ, ಶನಿವಾರ ಹಾಗೂ ಭಾನುವಾರ ಮೂಡಿ ಬರುವ ಸುದೀಪ್ ಸಂಚಿಕೆ ನೋಡಲಷ್ಟೇ ಜನರು ಮುಗಿಬೀಳುತ್ತಾರೆ. ಇದು ಎಲ್ಲಾ ಸೀಸನ್‌ಗಳಲ್ಲೂ ಕಂಡುಬಂದಿರುವ ಸತ್ಯ ಸಂಗತಿ. ಇನ್ನು ಸುದೀಪ್ ಬಿಗ್ ಬಾಸ್ ನಿರೂಪಣೆ ಮೆಚ್ಚಿ ಶಾಲೆಯ ಪ್ರಿನ್ಸಿಪಾಲರೊಬ್ಬರು ಪತ್ರ ಬರೆದಿದ್ದು, ಅದೀಗ ಸೋಷಿಯಲ್ ಮೀಡಿಯಾಗಳಲ್ಲಿ ವೈರಲ್ ಆಗಿದೆ.

ಸುದೀಪ್ ಬಿಗ್ ಬಾಸ್ ಹೋಸ್ಟಿಂಗ್ ಮೆಚ್ಚಿ ಪ್ರಿನ್ಸಿಪಾಲ್ ಅವರು 'ಸುದೀಪ್ ಸರ್, 10 ವರ್ಷಗಳಿಂದ ನಾನು ಬಿಗ್ ಬಾಸ್ ಶೋ ನೋಡುತ್ತಿದ್ದೇನೆ. ಅದೂ ಕೂಡ ನಿಮಗಾಗಿ, ಶನಿವಾರ ಹಾಗೂ ರವಿವಾರದ ಶೋ ನೋಡುತ್ತಿದ್ದೇನೆ. 59 ವರ್ಷದ ನನ್ನದೇ ಶಾಲೆಯ ಪ್ರಿನ್ಸಿಪಾಲ್ ಆಗಿರವ ನಾನು ನಮ್ಮ ಮೀಟಿಂಗ್‌ಗಳಲ್ಲಿ ಅದೆಷ್ಟೋ ಸಾರಿ ಕಠಿಣವಾಗಿ (ಖಠಣಾರು) ಮಾತನಾಡಿಬಿಡುತ್ತಿದ್ದೆ, ಆಮೇಲೆ ಬೇಜಾರು ಮಾಡ್ಕೊತಾ ಇದ್ದೆ. ಆದರೆ, ನಿಮ್ಮ ಬಿಗ್ ಬಾಸ್ ನಿರೂಪಣೆಯಲ್ಲಿ ನಿಮ್ಮ ಕಮ್ಯುನಿಕೇಶನ್ ಕಲೆ, ವಿಷಯಗಳನ್ನು ಹ್ಯಾಂಡಲ್ ಮಾಡುವ ರೀತಿ, ಉಪಯೋಗಿಸುವ ಶಬ್ಧಗಳು, ನಿಮ್ಮ ವಿಭಿನ್ನ ಹಾಗೂ ಉತ್ತಮ ಕೌಶಲ್ಯ ಎಲ್ಲವನ್ನೂ ನೋಡಿ ತುಂಬಾ ಕಲಿತಿದ್ದೇನೆ.

ಈಗ ನಾನು ದೊಡ್ಡದೊಡ್ಡ ಮೀಟಿಂಗ್ ಮಾಡುವಾಗ ನನ್ನ ಮನದಲ್ಲಿ ನೀವು ಇರುತ್ತೀರಿ. ಯೋಚ್ನೆ ಮಾಡ್ತೀನಿ, ಮಾತಾಡ್ತೀನಿ.. ತುಂಬಾ ಮೇಚ್ಯೂರ್ಡ್ ಆಗಿದೀನಿ.. ನನ್ನ ಪ್ರೊಫೆಶನ್ ವಿಷಯದಲ್ಲಿ ನನಗೆ ನೀವು ರೋಲ್ ಮಾಡೆಲ್. ಮುಂದಿನ ಸೀಸನ್‌ನಿಂದ ಬಿಗ್ ಬಾಸ್ ನೋಡಲ್ಲ, ನಿಮ್ಮ ಸ್ಥಾನದಲ್ಲಿ ನಾನು ಬೇರೊಬ್ಬರನ್ನು ನೋಡಲು ಅಸಾಧ್ಯ. ಆದರೆ ನಾನು ನಿಮ್ಮ ನಿರ್ಧಾರವನ್ನು ಗೌರವಿಸುತ್ತೇನೆ' ಎಂದು ಕಿಚ್ಚ ಸುದೀಪ್ ಅವರಿಗೆ ಪತ್ರ ಬರೆದು ಪೋಸ್ಟ್ ಮಾಡಿದ್ದಾರೆ. ಈ ಪತ್ರದ ಪೋಸ್ಟ್ ಈಗ ಸಖತ್ ವೈರಲ್ ಆಗುತ್ತಿದೆ.

ಅಂದಹಾಗೆ, ನಟ ಕಿಚ್ಚ ಸುದೀಪ್ ಅವರು ಸದ್ಯ ಬಿಗ್ ಬಾಸ್ ಕನ್ನಡ ಸೀಸನ್ 11 ಶೋ ನಡೆಸಿಕೊಡುತ್ತಿದ್ದಾರೆ. ಅದು ಈಗಾಗಲೇ ಎಂಟು ವಾರಗಳನ್ನು ದಾಟಿ ಮುನ್ನಡೆಯುತ್ತಿದ್ದು, 'ಮುಂದಿನ ಸೀಸನ್ ನಾನು ಹೋಸ್ಟ್ ಮಾಡೋದಿಲ್ಲ, ಇದೇ ನನ್ನ ಲಾಸ್ಟ್ ಬಿಗ್ ಬಾಸ್ ಹೋಸ್ಟಿಂಗ್' ಎಂದಿದ್ದಾರೆ ಸುದೀಪ್. ಸುದೀಪ್ ನಟನೆಯ 'ಮ್ಯಾಕ್ಸ್' ಚಿತ್ರವು ಈ ವರ್ಷ, ಡಿಸೆಂಬರ್ 25ರಂದು ಬಿಡುಗಡೆ ಆಗಲಿದೆ. ಮ್ಯಾಕ್ಸ್ ಚಿತ್ರದಲ್ಲಿ ವರಲಕ್ಷ್ಮೀ ಶರತ್‌ಕುಮಾರ್ ಅವರು ಕಿಚ್ಚ ಸುದೀಪ್ ಅವರಿಗೆ ನಾಯಕಿ.





## ಯಾವ ಕವಿಯೂ ಬರೆಯದ ಕವಿತೆ ನೀನಾಗು

ಕನ್ನಡ ಸೀರಿಯಲ್ ಹಾಗೂ ಬಿಗ್ ಬಾಸ್ ಮೂಲಕ ಮಿಂಚಿದ ನಟಿ ನಮ್ರತಾ ಗೌಡ ಸೋಶಿಯಲ್ ಮೀಡಿಯಾದಲ್ಲಿ ತುಂಬಾನೆ ಆಕ್ಟೀವ್. ನಟಿ ತಮ್ಮ ಫೋಟೊಗಳ ಮೂಲಕವೇ ಸದ್ದು ಮಾಡುತ್ತಿರುತ್ತಾರೆ.

ಬಾಲ ನಟಿಯಾಗಿ ಕನ್ನಡ ಕಿರುತೆರೆಯಲ್ಲಿ ಮಿಂಚಿದ ನಮ್ರತಾ ಗೌಡ, ಪುಟ್ಟ ಗೌರಿಯ ಮದುವೆಯಲ್ಲಿ ಎರಡನೇ ನಾಯಕಿಯಾಗಿದ್ದರು. ಅದಾದ ಬಳಿಕ ನಾಗಿಣಿ 2 ಸೀರಿಯಲ್ ನಲ್ಲಿ ನಾಗಿಣಿಯ ರೂಪ ತಾಳಿ ಮನರಂಜಿಸಿದ್ದರು.

ನಮ್ರತಾ ಗೌಡಗೆ ಹೆಚ್ಚು ಜನಪ್ರಿಯತೆ ತಂದು ಕೊಟ್ಟದ್ದು ಅಂದ್ರೆ ಅದು ಬಿಗ್ ಬಾಸ್ ಸೀಸನ್ 10. ಆರಂಭದಲ್ಲಿ ಹೇಟ್ ಕಾಮೆಂಟ್ ಗಳನ್ನೇ ಪಡೆದಿದ್ದ ನಟಿಯನ್ನು, ಕೊನೆ ಕೊನೆಗೆ ಎಲ್ಲರೂ ಇಷ್ಟಪಡುತ್ತಾ ಬಂದರು.

ಬಿಗ್ ಬಾಸ್ ನಿಂದ ಹೊರ ಬಂದ ಮೇಲೆ ನಟಿ ಒಂದಷ್ಟು ಜಾಹೀರಾತುಗಳಲ್ಲಿ ಕಾಣಿಸಿಕೊಂಡಿದ್ದಾರೆ. ಆದರೆ ಅಭಿಮಾನಿಗಳು ಕಾಯುತ್ತಿದ್ದಂತೆ, ಯಾವುದೇ ಸೀರಿಯಲ್ ಆಗಲಿ, ಸಿನಿಮಾಗಳಲ್ಲಿ ನಟಿಸಿಲ್ಲ. ಇತ್ತೀಚೆಗೆ ನಟಿ ತಮ್ಮ ಫೋಟೊಗಳನ್ನು ದುರ್ಬಳಕೆ ಮಾಡಿಕೊಂಡು, ರೇಟ್ ಫಿಕ್ಸ್ ಮಾಡಿ ಹಣ ಮಾಡುತ್ತಿರುವ ಜಾಲಗಳ ಬಗ್ಗೆ ಹಾಗೂ ಜನರಿಗೆ ತಮ್ಮ ಮೇಲೆ ಮೂಡಿದ ಕೆಟ್ಟ ಅಭಿಪ್ರಾಯದ ಬಗ್ಗೆಯೂ ಮಾತನಾಡಿ ಸುದ್ದಿಯಾಗಿದ್ದರು.

ಇದೀಗ ನಟಿ ತಮ್ಮ ಸೋಶಿಯಲ್ ಮೀಡಿಯಾದಲ್ಲಿ ಹೊಸದಾಗಿ ಬಿಳಿ ಸೀರೆಯುಟ್ಟು ಫೋಟೊ ಶೂಟ್ ಮಾಡಿ ಶೇರ್ ಮಾಡಿದ್ದು, ನೆಟೆಡ್ ಸೀರೆಯಲ್ಲಿ ನಟಿ ದೇವಲೋಕದ ಅಪ್ಸರೆಯಂತೆ ಕಾಣಿಸ್ತಿದ್ದಾರೆ.

ನಟಿ ನಮ್ರತಾ ಗೌಡ ತಮ್ಮ ಫೋಟೊಗಳ ಜೊತೆಗೆ ಯಾವ ಕವಿಯೂ ಬರೆಯದ ಕವನ ನೀನಾಗು ಎಂದು ಬರೆದುಕೊಂಡಿದ್ದಾರೆ. ನಟಿಯ ಫೋಟೊಗಳಿಗೆ ಸಿಕ್ಕಾಪಟ್ಟೆ ಕಾಮೆಂಟ್ಸ್, ಲೈಕ್ಸ್ ಬಂದಿದೆ. ಅಭಿಮಾನಿಗಳಂತೂ ಬಿಳಿ ಸೀರೆಯಲ್ಲಿ ನಟಿಯ ಸೌಂದರ್ಯಕ್ಕೆ ಮನ ಸೋತಿದ್ದಾರೆ.

## ಬಹುಭಾಷಾ ಸಿನಿಮಾ ದಿ ಪ್ರೈಡ್ ಆಫ್ ಭಾರತ್: ಛತ್ರಪತಿ ಶಿವಾಜಿ ಮಹಾರಾಜ್

ರಾಷ್ಟ್ರಪ್ರಶಸ್ತಿ ವಿಜೇತ ನಟ ಮತ್ತು ನಿರ್ದೇಶಕ ರಿಷಬ್ ಶೆಟ್ಟಿ ಹಾಗೂ ಖ್ಯಾತ ನಿರ್ದೇಶಕ ಸಂದೀಪ್ ಸಿಂಗ್ ಜೊತೆಯಾಗಿ ಭಾರತ ದೇಶ ಕಂಡ ಮಹಾವೀರ ರಾಜ ಛತ್ರಪತಿ ಶಿವಾಜಿ ಕತೆಯನ್ನೊಳಗೊಂಡ ಮ್ಯಾಗ್ನಸ್ ಓಪನ್ ಆಕ್ಷನ್ ಡ್ರಾಮಾ "ದಿ ಪ್ರೈಡ್ ಆಫ್ ಭಾರತ್: ಛತ್ರಪತಿ ಶಿವಾಜಿ ಮಹಾರಾಜ್" ಸಿನಿಮಾ ಮಾಡುತ್ತಿದ್ದಾರೆ.

ಕಾಂತಾರ ಸಿನಿಮಾದಿಂದ ರಾಷ್ಟ್ರಾದ್ಯಂತ ಜನಪ್ರೀತಿ ಗಳಿಸಿರುವ ರಿಷಬ್ ಶೆಟ್ಟಿ ಅವರು ಮೂರು ಮೆಗಾ ಸಿನಿಮಾಗಳಲ್ಲಿ ನಟಿಸುತ್ತಿರುವ ಏಕೈಕ ನಟ ಎಂಬ ಖ್ಯಾತಿಗೆ ಒಳಗಾಗಿದ್ದಾರೆ. 2025ರಲ್ಲಿ ಅವರ ನಟನೆ ನಿರ್ದೇಶನದ ಕಾಂತಾರ ಅಧ್ಯಾಯ 1, 2026ರಲ್ಲಿ ಅವರು ನಟಿಸುತ್ತಿರುವ ಜೈ ಹನುಮಾನ್ ಮತ್ತು 2027ರಲ್ಲಿ ದ ಪ್ರೈಡ್ ಆಫ್ ಭಾರತ್: ಛತ್ರಪತಿ ಶಿವಾಜಿ ಮಹಾರಾಜ್ ಬಿಡುಗಡೆಯಾಗಲಿದೆ. ಲಾರ್ಜರ್ ದ್ಯಾನ್ ಲೈಫ್ ಕತೆಗಳನ್ನು ಹೇಳುವ ಈ ಆಕರ್ಷಕ ಸಿನಿಮಾಗಳ ಮೂಲಕ ರಿಷಬ್ ಶೆಟ್ಟಿ ಭಾರತೀಯ ಸಿನಿಮಾದ ಮಹತ್ವದ ಶಕ್ತಿಯಾಗಿ ಬೆಳೆಯಲಿದ್ದಾರೆ.



ಇನ್ನು ಸಂದೀಪ್ ಸಿಂಗಿ ವಿಚಾರಕ್ಕೆ ಬಂದರೆ ಅವರು ಮೇರಿ ಕೋಮ್, ಸರಬ್ಜಿತ್, ವೀರ್ ಸಾವರ್ಕರ್, ರಾಮಲೀಲಾ, ಸರಬ್ಜಿತ್, ಬಾಜಿರಾವ್ ಮಸ್ತಾನಿ ಸಿನಿಮಾಗಳ ಹಿಂದಿನ ಶಕ್ತಿಯಾಗಿ ಕೆಲಸ ಮಾಡಿದ್ದಾರೆ. ಕಿರುಚಿತ್ರ ಸಫೇದ್ ಅನ್ನು ನಿರ್ದೇಶಿಸಿದ್ದಾರೆ. ಅಂಥಾ ಪ್ರತಿಭಾವಂತ ಇದೀಗ ಈ ಐತಿಹಾಸಿಕ ಮಹಾಕಾವ್ಯವನ್ನು ನಿರ್ದೇಶಿಸಲಿದ್ದಾರೆ. ರಿಷಬ್ ಶೆಟ್ಟಿ ಅವರು ಹಲವು ಪೀಳಿಗೆಗಳಿಗೆ ಸ್ಫೂರ್ತಿಯಾದ ಮಹಾಯೋಧ ಮಹಾರಾಜನ ಪಾತ್ರಕ್ಕೆ ಜೀವ ತುಂಬಲಿದ್ದಾರೆ.

ಈ ಸಿನಿವಮಾ ಅದ್ಭುತ ವಿಎ□□□ಕ್ಸ್ ದೃಶ್ಯಾವಳಿಗಳನ್ನು ಹೊಂದಿರಲಿದ್ದು, ಆ ಕಾಲದ ಅತ್ಯಪೂರ್ವ ದೃಶ್ಯಗಳನ್ನು ತೆರೆಮೇಲೆ ಕಾಣಿಸಲಿದೆ. ಪ್ರಪಂಚದಾದ್ಯಂತದ ಇರುವ ಉನ್ನತ ದರ್ಜೆಯ ತಂತ್ರಜ್ಞರು ಈ ಸಿನಿಮಾಗೆ ಕೆಲಸ ಮಾಡಲಿದ್ದಾರೆ. ಎಲ್ಲಾ ಶ್ರೇಷ್ಠ ಸಿನಿಮಾ ವ್ಯಾಮೋಹಿಗಳು ಸೇರಿಕೊಂಡು ಮೊಘಲ್ ಆಕ್ರಮಣಕಾರರನ್ನು ಮಂಡಿ ಮೇಲೆ ಕೂರಿಸಿದ, ಇತಿಹಾಸವನ್ನು ಮರುರೂಪಿಸಿದ ಭಾರತದ ಶ್ರೇಷ್ಠ ರಾಜನ ಕತೆಯನ್ನು ಹೇಳಲಿದ್ದಾರೆ.

ಈ ಕುರಿತು ಮಾತನಾಡಿದ ಸಂದೀಪ್ ಸಿಂಗ್ ಅವರು, "ಛತ್ರಪತಿ ಶಿವಾಜಿ ಪಾತ್ರಕ್ಕೆ ನನ್ನ ಮೊದಲ ಮತ್ತು ಏಕೈಕ ಆಯ್ಕೆ ರಿಷಬ್ ಶೆಟ್ಟಿ ಆಗಿದ್ದರು. ಅವರು ನಿಛತ್ರಪತಿ ಶಿವಾಜಿ ಮಹಾರಾಜರ ಶಕ್ತಿ, ಚೈತನ್ಯ ಮತ್ತು ಶೌರ್ಯವನ್ನು ತೆರೆಯ ಮೇಲೆ ಸಾಕಾರಗೊಳಿಸಲಿದ್ದಾರೆ. ಈ ಸಿನಿಮಾ ನನ್ನ ಹಲವು ವರ್ಷಗಳ ಕನಸು. ಇದೀಗ ಈ ಕತೆಯನ್ನು ತೆರೆಯ ಮೇಲೆ ತರುತ್ತಿರುವುದು ನನಗೆ ದೊರೆತಿರುವ ಗೌರವ ಎಂದು ಭಾವಿಸುತ್ತೇನೆ. ದೊಡ್ಡ ಮಟ್ಟದಲ್ಲಿ, ಹಿಂದೆಂದೂ ಕಂಡಿರದ ರೀತಿಯಲ್ಲಿ, ಅತ್ಯಪೂರ್ವ ಆಕ್ಷನ್ ಕೊರಿಯೋಗ್ರಫಿಯೊಂದಿಗೆ ಈ ಸಿನಿಮಾವನ್ನು ತೆರೆ ಮೇಲೆ ತರಲಾಗುವುದು. ಈ ಸಿನಿಮಾ ಭಾರತೀಯ ಚಿತ್ರರಂಗವನ್ನು ನಿಜಕ್ಕೂ ಜಾಗತಿಕ ಮಟ್ಟಕ್ಕೆ ತಲುಪಿಸಲು ನೆರವಾಗುವಂತೆ ಮೂಡಿಬರಲಿದೆ" ಎಂದು ಹೇಳಿದರು.

2027ರ ಜನವರಿ 21 ರಂದು ಬಹುಭಾಷೆಯಲ್ಲಿ "ದಿ ಪ್ರೈಡ್ ಆಫ್ ಭಾರತ್: ಛತ್ರಪತಿ ಶಿವಾಜಿ ಮಹಾರಾಜ್" ಸಿನಿಮಾ ಜಾಗತಿಕವಾಗಿ ಬಿಡುಗಡೆಯಾಗಲಿದೆ. ಆ ಮೂಲಕ ಹೊಸ ಇತಿಹಾಸ ಬರೆಯಲಿದೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-17 Email-mussanje2010@gmail.com, Phone: 9448074878